ಸಂಪುಟ: 01 VOLUVE 01 | ಸಂಚಿಕೆ: 50 ISSUE: 50 | ಪುಟ: 06 PAGE: 06 | ಮಂಗಳವಾರ 01-09-2026 TUESDAY 01-09-2026
VD
REG-PRGI NO KNKAN/26/A5239 ಮೋ: 9880010077
vkbharath25@gmail.com

# ವಿಜಯ ದುಂಬಿ

VIJAYA DUMBI KANNADA DAILY
ವಿಶ್ವಾಸದ ಕನ್ನಡಿ
ಕನ್ನಡ ದಿನಪತ್ರಿಕೆ
Rs.3/-

2 ರೈತರ ಮಕ್ಕಳೆಂದು ಹೇಳಿಕೊಳ್ಳುವವರ ಜಮೀನುಗಳೂ ಬೆಂಗಳೂರಿನ ಸುತ್ತಮುತ್ತ ಇವೆ : ಡಿಕೆಶಿ
4 ವಿರಿಂಚಿ ಆರ್ಟ್ ಗ್ಯಾಲರಿಯಲ್ಲಿ ಕಲಾವಿದ ಪ್ರಕಾಶ್ ಆನೆಗುಂದಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ
6 ಪೋಷಕರೇ ಎಚ್ಚರ : ರಾಜ್ಯದಲ್ಲಿ ಮಕ್ಕಳಲ್ಲಿ ಹೆಚ್ಚುತ್ತಿದೆ ಕಾಲು-ಬಾಯಿ ಬೇನೆ ಸೋಂಕು

## ಗ್ರಾ.ಪಂ ಅಹವಾಲು ದಾಖಲಿಸಲು ಆನ್ ಲೈನ್ ವ್ಯವಸ್ಥೆ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಗ್ರಾಮ ಪಂಚಾಯತಿ ಸೇವೆಗಳಿಗೆ ಸಂಬಂಧಿಸಿದಂತೆ ತಮ್ಮ ಅಹವಾಲುಗಳನ್ನು ದಾಖಲಿಸಲು ಗ್ರಾಮೀಣರಿಗೆ ಅನುವಾಗುವಂತೆ ಡ್ಯಾಷ್ ಬೋರ್ಡ್ ಆಧಾರಿತ 'ದೂರು ದಾಖಲು- ಇತ್ಯರ್ಥಕ್ಕೆ ಆನ್ ಲೈನ್ ವ್ಯವಸ್ಥೆ' ರೂಪಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಪ್ರವಾಸಮಾರ್ಗದರ್ಶಿ ಖರೀದಿಸಿ**



ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಇ-ಸ್ವತ್ತು, ತೆರಿಗೆ ನಿರ್ಧರಣೆ, ಸಾಮಾಜಿಕ ಅರಣ್ಯೀಕರಣ, ಗ್ರಾ.ಪಂ.ವ್ಯಾಪ್ತಿಯ ಕೆರೆ ನಿರ್ವಹಣೆ, ಕೆರೆ ಒತ್ತುವರಿ, ಜೆಜೆಎಂ, ಕುಡಿಯುವ ನೀರಿನ ಸಮಸ್ಯೆ, ನೈರ್ಮಲ್ಯ, ಗ್ರಾಮೀಣ ರಸ್ತೆ, ವಿಬಿಜಿ ರಾಮ್ ಜಿ, ಗ್ರಾಮೀಣ ಆಸ್ತಿಗಳ ಸೃಜನೆ ಸೇ-ರಿದಂತೆ ಯಾವುದೇ ಅಹವಾಲನ್ನು ಗ್ರಾಮೀಣರು ದಾಖಲಿಸಲು ಮತ್ತು ಅದಕ್ಕೆ ತಕ್ಷಣ ಸ್ಪಂದಿಸಲು ಈ ವ್ಯವಸ್ಥೆ ರೂಪಿಸಲು ನಿರ್ದೇಶನ ನೀಡಿದ್ದಾರೆ.

ರಾಜ್ಯದ ಸುಮಾರು ಅರ್ಧದಷ್ಟು ಜನಸಂಖ್ಯೆಯೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ನೇರ ಸಂಪರ್ಕ ಹೊಂದಿದ್ದು, ಗ್ರಾಮೀಣರ ಕುಂದುಕೊರತೆಗೆ ಸ್ಪಂದಿಸುವುದು ಇಲಾಖೆಯ ಜವಾಬ್ದಾರಿಯಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ಇಲಾಖೆಯಲ್ಲಿ ಪಾರದರ್ಶಕತೆ ತರಲು, ಕೇಂದ್ರ ಹಾಗೂ ರಾಜ್ಯ ಪ್ರಾಯೋಜಿತ ಯೋಜನೆ ಕಾಮಗಾರಿಗಳಲ್ಲಿನ ಲೋಪದೋಷ, ಮೂಲಸೌಕರ್ಯ ಗುಣಮಟ್ಟ ಕೊರತೆ, ಗ್ರಾ.ಪಂ. ಒದಗಿಸುವ ವಿವಿಧ ಸೇವೆಗಳಲ್ಲಿನ ವಿಳಂಬ, ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಸಚಿವಾಲಯಕ್ಕೆ ದೂರುಗಳು ಬರುತ್ತಿದ್ದು, ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದೆ ಎಂದು ತಿಳಿಸಿದ್ದಾರೆ. ಸಾರ್ವಜನಿಕರು, ಗ್ರಾಮೀಣರು ಈ ಸಂಬಂಧ ವಿಡಿಯೋ ಮತ್ತು ಫೋಟೋ ಸಹಿತ ದೂರು ದಾಖಲಿಸಲು ಮತ್ತು ಈ ದೂ-ರಿಗೆ ಸಂಬಂಧಿಸಿದಂತೆ ಕ್ರಮ ವಹಿಸುವ ಅಧಿಕಾರಿಯ ದೂರವಾಣಿ,

## ನಶಾಮುಕ್ತ ಯುವಜನತೆಯಿಂದಲೇ ವಿಕಸಿತ ಭಾರತ ಸಾಧ್ಯ

# ಮೋದಿ 'ಮನ್ ಕಿ ಬಾತ್' ಹೈಲೈಟ್ಸ್

**ನವದೆಹಲಿ: ದೇಶವು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಪ್ರಗತಿ ಸಾಧಿಸಿ ವಿಕಸಿತ ಭಾರತವಾಗಿ ರೂಪುಗೊಳ್ಳಬೇಕಾದರೆ ಯುವಜನತೆ ಮಾದಕ ವಸ್ತುಗಳ ಪಿಡುಗಿನಿಂದ ಸಂಪೂರ್ಣವಾಗಿ ಮುಕ್ತರಾಗಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.**

ತಮ್ಮ ಮಾಸಿಕ ರೇಡಿಯೊ ಕಾರ್ಯಕ್ರಮ 'ಮನ್ ಕಿ ಬಾತ್'ನ 137ನೇ ಸಂಚಿಕೆಯಲ್ಲಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ದೇಶದ ಭವಿಷ್ಯವನ್ನು ಸುರಕ್ಷಿತವಾಗಿರಿಸುವುದು ಸರ್ಕಾರದ ಪ್ರಮುಖ ಸಂಕಲ್ಪಗಳಲ್ಲಿ ಒಂದಾಗಿದೆ ಎಂದು ಹೇಳಿದರು.

ವಿಕಸಿತ ಭಾರತಕ್ಕಾಗಿ ಸರ್ಕಾರ ನಡೆಸುತ್ತಿರುವ 'ನಶಾ ಮುಕ್ತ ಯುವ ಅಭಿಯಾನ'ವನ್ನು ಶ್ಲಾಘಿಸಿದ ಮೋದಿ, ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಈ ಜಾಗೃತಿ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಮಾದಕ ವ್ಯಸನವು ವ್ಯಕ್ತಿಯ ಆರೋಗ್ಯವನ್ನು ಮಾತ್ರವಲ್ಲದೆ ಇಡೀ ಕುಟುಂಬ ಹಾಗೂ ಸಮಾಜವನ್ನೇ



ನಾಶಪಡಿಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು. ವಿವಿಧ ಭಾಷೆಗಳಲ್ಲಿ ಮಾದಕ ವ್ಯಸನದ ವಿರುದ್ಧ ಜಾಗೃತಿ ಮೂಡಿಸುವ ಸಂದೇಶಗಳನ್ನು ಹರಡಲು ವಿಷಯ ರಚನೆಕಾರರಿಗೆ (ಕಂಟೆಂಟ್ ಕ್ರಿಯೇಟರ್) ಪ್ರಧಾನಿ ವಿಶೇಷ ಕರೆ ನೀಡಿದರು. ಯುವಜನರಿಗೆ ಮಾದಕ ವಸ್ತುಗಳ ಅಪಾಯದ ಕುರಿತು ಅರಿವು ಮೂಡಿಸುವಲ್ಲಿ ಸಾಮಾಜಿಕ ಮಾಧ್ಯಮದ ವಿಷಯ ರಚನೆಕಾರರು, ಶಿಕ್ಷಕರು, ಪೋಷಕರು, ಕಲಾವಿದರು ಹಾಗೂ ಸ್ವಯಂಸೇವಾ ಸಂಘಟನೆಗಳು ಪ್ರಮುಖ ಪಾತ್ರ ವಹಿಸಬೇಕು ಎಂದರು.

ಹಾಡುಗಳು, ಘೋಷಣೆಗಳು, ಕಿರುಚಿತ್ರಗಳು ಹಾಗೂ ಬೀದಿ ನಾಟಕಗಳ ಮೂಲಕ ವಿವಿಧ ಭಾರತೀಯ ಭಾಷೆಗಳಲ್ಲಿ ಮಾದಕ ವ್ಯಸನದ ವಿರುದ್ಧ ಜಾಗೃತಿ ಸಂದೇಶವನ್ನು ಜನರಿಗೆ ತಲುಪಿಸುವ ಅಗತ್ಯವಿದೆ ಎಂದು ಅವರು ಹೇಳಿದರು. ವ್ಯಸನದ ವಿರುದ್ಧ ಹೋರಾಡುತ್ತಿರುವವರು ಹಾಗೂ ವ್ಯಸನದಿಂದ ಹೊರಬರಲು ಪ್ರಯತ್ನಿಸುತ್ತಿರುವವ-ರಿಗೆ ನೆರವಾಗುವವರನ್ನು ಮೋದಿ ಶ್ಲಾಘಿಸಿದರು.

ಆಗಸ್ಟ್ ತಿಂಗಳ ದೇಶಭಕ್ತಿ ಆಗಸ್ಟ್ ತಿಂಗಳು ಭಾರತೀಯರಲ್ಲಿ ವಿಶೇಷ ದೇಶಭಕ್ತಿಯ ಭಾವನೆಯನ್ನು ಮೂಡಿಸುತ್ತದೆ ಎಂದು ಹೇಳಿದ ಪ್ರಧಾನಿ ಮೋದಿ, ರಾಷ್ಟ್ರೀಯ ಕೈಮಗ್ಗ ದಿನ, ಸ್ವಾತಂತ್ರ್ಯ ದಿನ, ರಾಷ್ಟ್ರೀಯ ಬಾಹ್ಯಾಕಾಶ ದಿನ, ಕ್ವಿಟ್ ಇಂಡಿಂ-ಯಾ ಚಳವಳಿ ಹಾಗೂ ವಿಭಜನೆಯ ಭೀಕರ ಸ್ಮರಣಾ ದಿನದ ಮಹತ್ವವನ್ನು ವಿವರಿಸಿದರು. ಈ ವರ್ಷ 'ವಂದೇ ಮಾತರಂ' ಗೀತೆಯ 150ನೇ ವಾರ್ಷಿಕೋತ್ಸವ ಆಚರಿಸಲಾಗುತ್ತಿರುವುದು ಸ್ವಾತಂತ್ರ್ಯೋತ್ಸವದ ವಿಶೇಷತೆಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದರು. 'ಹರ್ ಘರ್ ತಿರಂಗಾ' ಅಭಿಯಾನದ ಜತೆಗೆ 'ಸೂರ್ಯಪಥ ತಿರಂಗ' ಉಪಕ್ರಮದ ಮೂಲಕ ಭಾರತದ ತ್ರಿವರ್ಣ ಧ್ವಜವು ಜಾಗತಿಕ ಮಟ್ಟದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿದೆ ಎಂದು ಹೆಮ್ಮೆಯಿಂದ ಹೇಳಿದರು.

35 ಲಕ್ಷಕ್ಕೂ ಅಧಿಕ ಮಹಿಳೆಯ-ರಿಗೆ ಸ್ವಾನಿಧಿ ಯೋಜನೆ ಪ್ರಯೋಜನ ಪ್ರಧಾನಮಂತ್ರಿ ಸ್ವಾನಿಧಿ ಯೋಜನೆಯಡಿ ದೇಶಾದ್ಯಂತ ಇದುವರೆಗೆ 35 ಲಕ್ಷಕ್ಕೂ ಅಧಿಕ ಮಹಿಳೆಯರು ಪ್ರಯೋಜನ ಪಡೆದು ತಮ್ಮ ಸ್ವಂತ ವ್ಯವಹಾರವನ್ನು ವಿಸ್ತರಿಸಿಕೊಂಡಿದ್ದಾರೆ ಎಂದು ಮೋದಿ ತಿಳಿಸಿದರು. ಮಹಿಳೆಯರ ಆರ್ಥಿಕ ಪ್ರಗತಿಯು ಇಡೀ ಕುಟುಂಬದ ಉನ್ನತಿಗೆ ಬುನಾದಿಯಾಗುತ್ತದೆ ಎಂದು ಹೇಳಿದರು.

ಸ್ವಚ್ಛತೆಗೆ ಯುವಕರ ಕೊಡುಗೆ ಉತ್ತರ ಪ್ರದೇಶದ 'ಕ್ಲೀನ್-ಅಪ್ ಪಟ್ವಾಯಿ' ಮಾದರಿಯಲ್ಲಿ ಯುವಕರು ಕೆರೆಗಳು ಹಾಗೂ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸುತ್ತಿರುವುದನ್ನು ಪ್ರಧಾನಿ ಶ್ಲಾಘಿಸಿದರು. ಶ್ರೀ ಅಮರನಾಥ ಯಾತ್ರೆಯ ಸಂದರ್ಭದಲ್ಲಿಯೂ ಸ್ವಚ್ಛತೆಗೆ ಆದ್ಯತೆ ನೀಡಲಾಗುತ್ತಿದೆ ಎಂದು ಅವರು ಹೇಳಿದರು. ಯಾತ್ರೆಯಲ್ಲಿ ಬಳಸಿದ ಕುದುರೆ ಹಾಗೂ ಹೇಸರಗತ್ತೆಗಳ ಸಗಣಿಯನ್ನು ಜೈವಿಕ ಅನಿಲವಾಗಿ ಪರಿವರ್ತಿಸಿ, ಅದರಿಂದ ಉತ್ಪಾದನೆಯಾಗುವ ಶುದ್ಧ ಶಕ್ತಿಯ ಮೂಲಕ 'ಸ್ವಚ್ಛ ಜ್ಯೋತಿ' ಬೆಳಗಿಸಿರುವುದು ಪರಿಸರ ಸಂರಕ್ಷಣೆಗೆ ಉತ್ತಮ ಉದಾಹರಣೆಯಾಗಿದೆ ಎಂದು ಮೋದಿ ಬಣ್ಣಿಸಿದರು.

## ದೇಶದಲ್ಲೇ ಅಲ್ಲೋಲಕಲ್ಲೋಲವಾಗುವಂತಹ ವಿಚಾರ ಬಹಿರಂಗಪಡಿಸುತ್ತೇನೆ : ಹೆಚ್ಡಿಕೆ ಬಾಂಬ್

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಅಮೆರಿಕ ಪ್ರವಾಸ ಮುಗಿಸಿ ಮರಳಿದ ಬಳಿಕ ದೇಶದಲ್ಲೇ ಅಲ್ಲೋಲಕಲ್ಲೋಲವಾಗುವ ವಿಚಾರವನ್ನು ಮಾಧ್ಯಮಗಳ ಮುಂದೆ ಬಹಿರಂಗಪಡಿಸುವುದಾಗಿ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಎಂಥೆಂಥವರು ಅಧಿಕಾರ ನಡೆಸುತ್ತಿದ್ದಾರೆ ಎಂಬುದನ್ನು ಬಹಿರಂಗಪಡಿಸುತ್ತೇನೆ. ನನ್ನ ವಿಚಾರದಲ್ಲಿ ದಾಖಲೆಗಳಿದ್ದರೆ ಚರ್ಚೆ ಮಾಡಲಿ. ನಾನು ಯಾವುದೇ ಬೇನಾಮಿ ವ್ಯಾಪಾರ ಮಾಡಿಲ್ಲ" ಎಂದು ಹೇಳಿದರು.**

ಸೆಪ್ಟೆಂಬರ್ 2ರ ರಾತ್ರಿ ಅಮೆರಿಕ



ಪ್ರವಾಸಕ್ಕೆ ತೆರಳಲಿದ್ದು, ಸೆಪ್ಟೆಂಬರ್ 12ರಂದು ವಾಪಸ್ ಆಗುವುದಾಗಿ ತಿಳಿಸಿದರು. 'ಅಕ್ಕ' ಸಂಘಟನೆಯ ರಜತ ಮಹೋತ್ಸವ ಕಾರ್ಯಕ್ರಮಕ್ಕೆ ಒತ್ತಾಯಪೂರ್ವಕವಾಗಿ ಆಹ್ವಾನ ನೀಡಿದ್ದು, ಇಷ್ಟವಿಲ್ಲದಿದ್ದರೂ ಅವರ ಅಕ್ಕರೆಯ ಒತ್ತಾಯಕ್ಕೆ ಮಣಿದು ಕಾರ್ಯಕ್ರಮಕ್ಕೆ ತೆರಳುತ್ತಿದ್ದೇನೆ ಎಂದರು.

ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳಿಗೆ ಸಂಬಂಧಿಸಿದಂತೆ ದಾಖಲಾಗಿರುವ ಪ್ರಕರಣಗಳನ್ನು ಹಿಂಪಡೆಯಲು ಸಚಿವ ಸಂಪುಟದ ಉಪಸಮಿತಿ ರಚಿಸಲಾಗಿದೆಯೇ? ಆ ಸಮಿತಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನೇ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆಯೇ? ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

1984ರಲ್ಲಿ ತಾವು ಖರೀದಿಸಿದ್ದ ಜಮೀನಿನ ವಿಚಾರದಲ್ಲಿ ಈಗ ತೊಂದರೆ ನೀಡಲಾಗುತ್ತಿದೆ ಎಂದು ಆರೋಪಿಸಿದ ಅವರು, ಒಬ್ಬ ಅಧಿಕಾರಿ ಕಾನೂನುಬಾಹಿರವಾಗಿ ಕಾರ್ಯನಿರ್ವಹಿಸಿ ತಮ್ಮ ವಿರುದ್ಧ ಬಳಸಿರುವ ಪದಗಳ ಕುರಿತೂ ಪ್ರಕರಣವಿದೆ ಎಂದು ಹೇಳಿದರು.

ಶಾಂತಿನಗರ ಹೌಸಿಂಗ್ ಸೊಸೈಟಿ ಸೇರಿದಂತೆ ಕೆಲವು ಸೊಸೈಟಿಗಳಲ್ಲಿ ನಡೆದಿರುವ ಬೆಳವಣಿಗೆಗಳು, ನೈಸ್ ರಸ್ತೆ ವಿಚಾರದಲ್ಲಿ ಭಾಗಿಯಾಗಿರುವವರು ಹಾಗೂ ಉದ್ಯಾನವನಗಳಲ್ಲಿ ಶೇ.5ರಷ್ಟು ಜಮೀನನ್ನು ಪರಭಾರೆ ಮಾಡಲು ಉದ್ದೇಶಿಸಿರುವ ಸರ್ಕಾರದ ಕ್ರಮದ ವಿರುದ್ಧ ನಡೆಯುವ ಹೋರಾಟಕ್ಕೆ ತಮ್ಮ ಪಕ್ಷದ ಬೆಂಬಲವಿದೆ ಎಂದು ಕುಮಾರಸ್ವಾಮಿ ತಿಳಿಸಿದರು.

## ಕೆಪಿಎಸ್‌ಸಿ ಹಗರಣದಲ್ಲಿ ನನ್ನ ಪಾತ್ರ ಸಾಬೀತಾದರೆ ರಾಜಕೀಯ ನಿವೃತ್ತಿ: ಪ್ರಿಯಾಂಕ್ ಖರ್ಗೆ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಕೆಪಿಎಸ್‌ಸಿ ನೇಮಕಾತಿ ಹಗರಣದಲ್ಲಿ ತಮ್ಮ ನೇರ ಅಥವಾ ಪರೋಕ್ಷ ಪಾತ್ರ ಸಾಬೀತಾದರೆ ರಾಜ-ಕೀಯ ನಿವೃತ್ತಿ ಪಡೆಯುವುದಾಗಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದ್ದಾರೆ. ಇದೇ ವೇಳೆ, ಹಗರಣದಲ್ಲಿ ಜೆಡಿಎಸ್ ಅಥವಾ ಬಿಜೆಪಿಯವರ ಪಾತ್ರ ಸಾಬೀತಾದರೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ರಾಜಕೀಯ ನಿವೃತ್ತಿ ಪಡೆಯುತ್ತಾರೆಯೇ ಎಂದು ಪ್ರಶ್ನಿಸಿದ್ದಾರೆ.**

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ 24 ಸಹಾಯಕ ಎಂಜಿನಿಯರ್‌ಗಳ ನೇಮಕಾತಿ ವಿಚಾರದಲ್ಲಿ ಕಳೆದ ಮೂರ್ನಾಲ್ಕು ದಿನಗಳಿಂದ ಕುಮಾರಸ್ವಾಮಿ ಅವರು ಯಾವುದೇ ದಾಖಲೆ ಅಥವಾ ಆಧ-ಾರಗಳಿಲ್ಲದೆ 'ಹಿಟ್ ಅಂಡ್ ರನ್' ಆರೋಪ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಓಎಂಆರ್ ಶೀಟ್ ತಿದ್ದುಪಡಿ ವಿಚಾರದಲ್ಲಿ ತಮ್ಮ ವಿರುದ್ಧ ಆರೋಪ ಮಾಡಲಾಗುತ್ತಿದೆ.

ಓಎಂಆರ್ ಶೀಟ್‌ಗಳು ಸಚಿವರು ಅಥವಾ ಸರ್ಕಾರದ ಇಲಾಖಾ ಕಾರ್ಯದರ್ಶಿಗಳ ಅಧೀನದಲ್ಲಿರುತ್ತವೆಯೇ ಎಂಬುದು ಮಾಜಿ ಮುಖ್ಯಮಂತ್ರಿಗೆ ಗೊತ್ತಿಲ್ಲವೇ ಕೆಪಿಎಸ್‌ಸಿಯ ಅಧೀನದಲ್ಲಿರುವ ಓಎಂಆರ್ ಶೀಟ್‌ಗಳಲ್ಲಿ ಅಕ್ರಮ ನಡೆದಿದ್ದರೆ ಅದಕ್ಕೆ ಸಚಿವರು ಹೇಗೆ ಹೊಣೆಯಾಗುತ್ತಾರೆ ಎಂದು ಪ್ರಶ್ನಿಸಿದರು. ಕುಮಾರಸ್ವಾಮಿ ಅವರು ಎಂಜಿನಿಯರ್‌ಗಳ ನೇಮಕಾತಿಯಲ್ಲಿ ನಡೆದಿರುವ ಲೋಪಗಳೇನು ಎಂಬುದನ್ನು ದಾಖಲೆಗಳ ಸಹಿತ



ಹೇಳದೆ ಮನಸೋಇಚ್ಛೆ ಆಧಾರರಹಿತ ಆರೋಪ ಮಾಡುತ್ತಿದ್ದಾರೆ. ಕೇಂದ್ರ ಸಚಿವರ ಘನತೆಗೆ ಇದು ತಕ್ಕದ್ದಲ್ಲ. ನಮಗೂ ಮಾತನಾಡಲು ಬರುತ್ತದೆ.

ರಾಜಕೀಯವಾಗಿ ದೊಡ್ಡ ಇತಿಹಾಸವಿರುವ ಕುಟುಂಬದ ಹಿನ್ನೆಲೆಯಿದ್ದಾರೆ ಎಂಬ ಕಾರಣ-ಕ್ಕೆ ನಾವು ಸುಮ್ಮನಿದ್ದೇವೆ ಎಂದು ತಿರುಗೇಟು ನೀಡಿದರು. ಸರ್ಕಾರಿ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸುವುದು, ಪರೀಕ್ಷೆ ನಡೆಸುವುದು, ತಾತ್ಕಾಲಿಕ ಹಾಗೂ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸುವುದು ಸೇರಿದಂತೆ ಎಲ್ಲ ಪ್ರಕ್ರಿಯೆಗಳನ್ನು ಕೆಪಿಎಸ್‌ಸಿಯೇ ನಿರ್ವಹಿಸುತ್ತದೆ ಎಂದು ಸ್ಪಷ್ಟಪಡಿಸಿದರು. ಈ ಹಿಂದೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದಾಗ ಆನಂದ ಸಿದ್ದರೆಡ್ಡಿ ಎಂಬುವರು ಆಕ್ಷೇಪಣೆ ಸಲ್ಲಿಸಿದ್ದರು. ಈ ಕುರಿತು ತನಿಖೆ ನಡೆಸಲು ಕೆಪಿಎಸ್‌ಸಿ ಡಾ. ಶಾಂತ ಹೊಸಮನಿ, ಗೀತಾ ಹಾಗೂ ಮುಸ್ತಾಫ ಹುಸೈನ್ ಅವರನ್ನೊಳಗೊಂಡ ಮೂರು ಸದಸ್ಯರ ಸಮಿತಿ ರಚಿಸಿತ್ತು. ಉಪ ಸಮಿತಿಯ ತನಿಖೆ ನಡೆಯುತ್ತಿರುವಾಗಲೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅಂತಿಮ ಆಯ್ಕೆ ಪಟ್ಟಿಯನ್ನು ಕಳುಹಿಸಲಾಗಿತ್ತು.

ನಂತರ ಮೂರು ಸದಸ್ಯರ ಸಮಿತಿಯನ್ನು ರದ್ದುಪಡಿಸಿ, ಡಾ. ವಿಜಯ್‌ಕುಮಾರ್ ಕೋಚನೂರು ನೇತೃತ್ವದಲ್ಲಿ ಐದು ಸದಸ್ಯರ ಸಮಿತಿಯನ್ನು ಕೆಪಿಎಸ್‌ಸಿ ರಚಿಸಿತು. ಈ ಸಮಿತಿ 40 ಸಭೆಗಳನ್ನು ನಡೆಸಿದೆ. ಆದರೆ ತನಿಖಾ ವರದಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ನೀಡಿಲ್ಲ. ಈ ಕುರಿತು ಹಲವು ಬಾರಿ ಪತ್ರ ಬರೆದರೂ ಕೆಪಿಎಸ್‌ಸಿಯಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಹೇಳಿದರು.

ಕೆಪಿಎಸ್‌ಸಿ ನೀಡಿದ ಅಂತಿಮ ಆಯ್ಕೆ ಪಟ್ಟಿಯ ಆಧಾರದ ಮೇಲೆ 2025ರ ಜನವರಿ 22ರಂದು ವಿಶ್ವನಾಥ್ ಎಂಬುವರಿಗೆ ಕೊನೆಯ ನೇಮಕಾತಿ ಆದೇಶ ನೀಡಲಾಯಿತು. ಇದರ ಮರುದಿನವೇ ಕೆಪಿಎಸ್‌ಸಿ ರಚಿಸಿದ್ದ ಐದು ಸದಸ್ಯರ ಸಮಿತಿ ಅಂದಿನ ಮುಖ್ಯಮಂತ್ರಿಗೆ ವರದಿ ಸಲ್ಲಿಸಿತ್ತು ಎಂದು ವಿವರಿಸಿದರು. ನೇಮಕಾತಿಯಲ್ಲಿ ಲೋಪಗಳಾಗಿದ್ದರೆ ಆಯ್ಕೆ ಪಟ್ಟಿಯನ್ನು ತಡೆಹಿಡಿಯಲು ಅಥವಾ ರದ್ದುಗೊಳಿಸಲು ಕೆಪಿ-ಎಸ್‌ಸಿಗೆ ಅಧಿಕಾರವಿದೆ.

ಆದರೆ, ಅಂತಹ ಕ್ರಮ ಕೈಗೊಂಡಿರಲಿಲ್ಲ. ಅಂತಿಮವಾಗಿ ನೇಮಕಾತಿ ಆದೇಶಗಳನ್ನು ನೀಡಿದ ಬಳಿಕ ಆಯ್ಕೆ ಪಟ್ಟಿಯನ್ನು ತಡೆಹಿಡಿಯುವಂತೆ ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ಹೇಳಿದರು. ಆಯ್ಕೆಯಾದ ಅಭ್ಯರ್ಥಿಗಳು ಕೆಎಟಿ ಮೊರೆ ಹೋಗಿದ್ದರು. ಬಳಿಕ ಹೈಕೋರ್ಟ್‌ಗೂಮೇಲ್ಮನವಿ ಸಲ್ಲಿಸಲಾಗಿತ್ತು.ಯಾವುದೇ ಹಂತದಲ್ಲೂನ್ಯಾಯಾಲಯ ತಡೆಯಾಜ್ಞೆ ನೀಡಿಲ್ಲ. ಹೀಗಿರುವಾಗ ಕುಮಾರಸ್ವಾಮಿ ಅವರು ತಮ್ಮ ವಿರುದ್ಧ ಹೇಗೆ ಆರೋಪ ಮಾಡುತ್ತಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದರು.

'ಕುಮಾರಸ್ವಾಮಿಗೆ ಆರೋಪ ಮಾಡುವ ಗುತ್ತಿಗೆ ಸಿಕ್ಕಂತಿದೆ' ಕೆಪಿಎಸ್‌ಸಿ ನೇಮಕಾತಿ ವಿಚಾರವಾಗಿ ಬಿಜೆಪಿಯವರು ಯಾವುದೇ ಹೋರಾಟ ನಡೆಸುತ್ತಿಲ್ಲ. ಕುಮಾರಸ್ವಾಮಿ ಇತ್ತೀಚೆಗೆ ಆರ್‌ಎಸ್-ಎಸ್ ಕಚೇರಿಗೆ ಭೇಟಿ ನೀಡಿದ್ದರು. ಅಲ್ಲಿಗೆ ಹೋಗಿ ತಮ್ಮ ವಿರುದ್ಧ ಆರೋಪ ಮಾಡಲು ಗುತ್ತಿಗೆ ಪಡೆದಂತಿದೆ ಎಂದು ಪ್ರಿಯಾಂಕ್ ಖರ್ಗೆ ವ್ಯಂಗ್ಯವಾಡಿದರು. ಕೆಪಿಎಸ್‌ಸಿಗೆ ಸಾಹುಕಾರ್ ಶಿವಶಂಕರಪ್ಪ ಅವರ ನೇಮಕಾತಿ ಕುರಿತು ಕುಮಾರಸ್ವಾಮಿ ಏಕೆ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದ ಅವರು, ಈ ವಿಚಾರದಲ್ಲೂ ಅವರು ಸ್ಪಷ್ಟನೆ ನೀಡಬೇಕು ಎಂದರು. ಯುವಕರ ಭವಿಷ್ಯದೊಂದಿಗೆ ಚೆಲ್ಲಾಟವಾಡುವ ಯಾರನ್ನೂ ನಮ್ಮ ಸರ್ಕಾರ ಸಹಿಸುವುದಿಲ್ಲ. ಪಶುವೈದ್ಯಾಧಿಕಾರಿಗಳ ನೇಮಕಾತಿ ಹಗರಣದ ತನಿಖೆಯಲ್ಲಿ ಐಎಎಸ್ ಅಧಿಕಾರಿಯೊಬ್ಬರನ್ನು ಬಂಧಿಸಲಾಗಿದೆ. ಅವರು ದೇಶದಿಂದ ಪರಾರಿಯಾಗುವ ಹಂತದಲ್ಲಿದ್ದಾಗಲೇ ದೆಹಲಿ ವಿಮಾನ ನಿಲ್ದಾಣದಲ್ಲಿ ಸಿಐಡಿ ಅಧಿಕಾರಿಗಳು ವಶಕ್ಕೆ ಪಡೆದು ಕರೆತಂದಿದ್ದಾರೆ ಎಂದು ಹೇಳಿದರು. ತನಿಖೆ ಆಳಕ್ಕೆ ಹೋದಷ್ಟು ಬಿಜೆಪಿಯವರ ಆತಂಕವೂ ಹೆಚ್ಚಾಗಲಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

## ಹಿಂದೂ ಧರ್ಮ ಸಮಾಜ ವಿಭಜಿಸುವ ಶಕ್ತಿಯಲ್ಲ, ಇಡೀ ಜಗತ್ತನ್ನು ಒಂದುಗೂಡಿಸುವ ತತ್ವ : ಭಾಗವತ್

**ವಿಜಯ ದುಂಬಿ ಸುದ್ದಿ....**

**ಟೊರೊಂಟೊ: ಹಿಂದೂ ಧರ್ಮವು ಸಮಾಜವನ್ನು ವಿಭಜಿಸುವ ಶಕ್ತಿಯಲ್ಲ; ಬದಲಾಗಿ ಇಡೀ ಜಗತ್ತನ್ನು ಒಂದುಗೂಡಿಸುವ ತತ್ವವನ್ನು ಹೊಂದಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಸರಸಂಘಚಾಲಕ ಮೋಹನ್ ಭಾಗವತ್ ಹೇಳಿದರು.**

ಕೆನಡಾದ ಟೊರೊಂಟೊದಲ್ಲಿ ಕೆನಡಿಯನ್ ಹಿಂದೂಸ್ ಫಾರ್ ಔಟ್‌ರೀಚ್, ರಿಲೇಶನ್ಸ್ ಅಂಡ್ ಡೈಲಾಗ್ ಸಂಸ್ಥೆ ಆಯೋಜಿಸಿದ್ದ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತೀಯ ಪರಂಪರೆಯಲ್ಲಿ ಇತರ-ರಿಗೆ ನೆರವಾಗುವುದು ಮತ್ತು ಇಡೀ ಜಗತ್ತನ್ನು ಒಂದು ಕುಟುಂಬವೆಂದು ಪರಿಗಣಿಸುವ ಮನೋಭಾವ ಅಂತರ್ಗತವಾಗಿದೆ ಎಂದರು.

'ಹಿಂದೂ' ಎಂಬ ಪದವನ್ನು ನಿರ್ದಿಷ್ಟ ಭಾಷೆ, ಪೂಜಾ ಪದ್ಧತಿ ಅಥವಾ ಜೀವನಶೈಲಿಗೆ ಮಾತ್ರ ಸೀಮಿತಗೊಳಿಸಲಾಗದು. ಹಿಂದೂ ತತ್ವಜ್ಞಾನವು ವೈವಿಧ್ಯತೆಯನ್ನು ಗೌರವಿಸುವುದರ ಜತೆಗೆ ಅದನ್ನು ಸ್ವೀಕರಿಸುತ್ತದೆ. ಸಮಾಜದಲ್ಲಿ ನೂರಾರು ಭಾಷೆಗಳು, ಜಾತಿಗಳು ಮತ್ತು ಧರ್ಮಗಳು ಇರುವುದು ಸಹಜ. ಆದರೆ ಈ ಎಲ್ಲ ವೈವಿಧ್ಯತೆಗಳ ಹಿಂದಿರುವ ಆಂತರಿಕ ಏಕತೆಯೇ ಅಂತಿಮ ಸತ್ಯ ಎಂದು ಅವರು ವಿಶ್ಲೇಷಿಸಿದರು. ಭಾರತೀಯ ಪೂರ್ವಜರು ಮೆಕ್ಸಿಕೋದಿಂದ ಸೈಬೀ-ರಿಯಾ ಹಾಗೂ ಹಿಮಾಲಯದಿಂದ ಆಗ್ನೇಯ ಏಷ್ಯಾದವರೆಗೆ ಸಂಚರಿಸಿದ್ದರೂ ಯಾವುದೇ ಭೂಪ್ರದೇಶವನ್ನು ವಶಪಡಿಸಿಕೊಳ್ಳುವ ಪ್ರಯತ್ನ ಮಾಡಲಿಲ್ಲ. ಬದಲಾಗಿ ಆಯುರ್ವೇದ, ಖಗೋಳಶಾಸ್ತ್ರ ಸೇರಿದಂತೆ ಜ್ಞಾನ ಮತ್ತು



ನಾಗರಿಕತೆಯ ಮೌಲ್ಯಗಳನ್ನು ಜಗತ್ತಿಗೆ ಪರಿಚಯಿಸಿದರು ಎಂದು ಭಾಗವತ್ ಹೇಳಿದರು.

ಎರಡನೇ ಮಹಾಯುದ್ಧದ ಸಂದರ್ಭದಲ್ಲಿ ಪೋಲಿಷ್ ನಿರಾಶ್ರಿತರಿಗೆ ಜಾಮ್‌ನಗರದ ಮಹಾರಾಜರು ಆಶ್ರಯ ನೀಡಿದ್ದನ್ನು ಸ್ಮರಿಸಿದ ಅವರು, ಪಾರ್ಸಿಗಳು, ಯಹೂದಿಗಳು, ಮುಸ್ಲಿಮರು ಮತ್ತು ಕ್ರಿಶ್ಚಿಯನ್ನರಿಗೆ ಭಾರತ ಸದಾ ಸುರಕ್ಷಿತ ನೆಲೆಯಾಗಿತ್ತು ಎಂದು ಹೇಳಿದರು.

ವಿಶ್ವದ ಯಾವುದೇ ಭಾಗದಲ್ಲಿ ಬಿಕ್ಕಟ್ಟು ಎದುರಾದಾಗ ಭಾರತ ನೆರವಿನ ಹಸ್ತ ಚಾಚುತ್ತಿದೆ. ಇತ್ತೀಚಿನ ಯುದ್ಧಪೀಡಿತ ಪ್ರದೇಶಗಳಿಂದ ಭಾರತೀಯರ ಜತೆಗೆ ಹಲವು ವಿದೇಶಿ ಪ್ರಜೆಗಳನ್ನೂ ರಕ್ಷಿಸಿರುವುದು ಇದಕ್ಕೆ ಸಾಕ್ಷಿಯಾಗಿದೆ ಎಂದರು. ಮುಕ್ತ ಮನಸ್ಸಿನ ಸಮಾಜ ನಿರ್ಮಾಣಕ್ಕೆ 'ವಸುಧೈವ ಕುಟುಂಬಕಂ' ಪರಿಕಲ್ಪನೆ ಅತ್ಯಂತ ಅಗತ್ಯ. ಹಿಂದೂಗಳು ಜಾಗೃತರಾದರೆ ಇಡೀ ಜಗತ್ತೇ ಜಾಗೃತಗೊಳ್ಳಲಿದೆ ಎಂದು ಮೋಹನ್ ಭಾಗವತ್ ಅಭಿಪ್ರಾಯಪಟ್ಟರು.

ಸಮಾವೇಶದಲ್ಲಿ ಕೆನಡಾದ ಎಂಟು ಪ್ರಾಂತ್ಯಗಳಿಂದ 2,500ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದರು. ಕೆನಡಾದ ಮಾಜಿ ರಕ್ಷಣಾ ಸಚಿವ ಹಾಗೂ ಆಲ್ಬರ್ಟಾದ ಮಾಜಿ ಪ್ರೀಮಿಯರ್ ಜೇಸನ್ ಕೆನ್ನಿ ಸೇರಿದಂತೆ ಹಲವು ಅಂತಾರಾಷ್ಟ್ರೀಯ ಗಣ್ಯರು ಉಪಸ್ಥಿತರಿದ್ದರು.

## ಸಂಸದೀಯ ಮಂಡಳಿಯಿಂದ ಬಿಎಸ್‌ವೈಗೆ ಕೊಕ್ ಸಾಧ್ಯತೆ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಮಹತ್ವದ ಬೆಳವಣಿಗೆಯೊಂದರಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರನ್ನು ಶೀಘ್ರದಲ್ಲೇ ಪಕ್ಷದ ಸಂಸದೀಯ ಮಂಡಳಿಯಿಂದ ಕೈಬಿಡುವ ಸಾಧ್ಯತೆ ಇದೆ ಎನ್ನಲಾಗಿದೆ.**

ಯಡಿಯೂರಪ್ಪ ಅವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ಬಳಿಕ ಬಿಜೆಪಿಯ ಪರಮೋಚ್ಚ ನಿರ್ಧಾರಕ ಸಂಸ್ಥೆಯಾಗಿರುವ ಸಂಸದೀಯ ಮಂಡಳಿಯಲ್ಲಿ ಅವ-ರಿಗೆ ಸ್ಥಾನ ಕಲ್ಪಿಸಲಾಗಿತ್ತು. ಇದೀಗ ಬದಲಾಗಿರುವ ರಾಜಕೀಯ ಪರಿಸ್ಥಿತಿಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್ ಅಧಿಕಾರ ವಹಿಸಿಕೊಂಡ ಬಳಿಕ ಪಕ್ಷದ ಸಂಘಟನೆಯಲ್ಲಿ ಹಲವು



ಬದಲಾವಣೆಗಳನ್ನು ಕೈಗೊಳ್ಳಲು ಮುಂದಾಗಿದ್ದಾರೆ. ಇದರ ಭಾಗವಾಗಿ ಸಂಸದೀಯ ಮಂಡಳಿಯನ್ನೂ ಪುನರ್‌ರಚಿಸುವ ಸಾಧ್ಯತೆ ಇದ್ದು, ಈ ವೇಳೆ ಯಡಿಯೂರಪ್ಪ ಅವರನ್ನು ಸಮಿತಿಯಿಂದ ಕೈಬಿಡುವ ಸಾಧ್ಯತೆ ಹೆಚ್ಚಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಈಗಾಗಲೇ ಕರ್ನಾಟಕದ ಎಂ. ನಾಗರಾಜ್ ಅವರಿಗೆ ರಾಷ್ಟ್ರೀಯ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಬಿ.ಎಲ್. ಸಂತೋಷ್ ಅವರು ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿಯಾಗಿ ಮುಂದುವರಿದಿದ್ದಾರೆ. ರಾಷ್ಟ್ರಮಟ್ಟದಲ್ಲಿ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಕೆಲ ಹಿರಿಯ ನಾಯಕರಿಗೆ ಸಂಘಟನಾ ಜವಾಬ್ದಾರಿಗಳಿಂದ ವಿಶ್ರಾಂತಿ ನೀಡಲು ಬಿಜೆಪಿ ಚಿಂತನೆ ನಡೆಸಿದೆ ಎನ್ನಲಾಗಿದೆ.

ಪ್ರಮುಖ ನಿರ್ಧಾರಗಳ ಕೇಂದ್ರ 12 ಸದಸ್ಯರ ಬಿಜೆಪಿ ಸಂಸದೀಯ ಮಂಡಳಿ ಲೋಕಸಭೆ ಹಾಗೂ ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳಲ್ಲಿ ಅಭ್ಯರ್ಥಿಗಳ ಆಯ್ಕೆ, ಟಿಕೆಟ್ ಹಂಚಿಕೆ ಸೇರಿದಂತೆ ಪಕ್ಷದ ಪ್ರಮುಖ ರಾಜ-ಕೀಯ ನಿರ್ಧಾರಗಳನ್ನು ಕೈಗೊಳ್ಳುತ್ತದೆ. ಈ ಮಹತ್ವದ ಸಮಿತಿಯಲ್ಲಿ ಯಡಿಯೂರಪ್ಪ ಅವರು ಕರ್ನಾಟಕವನ್ನು ಪ್ರತಿನಿಧಿಸುತ್ತಿದ್ದರು.

ಆದರೆ ಬದಲಾಗುತ್ತಿರುವ ರಾಜಕೀಯ ಪರಿಸ್ಥಿತಿಗೆ ಅನುಗುಣವಾಗಿ ಹೊಸ ಚಿಂತನೆ ಹಾಗೂ ಹೊಸ ನಾಯಕತ್ವಕ್ಕೆ ಅವಕಾಶ ಕಲ್ಪಿಸಲು ಬಿಜೆಪಿ ಹೈಕಮಾಂಡ್ ಮುಂದಾಗಿದೆ ಎನ್ನಲಾಗಿದೆ. ಸಂಘಟನಾತ್ಮಕ ಪುನರ್‌ವ್ಯವಸ್ಥೆಯ ಭಾಗವಾಗಿ ಸಂಸದೀಯ ಮಂಡಳಿಯಲ್ಲೂ ಬದಲಾವಣೆ ತರಲು ಚಿಂತನೆ ನಡೆದಿದ್ದು, ಯಡಿಯೂರಪ್ಪ ಅವರಿಗೆ ಈ ಕುರಿತು ಈಗಾಗಲೇ ಪರೋಕ್ಷ ಸಂದೇಶ ರವಾನೆಯಾಗಿದೆ ಎಂದು ಪಕ್ಷದ ಮೂಲಗಳು ಹೇಳಿವೆ.

ಸಂಸದೀಯ ಮಂಡಳಿಯಲ್ಲಿ ಕರ್ನಾಟಕದ ಪ್ರಬಲ ನಾಯಕನಾಗಿದ್ದ ಯಡಿಯೂರಪ್ಪ ಅವರನ್ನು ಕೈಬಿಡುವ ಸಾಧ್ಯತೆಯ ಸುದ್ದಿ ರಾಜ್ಯ ಬಿಜೆಪಿಯೊಳಗೆ ಹೊಸ ಚರ್ಚೆಗೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ಪಕ್ಷದ ರಾಜ್ಯ ರಾಜಕಾರಣದ ಮೇಲೂ ಇದರ ಪರಿಣಾಮ ಬೀರಬಹುದೇ ಎಂಬ ಕುತೂಹಲ ಮೂಡಿದೆ.

# ರೈತರ ಮಕ್ಕಳೆಂದು ಹೇಳಿಕೊಳ್ಳುವವರ ಜಮೀನುಗಳೂ ಬೆಂಗಳೂರಿನ ಸುತ್ತಮುತ್ತ ಇವೆ : ಡಿಕೆಶಿ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ರೈತರ ಮಕ್ಕಳು ಎಂದು ಹೇಳಿಕೊಳ್ಳುವ ದೊಡ್ಡದೊಡ್ಡವರ ಜಮೀನುಗಳು ಬೆಂಗಳೂರಿನ ಸುತ್ತಮುತ್ತ ಇರುವುದು ನಮಗೂ ಗೊತ್ತಿದೆ. ಆ ಜಮೀನುಗಳನ್ನು ಯಾವುದಾದರೂ ಯೋಜನೆಗೆ ಬಿಟ್ಟುಕೊಟ್ಟಿದ್ದಾರೆಯೇ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು.**

ಬೆಂಗಳೂರಿನ ನೆಹರೂ ತಾರಾಲಯದ ಯು.ಆರ್. ಭವನದಲ್ಲಿ ನಡೆದ ಡಾ. ಕೆ. ಶಿವರಾಮ ಕಾರಂತ ಬಡಾವಣೆಯ ಭೂ ಮಾಲೀಕರಿಗೆ ನಿವೇಶನ ಹಂಚಿಕೆ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಈ ವೇಳೆ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು. ಶಿವರಾಮ ಕಾರಂತ ಬಡಾವಣೆ ಯೋಜನೆ ಕುಮಾರಸ್ವಾಮಿ ಅವರ ಕಾಲದಲ್ಲೇ ಆರಂಭವಾಗಿತ್ತು. ತಾವು ಬಿಡಿಎ ಜವಾಬ್ದಾರಿ ವಹಿಸಿಕೊಂಡಾಗ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿತ್ತು. ಪ್ರತಿಯೊಂದಕ್ಕೂ ಲಂಚ ನೀಡಬೇಕಾದ ಪರಿಸ್ಥಿತಿ ಇತ್ತು. ಇದರ ಬಗ್ಗೆ ಮಾತನಾಡಲು ರೈತರ ಮಕ್ಕಳಿಗೆ ಧಮ್, ತಾಕತ್ತು ಇಲ್ಲವೇ ಎಂದು ಶಿವಕುಮಾರ್ ಪ್ರಶ್ನಿಸಿದರು.

ಬೆಂಗಳೂರಿನ ಸುತ್ತಮುತ್ತ ಸಾವಿರಾರು ಎಕರೆ ಜಮೀನು ಹೊಂದಿರುವ ಕೆಲವರು ತಮ್ಮ ಜಮೀನುಗಳನ್ನು ಯಾವುದೇ ಯೋಜನೆಗಾಗಿ ಭೂಸ್ವಾಧೀನಕ್ಕೆ ಬಿಟ್ಟುಕೊಟ್ಟಿಲ್ಲ. ಪೆರಿಫೆರಲ್ ರಿಂಗ್ ರಸ್ತೆಗೆ ಜಮೀನು ಹೋಗುತ್ತದೆ ಎಂಬ ಕಾರಣ-ಕ್ಕೆ ಯೋಜನೆಯ ನಕ್ಷೆಯನ್ನೇ ಬದಲಾಯಿಸಿದ್ದರು. ಇದೀಗ ಅದರ ಪಕ್ಕದ ಜಮೀನಿನ ಬೆಲೆ ಎಕರೆಗೆ 15 ಕೋಟಿ ದಾಟಿದೆ ಎಂದು ಆರೋಪಿಸಿದರು.

ಅಭಿವೃದ್ಧಿಯಲ್ಲಿ ಭೂ ಮಾಲೀಕರಿಗೂ ಪಾಲು

ವಿಶ್ವವೇ ಬೆಂಗಳೂರಿನತ್ತ ನೋಡುತ್ತಿದೆ. ಬೆಂಗಳೂರು ಜಗತ್ತಿನ ಪ್ರಮುಖ ನಗರವಾಗಿ ಬೆಳೆಯುತ್ತಿದೆ. ಈ ಬೆಳವಣಿಗೆಯ ಹಿಂದೆ ಸಾವಿರಾರು ರೈತರು ಹಾಗೂ ಭೂ ಮಾಲೀಕರ ಕೊಡುಗೆ ಇದೆ. ಹೀಗಾಗಿ ನಗರದ ಅಭಿವೃದ್ಧಿಯೊಂದಿಗೆ ಭೂಮಿ ನೀಡಿದವರ ಕುಟುಂಬಗಳ ಬದುಕು ಕೂಡ ಬೆಳೆಯಬೇಕು. ಅಭಿವೃದ್ಧಿಯ ಫಲದಲ್ಲಿ ಅವರಿಗೂ ನ್ಯಾಯಯುತ ಪಾಲು ಸಿಗಬೇಕು ಎಂದು ಮುಖ್ಯಮಂತ್ರಿ ಹೇಳಿದರು.

ಭೂಮಿ ನೀಡಿದ ರೈತರ ಕೊಡುಗೆಯನ್ನು ಸರ್ಕಾರ ಎಂದಿಗೂ ಮರೆಯುವುದಿಲ್ಲ. ಅವರ ತ್ಯಾಗ ದೊಡ್ಡದು. ಅವರ ಹಕ್ಕುಗಳನ್ನು ರಕ್ಷಿಸುವುದು ಸರ್ಕಾರದ ಜವಾಬ್ದಾರಿ ಎಂದು ತಿಳಿಸಿದರು. ಇದು ಕೇವಲ ನಿವೇಶನ ಹಂಚಿಕೆ ಪತ್ರ ವಿತ-ರಿಸುವ ಕಾರ್ಯಕ್ರಮವಲ್ಲ. ಹಲವು ವರ್ಷಗಳಿಂದ ಕಾಯುತ್ತಿರುವ ಭೂ ಮಾಲೀಕರ ನಿರೀಕ್ಷೆಗಳಿಗೆ ಉತ್ತರ ನೀಡುವ ದಿನ. ಬೆಂಗಳೂರಿನ ಅಭಿವೃದ್ಧಿಗಾಗಿ ಭೂಮಿ ನೀಡಿದವರಿಗೆ ಅಭಿವೃದ್ಧಿಯಲ್ಲೇ



ಪಾಲು ನೀಡುವ ದಿನವಾಗಿದೆ ಎಂದರು.

ಕಾನೂನು ನಿರ್ದೇಶನ ಪಾಲಿಸಿ ಹಕ್ಕು ರಕ್ಷಣೆ

ಡಾ. ಕೆ. ಶಿವರಾಮ ಕಾರಂತ ಬಡಾವಣೆ ಯೋಜನೆ ಹಲವು ವರ್ಷಗಳಿಂದ ಭೂಸ್ವಾಧೀನ, ಕಾನೂನು ವ್ಯಾಜ್ಯಗಳು ಹಾಗೂ ಆಡಳಿತಾತ್ಮಕ ಪ್ರಕ್ರಿಯೆಗಳ ನಡುವೆ ಸಾಗಿಬಂದಿದೆ. ಕಾನೂನು ಮತ್ತು ನ್ಯಾಯಾಲಯದ ನಿರ್ದೇಶನಗಳನ್ನು ಗೌರವಿಸುತ್ತಲೇ ಅರ್ಹ ಭೂ ಮಾಲೀಕರ ಹಕ್ಕುಗಳನ್ನು ರಕ್ಷಿಸುವ ಕೆಲಸವನ್ನು ಸರ್ಕಾರ ಮಾಡಿದೆ. ಅನಗತ್ಯ ವಿಳಂಬಕ್ಕೆ ಅವಕಾಶ ನೀಡದೆ ದಾಖಲೆಗಳ ಆಧಾರದ ಮೇಲೆ ಅರ್ಹರಿಗೆ ಅವರ ಹಕ್ಕು ನೀಡುವುದು ಸರ್ಕಾರದ ಉದ್ದೇಶ ಎಂದು ಹೇಳಿದರು.

ಲೇಔಟ್‌ನ ರಸ್ತೆಯೊಂದಕ್ಕೆ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ಹೆಸ-ರಿಡಲಾಗುವುದು. ಜತೆಗೆ ಬಡಾವಣೆಗೆ ಜಮೀನು ನೀಡಿದವರ ಹೆಸರುಗಳು ಶಾಶ್ವತವಾಗಿ ನೆನಪಿನಲ್ಲಿ ಉಳಿಯುವಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

'ಜಾಗ ನಿಮ್ಮದು, ತ್ಯಾಗ ನಿಮ್ಮದು, ಅಭಿವೃದ್ಧಿ ಬೆಂಗಳೂರಿನದು. ನಿಮ್ಮ ನೋವು, ಕಷ್ಟ ಗೊತ್ತಿದೆ. ಆದರೆ ನಿಮ್ಮ ನಿವೇಶನಗಳನ್ನು ಮಾರಾಟ ಮಾಡಬೇಡಿ. ನಿಮ್ಮ ಸೈಟ್‌ಗಳಿಗೆ ಉತ್ತಮ ಬೆಲೆ ಸಿಗಲಿದೆ' ಎಂದು ಭೂ ಮಾಲೀಕರಿಗೆ ಸಲಹೆ ನೀಡಿದರು.

24,714 ನಿವೇಶನ ಹಂಚಿಕೆ

ಡಾ. ಕೆ. ಶಿವರಾಮ ಕಾರಂತ ಬಡಾವಣೆಯಲ್ಲಿ ಸದ್ಯ 24,714 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ. ಈ ಪೈಕಿ 18,399 ನಿವೇಶನಗಳನ್ನು ರೈತರು ಹಾಗೂ ಭೂ ಮಾಲೀಕರಿಗೆ ನೀಡಲಾಗಿದೆ. 3,500 ರೆವೆನ್ಯೂ ಸೈಟ್‌ಗಳು ಹಾಗೂ 2,815 ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದರು. ಬಡಾವಣೆಯಲ್ಲಿ 40:60 ಅಭಿವೃದ್ಧಿ ಮಾದರಿ ಅನುಸರಿಸಲಾಗಿದೆ. ಒಂದು ಎಕರೆ ಭೂಮಿಗೆ 9,583 ಚದರ ಅಡಿ ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಭೂ ಮಾಲೀಕರಿಗೆ ನೀಡಲಾಗುವುದು ಎಂದರು.

ಬಡಾವಣೆಯ ಸಮಗ್ರ ಅಭಿವೃದ್ಧಿ ಹಾಗೂ ಸಾರ್ವಜನಿಕ ಮೂಲಸೌಕರ್ಯದ ದೃಷ್ಟಿಯಿಂದ ಕೆಲವು ನಿವೇಶನಗಳನ್ನು ಭೂ ಮಾಲೀಕರಿಗೆ ಹಂಚಿಕೆ ಮಾಡಲು ಸಾಧ್ಯವಾಗುವುದಿಲ್ಲ. ಮುಖ್ಯವಾಗಿ ಕಾರ್ನರ್ ಸೈಟ್, ವಾಣಿಜ್ಯ ನಿವೇಶನ, ಸಿಎ ಸೈಟ್‌ಗಳು, ಉದ್ಯಾನಗಳು ಹಾಗೂ ಅಗಲವಾದ ರಸ್ತೆಗೆ ಹೊಂದಿಕೊಂಡಿರುವ ನಿವೇಶನಗಳನ್ನು ಭೂ ಮಾಲೀಕರಿಗೆ ನೀಡಲಾಗುತ್ತಿಲ್ಲ. ನಗರ ಯೋಜನೆಯ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ಕೆಲವು ನಿವೇಶನಗಳನ್ನು ಪ್ರತ್ಯೇಕವಾಗಿ ಪರಿಗಣಿಸಲಾಗಿದೆ ಎಂದು ಹೇಳಿದರು. ಫಲಾನುಭವಿಗಳಿಗೆ ಅಗತ್ಯ ದಾಖಲೆಗಳನ್ನು ನೀಡಿ, ನಿವೇಶನದ ಅಧಿಕೃತ ಸ್ವಾಧೀನ ಪಡೆಯುವವರೆಗೆ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದು ಸರ್ಕಾರದ ಜವಾಬ್ದಾರಿ ಎಂದರು.

16,419 ಕೋಟಿ ವೆಚ್ಚ

ಬೆಂಗಳೂರು ಉತ್ತರ ಭಾಗದಲ್ಲಿರುವ 17 ಹಳ್ಳಿಗಳ 3,069 ಎಕರೆ ಭೂಮಿಯನ್ನು 3,200 ಭೂ ಮಾಲೀಕರಿಂದ ಸ್ವಾಧೀನಪಡಿಸಿಕೊಂಡು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಡಾ. ಕೆ. ಶಿವರಾಮ ಕಾರಂತ ಬಡಾವಣೆ ನಿರ್ಮಿಸಿದೆ.

ಒಟ್ಟು 34,992 ನಿವೇಶನಗಳನ್ನು ನಿರ್ಮಿಸುವ ಗುರಿ ಹೊಂದಿರುವ ಈ ಬಡಾವಣೆಗೆ ಒಟ್ಟಾರೆ ?16,419.89 ಕೋಟಿ ವೆಚ್ಚವಾಗಲಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಹಾಗೂ ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರಿಸ್ ವಹಿಸಿದ್ದರು. ಗ್ರೇಟ-ರ್ ಬೆಂಗಳೂರು ಸಚಿವ ಕೃಷ್ಣ ಬೈರೇಗೌಡ, ಶಾಸಕರಾದ ಎಸ್.ಆರ್. ವಿಶ್ವನಾಥ್, ಮುನಿರಾಜು, ಬಿಡಿಎ ಆಯುಕ್ತ ಮಣಿವಣ್ಣನ್ ಹಾಗೂ ಬಿಡಿಎ ಸದಸ್ಯರು ಉಪಸ್ಥಿತರಿದ್ದರು.

## ನಾನು ಪ್ರಾಮಾಣಿಕ ಎಂದು ಹೇಳಿಕೊಂಡ್ರೆ ಆತ್ಮವಂಚನೆ ಆಗುತ್ತದೆ ಎಂದ ಸಿದ್ದರಾಮಯ್ಯ.!

ವಿಜಯ ದುಂಬಿ ಸುದ್ದಿ....

**ತುಮಕೂರು: ಚುನಾವಣಾ ವ್ಯವಸ್ಥೆ ಬಹಳ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸಲ್ಲ ಎಂದು ಹೇಳಿದ ಮಾಜಿ ಸಿಎಂ ಸಿದ್ದರಾಮಯ್ಯ ಅವರು, ವ್ಯವಸ್ಥೆ ಸುಧಾರಣೆ ಆಗದೇ ತಾನು ಪ್ರಾಮಾಣಿಕ ಎಂದು ಹೇಳಿಕೊಳ್ಳುವುದು ಆತ್ಮವಂಚನೆಯಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.**



ತುಮಕೂರಿನಲ್ಲಿ ನಡೆದ ಹಿರಿಯ ರಾಜ-ಕಾರಣಿ ವೀರಣ್ಣ ನುಡಿನಮನ ಕಾರ್ಯಕ್ರಮ ಉದ್ಘಾಟಿಸಿದ ಅವರು ಮಾತನಾಡಿದ್ದಾರೆ. ಇಂದು ಚುನಾವಣಾ ವ್ಯವಸ್ಥೆ ಹದಗೆಟ್ಟಿದ್ದು, ಅದರಲ್ಲಿಸುಧಾರಣೆ ತರುವುದೇ ಹಿರಿಯ ರಾಜಕಾರಣಿ ವೀರಣ್ಣ ಅವರಿಗೆ ಸಲ್ಲಿಸುವ ನಿಜವಾದ ಶ್ರದ್ಧಾಂಜಲಿ ಎಂದರು. 80 ವರ್ಷ ಆಗಿದೆ : ನನಗೆ ಈಗ 80 ವರ್ಷ ಆಗಿದ್ದು, ಸದ್ಯ ಆರೋಗ್ಯವಾಗಿದ್ದೇನೆ. ಇನ್ನೂ ಎಷ್ಟು ವರ್ಷ ಬದುಕಿರುತ್ತೇನೆ ಅಂತಾ ಗೊತ್ತಿಲ್ಲ. ಚುನಾವಣಾ ವ್ಯವಸ್ಥೆ ಬಹಳ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸ ಬಾರದು ಎಂಬುದು ನನ್ನ ಅಭಿಪ್ರಾಯ. ಆದರೆ, ಸಕ್ರಿಯ ರಾಜ-ಕಾರಣದಲ್ಲಿ ಮುಂದುವರಿಯುತ್ತೇನೆ ಎಂದು ತಿಳಿಸಿದರು. 1991 ರಲ್ಲೇ ಲೋಕಸಭೆಗೆ ಮತ್ತೆ ನಿಲ್ಲಬಾರದು ಎಂದು ತೀರ್ಮಾನಿಸಿದ್ದೆ : ಚುನಾವಣೆಯಲ್ಲಿ ಚುನಾವಣಾ ಆಯೋಗದವರು ಹೇಳಿದಷ್ಟು ಮಾತ್ರ ಹಣ ಮಾತ್ರ ಖರ್ಚು ಮಾಡಬೇಕು. ಆದರೆ, ಅದು ಇಂದಿನ ದಿನಗಳಲ್ಲಿ ಆಗುತ್ತಿಲ್ಲ. 1983ರ ಚುನಾವಣೆಗೂ ಪ್ರಸ್ತುತ ನಡೆಯುವ ಚುನಾವಣೆಗೂ ಬಹಳಷ್ಟು ವ್ಯತ್ಯಾಸವಿದೆ. ನನಗೆ ಲೋಕಸಭಾ ಚುನಾವಣೆಗೆ ನಿಲ್ಲಲು ಪಕ್ಷದಿಂದ ಅವಕಾಶ ಇತ್ತು. ಆದರೆ, ತಿರಸ್ಕರಿಸಿದೆ. ಈ ಹಿಂದೆ 1991 ರಲ್ಲಿ ಕೊಪ್ಪಳದಿಂದ ಲೋಕಸಭೆಗೆ ಸ್ಪರ್ಧಿಸಿ 10 ಸಾವಿರ ಮತಗಳಿಂದ ಸೋಲು ಕಂಡಿದ್ದೆ. ಆಗ ರಾಮಕೃಷ್ಣ ಹೆಗಡೆಯವರು ಕೂಡ ಸೋತರು. ಆವತ್ತೆ ನಾನು ಲೋಕಸಭೆಗೆ ಮತ್ತೆ ನಿಲ್ಲಬಾರದು ಎಂದು ತೀರ್ಮಾನ ಮಾಡಿದ್ದೆ ಎಂದರು. ಸರಳತೆ ಇಂದಿನ ರಾಜಕಾರಣದಲ್ಲಿ ಅಳವಡಿಕೆ ಕಷ್ಟ ವೀರಣ್ಣ ಅವರ ಪ್ರಾಮಾಣಿಕತೆ, ಬದ್ಧತೆ ಹಾಗೂ ಸರಳತೆ ಇಂದಿನ ರಾಜಕಾರಣದಲ್ಲಿ ಅಳವಡಿಕೆ ಕಷ್ಟ. ಚುನಾವಣಾ ವ್ಯವಸ್ಥೆಯ ಸುಧಾರಣೆಗೆ ಜನರು ಹೋರಾಟ ನಡೆಸಬೇಕು. 1983ರಲ್ಲಿ ವೀರಣ್ಣ ಅವರೊಂದಿಗೆ ವಿಧಾನಸಭೆಗೆ ಆಯ್ಕೆಯಾಗಿದ್ದೆ. ಅವರು ಜನರ ಸಮಸ್ಯೆಗಳನ್ನು ಸದನದಲ್ಲಿ ಸಮರ್ಥವಾಗಿ ಪ್ರಸ್ತಾಪಿಸುತ್ತಿದ್ದರು ಎಂದು ಸ್ಮರಿಸಿದರು. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮಾತನಾಡಿ, ಇಂದಿನ ಕಲುಶಿತ ರಾಜಕಾರಣದಲ್ಲಿ ವೀರಣ್ಣ ಅವರಂತಹ ವ್ಯಕ್ತಿತ್ವಗಳು ವಿರಳ. ಹಣವೇ ಎಲ್ಲವನ್ನೂ ನಿರ್ಧರಿಸುವ ಕಾಲದಲ್ಲೂವೀರಣ್ಣ ಅವರು ರಾಜಿಯಾಗದ ಮನಸ್ಥಿತಿ ಹೊಂದಿದ್ದರು.

## ಆರ್‌ಡಿಪಿಆರ್ ಆನ್‌ಲೈನ್ ದೂರು ವ್ಯವಸ್ಥೆಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಗ್ರಾಮ ಪಂಚಾಯಿತಿ ಸೇವೆಗಳಿಗೆ ಸಂಬಂಧಿಸಿದಂತೆ ಗ್ರಾಮೀಣರು ತಮ್ಮ ಅಹವಾಲುಗಳನ್ನು ಸುಲಭವಾಗಿ ದಾಖಲಿಸಿ, ಅದರ ಸ್ಥಿತಿಗತಿ ತಿಳಿದುಕೊಳ್ಳಲು ಅನುಕೂಲವಾಗುವಂತೆ ಡ್ಯಾಷ್‌ಬೋರ್ಡ್ ಆಧರಿತ ಆನ್‌ಲೈನ್ ದೂರು ದಾಖಲಾತಿ ಮತ್ತು ಇತ್ಯರ್ಥ ವ್ಯವಸ್ಥೆ ರೂಪಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ.**

ಈ ಸಂಬಂಧ ಇಲಾಖೆಯ ಕಾರ್ಯದರ್ಶಿಗೆ ಲಿಖಿತ ಸೂಚನೆ ನೀಡಿರುವ ಅವರು, ಇ-ಸ್ವತ್ತು, ತೆರಿಗೆ ನಿರ್ಧಾರಣೆ, ಸಾಮಾಜಿಕ ಅರಣ್ಯೀಕರಣ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳ ನಿರ್ವಹಣೆ, ಕೆರೆ ಒತ್ತುವರಿ, ಜೆಜೆಎಂ, ಕುಡಿಯುವ ನೀರು, ನೈರ್ಮಲ್ಯ, ಗ್ರಾಮೀಣ ರಸ್ತೆ, ವಿಬಿಜಿ ರಾಮ್ ಜಿ ಹಾಗೂ ಗ್ರಾಮೀಣ ಆಸ್ತಿಗಳ ಸೃಜನೆ ಸೇರಿದಂತೆ ವಿವಿಧ ವಿಷಯಗಳ ಕು-ರಿತು ಸಾರ್ವಜನಿಕರು ದೂರು ದಾಖಲಿಸಲು



ಹಾಗೂ ಅವುಗಳಿಗೆ ತ್ವರಿತವಾಗಿ ಸ್ಪಂದಿಸಲು ವ್ಯವಸ್ಥೆ ರೂಪಿಸುವಂತೆ ನಿರ್ದೇಶಿಸಿದ್ದಾರೆ.

ರಾಜ್ಯದ ಸುಮಾರು ಅರ್ಧದಷ್ಟು ಜನಸಂಖ್ಯೆಯೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ನೇರ ಸಂಪರ್ಕ ಹೊಂದಿದೆ. ಹೀಗಾಗಿ ಗ್ರಾಮೀಣರ ಕುಂದುಕೊರತೆಗಳಿಗೆ ಸ್ಪಂದಿಸುವುದು ಇಲಾಖೆಯ ಪ್ರಮುಖ ಜವಾಬ್ದಾ-ರಿಯಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ವಿಡಿಯೋ, ಫೋಟೋ ಸಹಿತ ದೂರು ಇಲಾಖೆಯಲ್ಲಿ ಪಾರದರ್ಶಕತೆ ಹೆಚ್ಚಿಸುವ ಉದ್ದೇಶದಿಂದ ಕೇಂದ್ರ ಹಾಗೂ ರಾಜ್ಯ ಪ್ರಾಯೋಜಿತ ಯೋಜನೆಗಳ ಕಾಮಗಾರಿಗಳಲ್ಲಿನ ಲೋಪದೋಷ, ಮೂಲಸೌಕರ್ಯಗಳ ಗುಣಮಟ್ಟದ ಕೊರತೆ, ಗ್ರಾಮ ಪಂಚಾಯಿತಿಗಳು ಒದಗಿಸುವ ವಿವಿಧ ಸೇವೆಗಳಲ್ಲಿನ ವಿಳಂಬ ಹಾಗೂ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಸಚಿವಾಲಯಕ್ಕೆ ದೂರುಗಳು ಬರುತ್ತಿವೆ. ಈ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಖಂಡ್ರೆ ಹೇಳಿದ್ದಾರೆ.

ಸಾರ್ವಜನಿಕರು ವಿಡಿಯೋ ಹಾಗೂ ಫೋಟೋ ಸಹಿತ ದೂರುಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಅವಕಾಶ ಕಲ್ಪಿಸುವಂತೆ ಅವರು ಸೂಚಿಸಿದ್ದಾರೆ. ಅಲ್ಲದೆ, ದೂರಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳುವ ಅಧಿಕಾ-ರಿಯ ಹೆಸರು, ದೂರವಾಣಿ ಸಂಖ್ಯೆ ಸೇರಿದಂತೆ ಅಗತ್ಯ ಮಾಹಿತಿಯನ್ನು ಪಡೆಯಲು ಹಾಗೂ ದೂರಿನ ಪ್ರಸ್ತುತ ಸ್ಥಿತಿಗತಿ ತಿಳಿದುಕೊಳ್ಳಲು ವ್ಯವಸ್ಥೆ ಇರಬೇಕು ಎಂದು ತಿಳಿಸಿದ್ದಾರೆ.

ನಿಗದಿತ ಕಾಲಮಿತಿಯೊಳಗೆ ದೂರುಗಳನ್ನು ಇತ್ಯರ್ಥಪಡಿಸಲು ಅನುಕೂಲವಾಗುವಂತೆ ಸರಳ ಪ್ರಕ್ರಿಯೆಯ ಆ?ಯಪ್ ಹಾಗೂ ಡ್ಯಾಷ್‌ಬೋರ್ಡ್ ಒಳಗೊಂಡ ವೆಬ್ ಪೋರ್ಟಲ್ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವಂತೆ ಕಾರ್ಯದರ್ಶಿಗೆ ಸೂಚಿಸಿದ್ದಾರೆ.

ಏಕಗವಾಕ್ಷಿ ವ್ಯವಸ್ಥೆ

ಜಿಬಿಎ, ಬಿಡಬ್ಲ್ಯುಎಸ್‌ಎಸ್‌ಬಿ, ಬಿಡಿಎ, ಬಿಎಂಆರ್‌ಸಿಎಲ್, ಬೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ದೂರುಗಳನ್ನು ದಾಖಲಿಸಿ ಪರಿಹಾರ ಪಡೆಯಲು ಇರುವ 'ಸಹಾಯ' ಆ್ಯಪ್ ಮಾದರಿಯಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ವಿಭಾಗಗಳಿಗೆ ಸಂಬಂಧಿಸಿದ ದೂರುಗಳನ್ನು ಒಂದೇ ಕಡೆ ದಾಖಲಿಸಲು ಏಕಗವಾಕ್ಷಿ ವ್ಯವಸ್ಥೆ ಜಾರಿಗೆ ತರಬೇಕು ಎಂದು ಖಂಡ್ರೆ ಸೂಚಿಸಿದ್ದಾರೆ. ಈ ವ್ಯವಸ್ಥೆಯಿಂದ ಗ್ರಾಮೀಣ-ರು ಕಚೇರಿಗಳಿಗೆ ಅಲೆದಾಡದೆ ಆನ್‌ಲೈನ್ ಮೂಲಕ ದೂರು ಸಲ್ಲಿಸಿ, ಅದರ ಪ್ರಗತಿಯನ್ನು ಪರಿಶೀಲಿಸಲು ಹಾಗೂ ನಿಗದಿತ ಅವಧಿಯಲ್ಲಿ ಪರಿಹಾರ ಪಡೆಯಲು ಅನುಕೂಲವಾಗಲಿದೆ.

## ಬಿಷ್ಕೆಕ್ ಎಸ್‌ಸಿಒ ಶೃಂಗಸಭೆಯಲ್ಲಿ ಮೋದಿ-ಕ್ಸಿ ಭೇಟಿ ದ್ವಿಪಕ್ಷೀಯ ಮಾತುಕತೆ ಸಾಧ್ಯತೆ ಇಲ್ಲ

ವಿಜಯ ದುಂಬಿ ಸುದ್ದಿ....

**ಬಿಷ್ಕೆಕ್/ನವದೆಹಲಿ: ಕಿರ್ಗಿಸ್ತಾನ್ ರಾಜಧಾನಿ ಬಿಷ್ಕೆಕ್‌ನಲ್ಲಿ ನಡೆಯುತ್ತಿರುವ 26ನೇ ಶಾಂಘೈ ಸಹಕಾರ ಸಂಸ್ಥೆ (ಎಸ್‌ಸಿಒ) ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಭಾಗವಹಿಸುತ್ತಿದ್ದರೂ, ಇಬ್ಬರ ನಡುವೆ ಯಾವುದೇ ಔಪಚಾರಿಕ ದ್ವಿಪಕ್ಷೀಯ ಸಭೆ ನಡೆಯುವ ಸಾಧ್ಯತೆ ಇಲ್ಲ ಎಂದು ರಾಜತಾಂತ್ರಿಕ ಮೂಲಗಳು ತಿಳಿಸಿವೆ.**

ಎರಡು ದಿನಗಳ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ಕಿರ್ಗಿಸ್ತಾನ್‌ಗೆ ಆಗಮಿಸಿದ್ದರೆ, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಒಂದು ದಿನ ಮುಂಚಿತವಾಗಿಯೇ ಬಿಷ್ಕೆಕ್ ತಲುಪಿದ್ದರು. ಭಾರತ ಮತ್ತು ಚೀನಾ ನಡುವಿನ ದೀರ್ಘಕಾಲದ ಗಡಿ ವಿವಾದ ಹಾಗೂ ವಿಶೇಷ ಪ್ರತಿನಿಧಿಗಳ ಕಾರ್ಯವಿಧಾನದ ಕು-ರಿತ ಚರ್ಚೆಗಳು ಮುಂದುವರಿದಿರುವ ಸಂದರ್ಭದಲ್ಲಿ ಉಭಯ ನಾಯಕರು ಒಂದೇ ವೇದಿಕೆಯಲ್ಲಿ ಭಾಗವಹಿಸುತ್ತಿರುವುದು ಮಹತ್ವ



ಪಡೆದಿದೆ. ಆದಾಗ್ಯೂ, ಸದ್ಯಕ್ಕೆ ಉನ್ನತ ಮಟ್ಟದ ದ್ವಿಪಕ್ಷೀಯ ಮಾತುಕತೆಗೆ ಯಾವುದೇ ಕಾರ್ಯಕ್ರಮ ನಿಗದಿಯಾಗಿಲ್ಲ ಎನ್ನಲಾಗಿದೆ.

ಮಹಾತ್ಮಗಾಂಧಿ ಸ್ಮಾರಕಕ್ಕೆ ಮೋದಿ ಭೇಟಿ

ಕಿರ್ಗಿಸ್ತಾನ್‌ಗೆ ಆಗಮಿಸಿದ ಬಳಿಕ ಪ್ರಧಾನಿ ಮೋದಿ ಅವರು 2015ರಲ್ಲಿ ತಾವು ಉದ್ಘಾಟಿಸಿದ್ದ ಮಹಾತ್ಮ ಗಾಂಧಿ ಸ್ಮಾರಕಕ್ಕೆ ತೆರಳಿ ಗೌರವ ಸಲ್ಲಿಸಿದರು. ವಿಮಾನ ನಿಲ್ದಾಣದಲ್ಲಿ ಕಿರ್ಗಿಸ್ತಾನ್ ಸಚಿವ ಸಂಪುಟದ ಅಧ್ಯಕ್ಷ ಹಾಗೂ ಅಧ್ಯಕ್ಷೀಯ ಆಡಳಿತದ ಮುಖ್ಯಸ್ಥ ಅಡಿಲ್ಬೆಕ್ ಕಾಸಿಮಲೀವ್ ಅವರು ಪ್ರಧಾನಿಯನ್ನು ಸ್ವಾಗತಿಸಿದರು.

ಎಸ್‌ಸಿಒ ಶೃಂಗಸಭೆಯ ಸಂದರ್ಭ ಪ್ರಧಾನಿ ಮೋದಿ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹಾಗೂ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಸೇರಿದಂತೆ ಹಲವು ಪ್ರಮುಖ ನಾಯಕರನ್ನು ಭೇಟಿ ಮಾಡಿ ದ್ವಿಪಕ್ಷೀಯ ಮಾತುಕತೆ ನಡೆಸುವ ನಿರೀಕ್ಷೆಯಿದೆ.

ಸೆಪ್ಟೆಂಬರ್‌ನಲ್ಲಿ ದೆಹಲಿಯಲ್ಲಿ ಮತ್ತೆ ಭೇಟಿ

ಬಿಷ್ಕೆಕ್ ಶೃಂಗಸಭೆಯ ಬಳಿಕ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ಸೆಪ್ಟೆಂಬರ್ 12-13ರಂದು ನವದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ (BRICS) ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಭಾರತಕ್ಕೆ ಆಗಮಿಸುವ ನಿರೀಕ್ಷೆಯಿದೆ. ಬಳಿಕ ಅವರು ಅಮೆರಿಕಕ್ಕೆ ಭೇಟಿ ನೀಡಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾಗುವ ಸಾಧ್ಯತೆಯೂ ಇದೆ ಎಂದು ರಾಜತಾಂತ್ರಿಕ ಮೂಲಗಳು ತಿಳಿಸಿವೆ.

ಪ್ರಾದೇಶಿಕ ಭದ್ರತೆ, ವ್ಯಾಪಾರ ಹಾಗೂ ಜಾಗತಿಕ ವಿಚಾರಗಳ ಕುರಿತು ಚರ್ಚಿಸಲು 10 ಸದಸ್ಯ ರಾಷ್ಟ್ರಗಳು ಮತ್ತು ವಿವಿಧ ಪಾಲುದಾರ ದೇಶಗಳನ್ನು ಒಂದೇ ವೇದಿಕೆಗೆ ತರುವ ಎಸ್‌ಸಿಒ ಶೃಂಗಸಭೆಯಲ್ಲಿ ಮೋದಿ ಹಾಗೂ ಕ್ಸಿ ಜಿನ್‌ಪಿಂಗ್ ಅವರ ಉಪಸ್ಥಿತಿ ರಾಜ-ತಾಂತ್ರಿಕ ವಲಯದಲ್ಲಿ ಕುತೂಹಲ ಮೂಡಿಸಿದೆ.

# ಬೆಂಗಳೂರಲ್ಲಿ ನೆಲೆಸಿದ್ದ 39 ಅಕ್ರಮ ಬಾಂಗ್ಲಾದೇಶಿ ಪ್ರಜೆಗಳ ಗಡಿಪಾರು..!

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ನಗರದಲ್ಲಿ ಅಕ್ರಮವಾಗಿ ನೆಲೆಸಿದ್ದರೆಂದು ಗುರುತಿಸಲಾದ 39 ಬಾಂಗ್ಲಾದೇಶಿ ಪ್ರಜೆಗಳನ್ನು ಬೆಂಗಳೂರು ಪೊಲೀಸರು ಬಿಗಿ ಭದ್ರತೆಯಲ್ಲಿ ಗಡಿಪಾರು ಪ್ರಕ್ರಿಯೆಗಾಗಿ ಕರೆದೊಯ್ದಿದ್ದಾರೆ.ಬೈಯಪ್ಪನಹಳ್ಳಿಯ ಎಸ್‌ಎಂವಿಟಿ ರೈಲ್ವೆ ಟರ್ಮಿನಲ್‌ನಿಂದ 31 ಮಂದಿಯನ್ನು ರೈಲಿನ ಮೂಲಕ ಹಾಗೂ 8 ಮಂದಿಯನ್ನು ವಿಮಾನದ ಮೂಲಕ ಪಶ್ಚಿಮ ಬಂಗಾಳದ ಗಡಿ ಭಾಗಕ್ಕೆ ಕರೆದೊಯ್ಯಲಾಗುತ್ತಿದೆ. ಅಲ್ಲಿ ಅಗತ್ಯ ಕಾನೂನು ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದ ಬಳಿಕ ಬಾಂಗ್ಲಾದೇಶಕ್ಕೆ ಹಸ್ತಾಂತರಿಸುವ ಪ್ರಕ್ರಿಯೆ ನಡೆಯಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.**

ನಗರದಲ್ಲಿ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ಹಾಗೂ ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡು ನೆಲೆಸಿರುವ ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಲು ಬೆಂಗಳೂರು ನಗರ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ವಿಶೇಷ ಕಾರ್ಯಾಚರಣೆಗಳು ಮುಂದುವರಿದಿವೆ.

ವೀಸಾ ಅವಧಿ ಮುಗಿದಿದ್ದರೂ ಅಥವಾ ಯಾವುದೇ ಅಧಿಕೃತ ದಾಖಲೆಗಳಿಲ್ಲದೆ ನಗರದ ವಿವಿಧ ಪ್ರದೇಶಗಳಲ್ಲಿ ಕಾರ್ಮಿಕರು ಹಾಗೂ



ಇತರ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದವರನ್ನು ಗುರಿಯಾಗಿಸಿಕೊಂಡು ಈ ಕಾರ್ಯಾಚರಣೆ ನಡೆಸಲಾಗಿದೆ. ಬೆಂಗಳೂರಿನ ವಿವಿಧ 10 ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಅಕ್ರಮ ವಲಸಿಗರೆಂದು ಗುರುತಿಸಲಾದ 39 ಬಾಂಗ್ಲಾದೇಶಿ ಪ್ರಜೆಗಳನ್ನು ಬಂಧಿಸಲಾಗಿತ್ತು.

20ಕ್ಕೂ ಹೆಚ್ಚು ಪೊಲೀಸರ ಕಾವಲು

ಬಂಧಿತರನ್ನು ಎಸ್‌ಎಂವಿಟಿ ರೈಲ್ವೆ ಟರ್ಮಿನಲ್‌ನಿಂದ ಪಶ್ಚಿಮ ಬಂಗಾಳದ ಮಾಲ್ಡಾ ಗಡಿ ಭಾಗದವರೆಗೆ ಸುಮಾರು 20ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯ ಕಾವಲಿನಲ್ಲಿ ಕರೆದೊಯ್ಯಲಾಗುತ್ತಿದೆ.ಮಾಲ್ಡಾ ಗಡಿ ಭಾಗ ತಲುಪಿದ ಬಳಿಕ ಅಲ್ಲಿನ ಗಡಿ ಭದ್ರತಾ ಪಡೆ ಹಾಗೂ ವಲಸೆ (ಇಮಿಗ್ರೇಷನ್) ಅಧಿಕಾರಿಗಳ ಸಹಯೋಗದಲ್ಲಿ ಬಂಧಿತರ ರಾಷ್ಟ್ರೀಯತೆ ಮತ್ತು ದಾಖಲೆಗಳ ಪರಿಶೀಲನೆ ನಡೆಸಿ, ನಿಯಮಾನುಸಾರ ಬಾಂಗ್ಲಾದೇಶದ ಅಧಿಕಾರಿಗಳಿಗೆ ಹಸ್ತಾಂತರಿಸುವ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿದುಬಂದಿದೆ.

ಅಕ್ರಮ ವಲಸೆ ವಿರುದ್ಧ ಕಣ್ಗಾವಲು

ಬೆಂಗಳೂರು ಸೇರಿದಂತೆ ಕರ್ನಾಟಕದ ವಿವಿಧೆಡೆ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಿ ಗಡಿಪಾರು ಮಾಡಿರುವ ಹಲವು ಪ್ರಕರಣಗಳು ಈ ಹಿಂದೆಯೂ ನಡೆದಿವೆ. ಎಲೆಕ್ಟ್ರಾನಿಕ್ ಸಿಟಿ, ಮಹದೇವಪುರ, ವರ್ತೂರು ಹಾಗೂ ರಾಮಮೂರ್ತಿನಗರ ಸೇರಿದಂತೆ ಹಲವು ಪ್ರದೇಶಗಳಲ್ಲಿ ಪೊಲೀಸರು ಪರಿಶೀಲನೆ ನಡೆಸಿ, ಅಕ್ರಮ ದಾಖಲೆಗಳನ್ನು ಹೊಂದಿರುವ ಆರೋಪದ ಮೇಲೆ ವಿದೇಶಿ ಪ್ರಜೆಗಳನ್ನು ವಶಕ್ಕೆ ಪಡೆದಿದ್ದರು. ಅಕ್ರಮ ವಲಸೆ ತಡೆಯಲು ರಾಜ್ಯದ ವಿವಿಧ ಭದ್ರತಾ ಏಜೆನ್ಸಿಗಳು ತನಿಖೆ ಹಾಗೂ ಕಣ್ಗಾವಲನ್ನು ಮುಂದುವರಿಸಿವೆ.

ಗಡಿಪಾರು ಕ್ರಮಕ್ಕೆ ವೇಗ

ಕರ್ನಾಟಕದಲ್ಲಿ ಅಕ್ರಮ ವಲಸಿಗರ ವಿರುದ್ಧದ ಕ್ರಮವನ್ನು ಈ ವರ್ಷ ಮತ್ತಷ್ಟು ಚುರುಕುಗೊಳಿಸಲಾಗಿದೆ. ರಾಜ್ಯ ಸರ್ಕಾರದ ಅಂಕಿ-ಅಂಶಗಳ ಪ್ರಕಾರ, 2026ರ ಏಪ್ರಿಲ್ ಅಂತ್ಯದ ವೇಳೆಗೆ 427 ವಿದೇಶಿ ಪ್ರಜೆಗಳನ್ನು ಕರ್ನಾಟಕದಿಂದ ಗಡಿಪಾರು ಮಾಡಲಾಗಿತ್ತು. ಇವರಲ್ಲಿ 286 ಮಂದಿ ಬಾಂಗ್ಲಾದೇಶಿ ಪ್ರಜೆಗಳು ಎಂದು ತಿಳಿಸಲಾಗಿ-ತ್ತು. 2025ರಲ್ಲಿ 401 ಹಾಗೂ 2024ರಲ್ಲಿ 339 ವಿದೇಶಿ ಪ್ರಜೆಗಳನ್ನು ಗಡಿಪಾರು ಮಾಡಲಾಗಿತ್ತು ಎಂದು ಸರ್ಕಾರದ ಅಂಕಿ-ಅಂಶಗಳು ಹೇಳುತ್ತವೆ.

ಇದೇ ವೇಳೆ, ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕದಲ್ಲಿ 911 ಅಕ್ರಮ ವಲಸಿಗರನ್ನು ಗುರುತಿಸಲಾಗಿದ್ದು, ಅವರಲ್ಲಿ 868 ಮಂದಿ ಬಾಂಗ್ಲಾದೇಶದವರು ಎಂದು ರಾಜ್ಯ ಸರ್ಕಾರದ ಮಾಹಿತಿ ತಿಳಿಸಿದೆ. ಈ ಪೈಕಿ 365 ಮಂದಿ ಅಪರಾಧ ಪ್ರಕರಣಗಳೊಂದಿಗೆ ಸಂಪರ್ಕ ಹೊಂದಿದ್ದರು ಎಂಬ ಮಾಹಿತಿಯೂ ಹೊರಬಿದ್ದಿದೆ.

ಬೆಂಗಳೂರಿನಿಂದ ಮಾಲ್ಡಾಕ್ಕೆ ಕರೆದೊಯ್ಯಲಾಗಿರುವ 39 ಮಂದಿಯ ಪ್ರಕರಣದಲ್ಲಿ ಅವರ ರಾಷ್ಟ್ರೀಯತೆ, ದಾಖಲೆಗಳು ಹಾಗೂ ಭಾರತದಲ್ಲಿ ಕಾನೂನುಬದ್ಧವಾಗಿ ವಾಸಿಸುತ್ತಿದ್ದರೇ ಎಂಬುದರ ಅಂತಿಮ ಪರಿಶೀಲನೆ ಪ್ರಮುಖ ಹಂತವಾಗಲಿದೆ. ಬಳಿಕ ಭಾರತ ಮತ್ತು ಬಾಂಗ್ಲಾದೇಶದ ಸಂಬಂಧಪಟ್ಟ ಅಧಿಕಾರಿಗಳ ಸಮನ್ವಯದಲ್ಲಿ ನಿಯಮಾನುಸಾರ ಹಸ್ತಾಂತರ ಅಥವಾ ಗಡಿಪಾರು ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

# ಮಿಸ್ಟರ್ ಪ್ರಿಯಾಂಕ್ ಖರ್ಗೆ, ನನ್ನ ಹತ್ರ ನಿಮ್ಮ ಆಟ ನಡೆಯಲ್ಲ : ಕುಮಾರಸ್ವಾಮಿ ವಾಗ್ದಾಳಿ

ವಿಜಯ ದುಂಬಿ ಸುದ್ದಿ....

**ತುಮಕೂರು: ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಾಗ್ದಾಳಿ ಮುಂದುವರಿಸಿದ್ದು, ತಾವು ಕೇಳುತ್ತಿರುವ ನಿರ್ದಿಷ್ಟ ಪ್ರಶ್ನೆಗಳಿಗೆ ಉತ್ತರ ನೀಡದೆ ಕೇವಲ 'ಎಕ್ಸ್' ವೇದಿಕೆಯಲ್ಲಿ ಮಾತನಾಡಿ ಜಾರಿಕೊಳ್ಳುತ್ತಿರುವುದೇಕೆ ಎಂದು ಪ್ರಶ್ನಿಸಿದ್ದಾರೆ.**

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಸಚಿವರು ಕ್ಯಾಮೆರಾ ಮುಂದೆ ಮಾತನಾಡದೆ 'ಎಕ್ಸ್'ನಲ್ಲಿ ಹೇಳಿಕೆ ನೀಡಿದ್ದಾರೆ. "ಬೆಟ್ಟ ಅಗೆದು ಇಲಿ ಹಿಡಿದಂತೆ ಏನೋ ಬಿಟ್ಟಿದ್ದಾರೆ. ನೀವು ಮಾಡುತ್ತಿರುವುದೇ ಚಿತ್ರಾನ್ನ, ಯಾರಿಗೆ ಮೃಷ್ಟಾನ್ನ ಕೊಟ್ಟಿದ್ದೀರಿ?" ಎಂದು ವ್ಯಂಗ್ಯವಾಡಿದರು. "ಪ್ರಿಯಾಂಕ್ ಖರ್ಗೆ, ನನ್ನನ್ನು ಆರ್‌ಎಸ್‌ಎಸ್, ಬಿಜೆಪಿಯವರನ್ನು ಆಟ ಆಡಿಸಿದಂತೆ ಆಟ ಆಡಿಸಲು ಸಾಧ್ಯವಿಲ್ಲ. ನನ್ನ ಹತ್ತಿರ ಆಟ ಆಡಲು ಆಗುವುದಿಲ್ಲ. ಮಿಸ್ಟರ್ ಪ್ರಿಯಾಂಕ್ ಖರ್ಗೆ, ನಾನು ಕದ್ದು ಹೋಗುವವನಲ್ಲ, ಪಲಾಯನ ಮಾಡುವುದಿಲ್ಲ" ಎಂದು ಕುಮಾರಸ್ವಾಮಿ ಗುಡುಗಿದರು.

ರೆಸಾರ್ಟ್‌ನಲ್ಲಿ ಕುಳಿತು ಒಎಂಆರ್ ಶೀಟ್ ತಿದ್ದಿಸಿದ ಅಧಿಕಾರಿಯನ್ನು ದೆಹಲಿಯಿಂದ ದೇವನಹಳ್ಳಿ ರೆಸಾರ್ಟ್‌ಗೆ ಕರೆತಂದು ಕೂರಿಸಿಕೊಂಡಿದ್ದು ಏಕೆ ಎಂದು ಪ್ರಶ್ನಿಸಿದ ಅವರು, ಬಳಿಕ ಆ ಅಧಿಕಾರಿಯನ್ನು ಸಿಐಡಿ ಅಧಿಕಾರಿಗಳ ಮುಂದೆ ಹಾಜರುಪಡಿಸಿದ್ದೀರಿ ಎಂದು ಆರೋಪಿಸಿದರು.

"24 ಮಂದಿಗೆ ಕೆಲಸ ಕೊಟ್ಟಿದ್ದೀರಲ್ಲ, ಅವರು ಯಾರ್ಯಾರ ಸಂಬಂಧಿಕರು ಎಂಬುದನ್ನು ಹೇಳಿ. ಸಂಬಂಧಿಕರಿಗೆ ಕೆಲಸ ಕೊಡಿಸಿದ್ದೇವೆ ಎಂದು ಹೇಳಿದ್ದೀರಿ. ಅದರ ಬಗ್ಗೆ ಸಚಿವರು ಉತ್ತರಿಸಬೇಕಲ್ಲವೇ?" ಎಂದು ಪ್ರಶ್ನಿಸಿದ ಅವರು, ತಮ್ಮ ಬಗ್ಗೆ ಮಾತನಾಡುವ ಮುನ್ನ ಸರಿಯಾದ ಮಾಹಿತಿ ಪಡೆದು ಮಾತನಾಡುವಂತೆ ಪ್ರಿಯಾಂಕ್ ಖರ್ಗೆ ಅವರಿಗೆ ತಿರುಗೇಟು ನೀಡಿದರು.



ಒಎಂಆರ್ ಶೀಟ್‌ಗಳಿಗೆ ಕಾರ್ಬನ್ ಬಳಸಿ ಅಕ್ರಮ ಎಸಗಿರುವ ಕುರಿತು ಬೀದಿ ಬೀದಿಯಲ್ಲಿ ಚರ್ಚೆಯಾಗುತ್ತಿದೆ. ತನಿಖೆಯಲ್ಲೂ ಅದು ಸಾಬೀತಾಗಿದೆ. ಫೋರೆನ್ಸಿಕ್ ಲ್ಯಾಬ್ ವರದಿಯಲ್ಲೂ ಈ ಬಗ್ಗೆ ರುಜುವಾತಾಗಿದೆ ಎಂದು ಕುಮಾರಸ್ವಾಮಿ ಹೇಳಿದರು. "ಸತ್ಯ ಹೀಗಿರುವಾಗ ಅದನ್ನು ಸಮರ್ಥಿಸಿಕೊಳ್ಳುವುದರಲ್ಲಿ ಅರ್ಥವೇನಿದೆ" ಎಂದು ಪ್ರಶ್ನಿಸಿದರು.

"ಬನ್ನಿ, ನಿಮ್ಮೊಂದಿಗೆ ಎಲ್ಲಿ ಬೇಕಾದರೂ ಚರ್ಚೆಗೆ ಬರುತ್ತೇನೆ. ಪಲಾಯನ ಮಾಡುವ ವ್ಯಕ್ತಿ ನಾನಲ್ಲ. ಪಲಾಯನದ ಪ್ರಶ್ನೆಯೇ ಇಲ್ಲ" ಎಂದು ಪ್ರಿಯಾಂಕ್ ಖರ್ಗೆ ಅವರಿಗೆ ಸವಾಲು ಹಾಕಿದರು. ಈ ವಿಚಾರವನ್ನು ಇಲ್ಲಿಗೆ ನಿಲ್ಲಿಸುವ ಪ್ರಶ್ನೆಯೇ ಇಲ್ಲ. ನಾಳೆ ದೆಹಲಿಯಲ್ಲಿ ಈ ಕುರಿತು ಸುದೀರ್ಘವಾಗಿ ಮಾಧ್ಯಮಗಳೊಂದಿಗೆ ಮಾತನಾಡುತ್ತೇನೆ. ನಿರುದ್ಯೋಗಿ ಯುವಕರ ಹಿತವನ್ನು ಬಲಿ ಕೊಡುವುದಕ್ಕೆ ನಿಮ್ಮನ್ನು ಬಿಡುವುದಿಲ್ಲ ಎಂದು ಕುಮಾರಸ್ವಾಮಿ ಎಚ್ಚರಿಕೆ ನೀಡಿದರು.

2028ರ ಚುನಾವಣೆಗೆ ರಾಜ್ಯ ರಾಜಕಾರಣಕ್ಕೆ ವಾಪಸ್ ರಾಜ್ಯ ರಾಜಕಾರಣಕ್ಕೆ ಮರಳುತ್ತೀರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ, "ನಾನು ರಾಜ್ಯ ರಾಜಕಾರಣಕ್ಕೆ ಬರುತ್ತೇನೆ. ಅದು ಈಗಲ್ಲ, 2028ರ ಸಾರ್ವತ್ರಿಕ ಚುನಾವಣೆಗೆ ಬರುತ್ತೇನೆ" ಎಂದು ಸ್ಪಷ್ಟಪಡಿಸಿದರು. "ಏನೋ ನಾನೇ ಮುಂದಿನ ಏಳೂವರೆ ವರ್ಷ ಗೂಟ ಹೊಡೆದುಕೊಂಡು ಇರುತ್ತೇನೆ ಅಂತಾರಲ್ಲ. ಆಗ ನೋಡೋಣ ಯಾರ ಗೂಟ ಇರುತ್ತದೆ? ಜನ ಗೂಟ ಕಿತ್ತಾಕುತ್ತಾರೆ" ಎಂದು ಹೇಳುವ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪರೋಕ್ಷವಾಗಿ ಟಾಂಗ್ ನೀಡಿದರು.

## ಇಂದು ಸೇವೆಯಿಂದ ನಿವೃತ್ತರಾಗಲಿದ್ದಾರೆ ಐಜಿಪಿ ಡಾ.ಬಿ.ಆರ್. ರವಿಕಾಂತೇಗೌಡ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಪೂರ್ವ ವಲಯದ ಐಜಿಪಿ ಡಾ. ಬಿ.ಆರ್. ರವಿಕಾಂತೇಗೌಡ ಅವರು ಇಂದು ಪೊಲೀಸ್ ಸೇವೆಯಿಂದ ನಿವೃತ್ತಿಯಾಗಲಿದ್ದಾರೆ. ಮಂಡ್ಯ ಜಿಲ್ಲೆಯವರಾದ ರವಿಕಾಂತೇಗೌಡ ಅವರು 1997ರಲ್ಲಿ ಪೊಲೀಸ್ ಇಲಾಖೆಗೆ ಸೇರ್ಪಡೆಯಾಗಿ, ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ತರಬೇತಿ ಪಡೆದ ಬಳಿಕ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಡಿವೈಎಸ್‌ಪಿಯಾಗಿ ವೃತ್ತಿಜೀವನ ಆರಂಭಿಸಿದ್ದರು. ನಂತರ ನಂಜನಗೂಡು ಉಪವಿಭಾಗದಲ್ಲಿಯೂ ಸೇವೆ ಸಲ್ಲಿಸಿದ್ದರು.**



ಹುಬ್ಬಳ್ಳಿ-ಧಾರವಾಡ ಹಾಗೂ ಮೈಸೂರು ನಗರದಲ್ಲಿ ಡಿಸಿಪಿಯಾಗಿ, ದಕ್ಷಿಣ ಕನ್ನಡ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಸ್‌ಪಿಯಾಗಿ ಕರ್ತವ್ಯ ನಿರ್ವಹಿಸಿದ್ದರು. ಬೆಂಗಳೂರು ನಗರದ ಮೂರು ವಿಭಾಗಗಳಲ್ಲಿ ಡಿಸಿಪಿಯಾಗಿ ಸೇವೆ ಸಲ್ಲಿಸಿದ ಬಳಿಕ ಡಿಐಜಿಯಾಗಿ ಬಡ್ತಿ ಪಡೆದು, ಬೆಂಗಳೂರು ನಗರದ ಅಪರಾಧ ಮತ್ತು ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತರಾಗಿಯೂ ಕಾರ್ಯನಿರ್ವಹಿಸಿದ್ದರು. ಐಜಿಪಿಯಾಗಿ ಬಡ್ತಿ ಪಡೆದ ಬಳಿಕ ಪೊಲೀಸ್ ಪ್ರಧಾನ ಕಚೇರಿ ಹಾಗೂ ಕೇಂದ್ರ ವಲಯದಲ್ಲಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿದ್ದರು. ಪ್ರಸ್ತುತ ಪೂರ್ವ ವಲಯದ ಐಜಿಪಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಅತ್ಯುತ್ತಮ ಸೇವೆಯನ್ನು ಪರಿಗಣಿಸಿ ರವಿಕಾಂತೇಗೌಡ ಅವರಿಗೆ ಮುಖ್ಯಮಂತ್ರಿ ಪದಕ ಹಾಗೂ ರಾಷ್ಟ್ರಪತಿ ಪದಕ ನೀಡಿ ಗೌರವಿಸಲಾಗಿದೆ. ಇಂದು ದಾವಣಗೆರೆ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಏರ್ಪಡಿಸಿದ್ದ ಬೀಳ್ಕೊಡುಗೆ ಕವಾಯತಿನಲ್ಲಿ ವಂದನೆ ಸ್ವೀಕರಿಸಿದ ಬಳಿಕ ರವಿಕಾಂತೇಗೌಡ ಅವರು ಮಾತನಾಡಿದರು.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಾಜ್ಯದಲ್ಲಿ 7 ತಿಂಗಳಲ್ಲಿ 558 ಕೋಟಿ ರೂ. ಸೈಬರ್ ವಂಚನೆ, ಸಂತ್ರಸ್ತರಿಗೆ ವಾಪಸ್ ಬಂದಿದ್ದು ಕೇವಲ 1.9 ಕೋಟಿ ಮಾತ್ರ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ರಾಜ್ಯದಲ್ಲಿ ದಿನದಿಂದ ದಿನಕ್ಕೆ ಸೈಬರ್ ವಂಚನೆಯ ಜಾಲ ವಿಸ್ತರಿಸುತ್ತಿದ್ದು, ಕೇವಲ ಏಳು ತಿಂಗಳ ಅವಧಿಯಲ್ಲಿ ಕರ್ನಾಟಕದ ಜನರು ಬರೋಬ್ಬರಿ ?558 ಕೋಟಿ ಕಳೆದುಕೊಂಡಿದ್ದಾರೆ. ಆದರೆ, ಗೃಹ ಇಲಾಖೆಯ ಅಧಿಕೃತ ಅಂಕಿ-ಅಂಶಗಳ ಪ್ರಕಾರ, ಸಂತ್ರಸ್ತರಿಗೆ ವಾಪಸ್ ದೊರೆತಿರುವುದು ಕೇವಲ 1.9 ಕೋಟಿ ಮಾತ್ರ.**

ಈ ವರ್ಷದ ಜನವರಿಯಿಂದ ಜುಲೈ ಅಂತ್ಯದವರೆಗೆ ಸೈಬರ್ ವಂಚನೆಯ ಮೂಲಕ ಜನರು ಕಳೆದುಕೊಂಡಿರುವ 558 ಕೋಟಿಯಲ್ಲಿ ಅಧಿಕಾರಿಗಳು 35.9 ಕೋಟಿಯನ್ನು ಮಧ್ಯಂತರ ಹಂತದಲ್ಲಿ ಸ್ಥಗಿತಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಸಂತ್ರಸ್ತರಿಗೆ ವಾಸ್ತವಿಕವಾಗಿ ಮರಳಿರುವ ಮೊತ್ತವು ಸ್ಥಗಿತಗೊಳಿಸಿದ ಹಣದ ಕೇವಲ ಶೇ.5ರಷ್ಟಿದ್ದು, ಒಟ್ಟು ವಂಚನೆಯ ಮೊತ್ತದ ಶೇ.0.4ಕ್ಕಿಂತಲೂ ಕಡಿಮೆಯಾಗಿದೆ. ಇದು ಸೈಬರ್ ಅಪರಾಧ ನಿಯಂತ್ರಣ ಹಾಗೂ ವಂಚನೆಯಾದ ಹಣವನ್ನು ಮರುಪಡೆಯುವಲ್ಲಿ ಎದುರಾಗುತ್ತಿರುವ ಸವಾಲುಗಳನ್ನು ಎತ್ತಿ ತೋರಿಸಿದೆ.

ಸಿಬ್ಬಂದಿ ಕೊರತೆ ದೊಡ್ಡ ಸವಾಲು ರಾಜ್ಯದ ಸೈಬರ್ ಅಪರಾಧ ಪೊಲೀಸ್ ವ್ಯವಸ್ಥೆಯು ತೀವ್ರ ಮಾನವಶಕ್ತಿ ಕೊರತೆಯನ್ನು ಎದುರಿಸುತ್ತಿರುವುದು ಹಣ ಮರುಪಡೆಯುವ ಪ್ರಕ್ರಿಯೆಯ ಮೇಲೂ ಪರಿಣಾಮ ಬೀರಿದೆ. ಲಭ್ಯವಿರುವ ಮಾಹಿತಿಯ ಪ್ರಕಾರ, ಬೆಂಗಳೂರು ಆಯುಕ್ತರ ಕಚೇರಿಯಲ್ಲಿರುವ ಸೈಬರ್ ಅಪರಾಧ ಪೊಲೀಸ್ ಠಾಣೆಯೊಂದರಲ್ಲೇ 200 ಹುದ್ದೆಗಳು ಸೇರಿದಂತೆ ಒಟ್ಟು 320 ಹುದ್ದೆಗಳು ಇನ್ನೂ ಖಾಲಿ ಉಳಿದಿವೆ. ಸಿಬ್ಬಂದಿಯ ಭಾರಿ ಕೊರತೆಯಿಂದ ಪ್ರಕರಣಗಳ ತನಿಖೆಯ ವೇಗ ಹಾಗೂ ಗುಣಮಟ್ಟದ ಮೇಲೆ ನೇರ ಪರಿಣಾಮ ಬೀರುತ್ತಿದೆ.




ಪ್ರಕರಣಗಳು ಇಳಿಕೆ, ನಷ್ಟದ ಮೊತ್ತ ಏರಿಕೆ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ ಇಳಿಕೆಯಾಗಿದ್ದರೂ, ಪ್ರತಿ ಪ್ರಕರಣದಲ್ಲಿ ವಂಚನೆಯಾಗುತ್ತಿರುವ ಸರಾಸರಿ ಮೊತ್ತ ಗಣನೀಯವಾಗಿ ಹೆಚ್ಚಾಗಿದೆ.2024: ರಾಜ್ಯದಲ್ಲಿ 17,890 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿದ್ದು, ಒಟ್ಟು 1,841 ಕೋಟಿ ನಷ್ಟವಾಗಿತ್ತು. ಈ ಪೈಕಿ 257.8 ಕೋಟಿಯನ್ನು ಸ್ಥಗಿತಗೊಳಿಸಲಾಗಿದ್ದು, 183.6 ಕೋಟಿಯನ್ನು ಸಂತ್ರಸ್ತರಿಗೆ ವಾಪಸ್ ನೀಡಲಾಗಿತ್ತು. ಪ್ರತಿ ಪ್ರಕರಣದ ಸರಾಸರಿ ನಷ್ಟ 10.3 ಲಕ್ಷ.

2025: ಒಟ್ಟು 10,703 ಪ್ರಕರಣಗಳು ವರದಿಯಾಗಿದ್ದು, 1,756.6 ಕೋಟಿ ನಷ್ಟ ಉಂಟಾಗಿತ್ತು. 158.5 ಕೋಟಿಯನ್ನು ಸ್ಥಗಿತಗೊಳಿಸಲಾಗಿದ್ದು, 76.7 ಕೋಟಿಯನ್ನು ಸಂತ್ರಸ್ತರಿಗೆ ಮರಳಿಸಲಾಗಿತ್ತು. ಪ್ರತಿ ಪ್ರಕರಣದ ಸರಾಸರಿ ನಷ್ಟ 16.4 ಲಕ್ಷ.ಇದರಿಂದ ಪ್ರಕರಣಗಳ ಸಂಖ್ಯೆ ಕಡಿಮೆಯಾಗುತ್ತಿದ್ದರೂ, ವಂಚಕರು ದೊಡ್ಡ ಮೊತ್ತದ ಹಣಕ್ಕೆ ಕನ್ನ ಹಾಕುತ್ತಿರುವುದು ಸ್ಪಷ್ಟವಾಗುತ್ತದೆ.

3 ವರ್ಷದಲ್ಲಿ 3,932 ಕೋಟಿ ವಂಚನೆ 2024ರಿಂದ 2026ರವರೆಗೆ ಕೇವಲ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಸೈಬರ್ ವಂಚನೆಯಿಂದ ?3,932 ಕೋಟಿ ನಷ್ಟವಾಗಿದೆ. ಇದರಲ್ಲಿ ಇದುವರೆಗೆ ಕೇವಲ ?262 ಕೋಟಿ ಮಾತ್ರ ಸಂತ್ರಸ್ತರಿಗೆ ಮರಳಿ ತಲುಪಿದೆ. ಸೈಬರ್ ಅಪರಾಧ ಘಟಕಗಳು, ಪೊಲೀಸ್ ಇಲಾಖೆ, ಬ್ಯಾಂಕ್‌ಗಳು, ಹಣಕಾಸು ಸಂಸ್ಥೆಗಳು ಹಾಗೂ ಸಂಬಂಧಿತ ಇಲಾಖೆಗಳ ನಡುವಿನ ಸಮನ್ವಯವನ್ನು ಬಲಪಡಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಇತ್ತೀಚೆಗೆ ವಿಧಾನಸಭೆಗೆ ತಿಳಿಸಿದ್ದರು.

ತನಿಖಾಧಿಕಾರಿಗಳಿಗೆ ಅಗತ್ಯವಿರುವ ದಾಖಲೆಗಳನ್ನು ಹಣಕಾಸು ಸಂಸ್ಥೆಗಳು ಯಾವುದೇ ವಿಳಂಬವಿಲ್ಲದೆ ಒದಗಿಸುವಂತೆ ಮಾಡುವುದು ಸಮನ್ವಯದ ಪ್ರಮುಖ ಉದ್ದೇಶವಾಗಿದೆ. ಜತೆಗೆ ಬಾಕಿ ಪ್ರಕರಣಗಳ ಪರಿಶೀಲನೆ, ವಿಳಂಬಕ್ಕೆ ಕಾರಣಗಳ ಪರಾಮರ್ಶೆ ಹಾಗೂ ದೀರ್ಘಕಾಲದಿಂದ ನನೆಗುದಿಗೆ ಬಿದ್ದಿರುವ ಪ್ರಕರಣಗಳಿಗೆ ಆದ್ಯತೆ ನೀಡಿ ನಿಯತಕಾಲಿಕವಾಗಿ ಪರಿಶೀಲನೆ ನಡೆಸುವುದಾಗಿ ಸರ್ಕಾರ ಭರವಸೆ ನೀಡಿದೆ.

ಸೈಬರ್ ವಂಚನೆಗೆ ಬಲಿಯಾಗುವವರ ಸಂಖ್ಯೆ ಹಾಗೂ ಕಳೆದುಕೊಳ್ಳುತ್ತಿರುವ ಹಣದ ಪ್ರಮಾಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸೈಬರ್ ಕಳ್ಳರ ವಿರುದ್ಧ ತ್ವರಿತ ಕ್ರಮ ಕೈಗೊಳ್ಳಲು ಪೊಲೀಸ್ ವ್ಯವಸ್ಥೆಯನ್ನು ಮತ್ತಷ್ಟು ಆಧುನೀಕರಿಸುವುದು ಹಾಗೂ ವಂಚನೆಯಾದ ಹಣವನ್ನು ಸಾಧ್ಯವಾದಷ್ಟು ಬೇಗ ಸ್ಥಗಿತಗೊಳಿಸಿ ಸಂತ್ರಸ್ತರಿಗೆ ಮರಳಿಸುವ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯವಿದೆ.

# ರಾಹುಲ್ ಗಾಂಧಿಯನ್ನು ಪ್ರಧಾನಿ ಅಭ್ಯರ್ಥಿಯಾಗಿ ಟಿವಿಕೆ ಬೆಂಬಲಿಸದಿದ್ದರೆ ರಾಜೀನಾಮೆ : ಕಾಂಗ್ರೆಸ್ ಸಚಿವರು

ವಿಜಯ ದುಂಬಿ ಸುದ್ದಿ....

**ನಾಗರಕೋಯಿಲ್: 2029ರ ಲೋಕಸಭಾ ಚುನಾವಣೆಯಲ್ಲಿ ರಾಹುಲ್ ಗಾಂಧಿ ಅವರನ್ನು ಪ್ರಧಾನಿ ಅಭ್ಯರ್ಥಿಯಾಗಿ ಬೆಂಬಲಿಸಲು ತಮಿಳಗ ವೆಟ್ರಿ ಕಳಗಂ (ಟಿವಿಕೆ) ಒಪ್ಪದಿದ್ದರೆ, ತಾವು ಹಾಗೂ ಸಹೋದ್ಯೋಗಿ ಪಿ. ವಿಶ್ವನಾಥನ್ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ತಮಿಳುನಾಡು ಸಚಿವ ಎಸ್. ರಾಜೇಶ್ ಕುಮಾರ್ ಹೇಳಿದ್ದಾರೆ.**

ರಾಹುಲ್ ಗಾಂಧಿ ಅವರನ್ನು ಭಾರತದ ಮುಂದಿನ ಪ್ರಧಾನಿಯಾಗಿ ಕಾಂಗ್ರೆಸ್ ಬೆಂಬಲಿಸುತ್ತಿದ್ದು, ಮುಂದಿನ ಲೋಕಸಭಾ ಚುನಾವಣೆಯಲ್ಲಿ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರನ್ನು ಪ್ರಧಾನಿ ಅಭ್ಯರ್ಥಿಯಾಗಿ ಬಿಂಬಿಸಬೇಕು ಎಂಬ ಟಿವಿಕೆ ನಾಯಕರು ಹಾಗೂ ಕಾರ್ಯಕರ್ತರ ಒತ್ತಾಯದ ನಡುವೆಯೇ ರಾಜೇಶ್ ಕುಮಾರ್ ಈ ಹೇಳಿಕೆ ನೀಡಿದ್ದಾರೆ.



ಟಿವಿಕೆ ಈ ವಿಚಾರದಲ್ಲಿ ಕಾಂಗ್ರೆಸ್‌ಗೆ ಬೆಂಬಲ ನೀಡದಿದ್ದರೆ, ತಾವು ಮತ್ತು ಉನ್ನತ ಶಿಕ್ಷಣ ಸಚಿವ ಪಿ. ವಿಶ್ವನಾಥನ್ ತಮ್ಮ ಸಚಿವ ಸ್ಥಾನಗಳಿಗೆ ರಾಜೀನಾಮೆ ನೀಡಲು ಸಿದ್ಧರಿರುವುದಾಗಿ ಕುಮಾರ್ ತಿಳಿಸಿದ್ದಾರೆ.

ಮೇ ತಿಂಗಳಲ್ಲಿ ಸರ್ಕಾರ ರಚನೆಗೆ ವಿಜಯ್ ನೇತೃತ್ವದ ಟಿವಿಕೆಗೆ ಕಾಂಗ್ರೆಸ್ ಬೆಂಬಲ ನೀಡಿದ ಬಳಿಕ ಕಾಂಗ್ರೆಸ್‌ಗೆ ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸಲಾಗಿತ್ತು. ಇದೀಗ ರಾಜೇಶ್ ಕುಮಾರ್ ಅವರ ಹೇಳಿಕೆ ಕಾಂಗ್ರೆಸ್ ಹಾಗೂ ಟಿವಿಕೆ ನಡುವಿನ ಮೈತ್ರಿಯಲ್ಲಿ ಭಿನ್ನಾಭಿಪ್ರಾಯ ಉಂಟಾಗುವ ಸಾಧ್ಯತೆಯನ್ನು ಹೆಚ್ಚಿಸಿದೆ.

ಕನ್ಯಾಕುಮಾರಿಯಲ್ಲಿ ನಿನ್ನೆ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ರಾಜೇಶ್ ಕುಮಾರ್, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸುವ ಏಕೈಕ ಪ್ರಧಾನಿ ಅಭ್ಯರ್ಥಿ ರಾಹುಲ್ ಗಾಂಧಿ ಎಂಬ ನಿಲುವನ್ನು ಸ್ಪಷ್ಟಪಡಿಸಿದ್ದಾರೆ. ಪಿ. ವಿಶ್ವನಾಥನ್ ಅವರ ಪ್ರತಿಕ್ರಿಯೆ ತಕ್ಷಣಕ್ಕೆ ಲಭ್ಯವಾಗಿಲ್ಲ. ಆದರೆ ರಾಜೇಶ್ ಕುಮಾರ್ ಅವರ ಹೇಳಿಕೆ ಕಾಂಗ್ರೆಸ್ ಮತ್ತು ಟಿವಿಕೆ ನಡುವಿನ ಸಂಬಂಧದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.

# ನಾಳೆಯಿಂದ ಬಿಜೆಪಿ 10 ದಿನ ಪಾದಯಾತ್ರೆ : 2028ರ ಚುನಾವಣೆಗೆ ಉತ್ತರ ಕರ್ನಾಟಕದಲ್ಲಿ ಕಮಲ ಕಸರತ್ತು

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಸಚಿವ ಸ್ಥಾನಕ್ಕೆ ಬಿ. ನಾಗೇಂದ್ರ ರಾಜೀನಾಮೆ ನೀಡಿದ ಬೆನ್ನಲ್ಲೇ ರಾಜ್ಯ ಬಿಜೆಪಿ ತನ್ನ ಹೋರಾಟದ ದಿಕ್ಕನ್ನು ಬದಲಿಸದೆ, ನಾಳೆಯಿಂದ ಸೆ.10ರವರೆಗೆ ರಾಯಚೂರು ಜಿಲ್ಲೆಯ ಲಿಂಗಸುಗೂರಿನಿಂದ ಬಳ್ಳಾರಿವರೆಗೆ ಹಮ್ಮಿಕೊಂಡಿರುವ 10 ದಿನಗಳ ಪಾದಯಾತ್ರೆಗೆ ಸಜ್ಜಾಗಿದೆ.**

ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಪಕ್ಷ ಬಿಜೆಪಿ ಮೊದಲ ಬಾರಿಗೆ ದೊಡ್ಡ ಮಟ್ಟದಲ್ಲಿ ಬೀದಿಗಿಳಿಯುತ್ತಿದ್ದು, ಪಾದಯಾತ್ರೆ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ವಿರುದ್ಧ ಹೋರಾಟಕ್ಕೆ ರಣಕಹಳೆ ಮೊಳಗಿಸಲಿದೆ. ವಿಶೇಷವೆಂದರೆ, ಈ ಹಿಂದೆ ಬಿಜೆಪಿ ಸರ್ಕಾರದ ವಿರುದ್ಧ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಂಗಳೂರಿನಿಂದ ಬಳ್ಳಾರಿವರೆಗೆ ರೆಡ್ಡಿ ಸಹೋದರರ ವಿರುದ್ಧ ಪಾದಯಾತ್ರೆ ನಡೆಸಿದ್ದರು. ಇದೀಗ ಸರಿಸುಮಾರು ಒಂದು ದಶಕದ ಬಳಿಕ ರಾಜ್ಯದಲ್ಲಿ ಆಡಳಿತಾರೂಢ ಸರ್ಕಾರದ ವಿರುದ್ಧ ಪ್ರತಿಪಕ್ಷವೊಂದು ಪಾದಯಾತ್ರೆ ನಡೆಸುತ್ತಿರುವುದು ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ.

ಅಂದು ಬಿಜೆಪಿ ಸರ್ಕಾರದ ವಿರುದ್ಧ ಕಾಂಗ್ರೆಸ್ ಪಾದಯಾತ್ರೆ ನಡೆಸಿದ್ದರೆ, ಇದೀಗ ಅದೇ ಬಳ್ಳಾರಿಯನ್ನು ಕೇಂದ್ರವಾಗಿಟ್ಟುಕೊಂಡು ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಪಾದಯಾತ್ರೆ ನಡೆಸುತ್ತಿದೆ. ಈ ಮೂಲಕ ಕಾಂಗ್ರೆಸ್ ಹೂಡಿದ್ದ ರಾಜಕೀಯ ತಂತ್ರಕ್ಕೆ ಪ್ರತಿತಂತ್ರ ರೂಪಿಸಲು ಬಿಜೆಪಿ ಮುಂದಾಗಿದೆ.

ನಾಗೇಂದ್ರ ರಾಜೀನಾಮೆ ಬಳಿಕವೂ ಹೋರಾಟ ಮುಂದುವರಿಕೆ ಬಿ. ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರೂ ಪಾದಯಾತ್ರೆ ಮುಂದುವರಿಸುವುದಾಗಿ ಬಿಜೆಪಿ ಸ್ಪಷ್ಟಪಡಿಸಿದೆ. ಇದು ಕೇವಲ ವಾಲ್ಮೀಕಿ ನಿಗಮದ ಹಣದ ಅಕ್ರಮದ ವಿರುದ್ಧದ ಹೋರಾಟವಲ್ಲ. ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯಗಳನ್ನು ಜನರ ಮುಂದಿಡುವ ರಾಜಕೀಯ ಅಭಿಯಾನವಾಗಲಿದೆ ಎಂದು ಪಕ್ಷ ಹೇಳಿದೆ. ಸುಮಾರು 185ರಿಂದ 190 ಕಿ.ಮೀ. ವ್ಯಾಪ್ತಿಯಲ್ಲಿ ಸಾಗಲಿರುವ ಪಾದಯಾತ್ರೆ ಒಂಬತ್ತು ವಿಧಾನಸಭಾ ಕ್ಷೇತ್ರಗಳನ್ನು ಹಾದುಹೋಗಲಿದೆ. ಲಿಂಗಸುಗೂರಿನಿಂದ ಆರಂಭವಾಗಿ ಮಸ್ಕಿ, ಸಿಂಧನೂರು, ಹಂಚನಾಳ ಕ್ಯಾಂಪ್, ಕನಕಗಿರಿ, ಗಂಗಾವತಿ, ಕಂಪ್ಲಿ, ಸಂಡೂರು ಹಾಗೂ ಬಳ್ಳಾರಿ ಗ್ರಾಮೀಣ ಮಾರ್ಗವಾಗಿ ಸಾಗುವ ಯಾತ್ರೆ ಬಳ್ಳಾರಿ ನಗರದಲ್ಲಿ ಅಂತ್ಯಗೊಳ್ಳಲಿದೆ. ರಾಜಕೀಯ ಮೈಲೇಜ್ ಪಡೆಯುವ ಲೆಕ್ಕಾಚಾರ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣದ ಅಕ್ರಮದ ಆರೋಪ ರಾಜ್ಯ ರಾಜಕಾರಣದಲ್ಲಿ ದೊಡ್ಡ ವಿವಾದಕ್ಕೆ ಕಾರಣವಾಗಿತ್ತು. ಈ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ ವಿಧಾನಮಂಡಲದ ಒಳಗೂ ಹೊರಗೂ ಸರ್ಕಾರದ ವಿರುದ್ಧ ನಿರಂತರ ಹೋರಾಟ ನಡೆಸಿತ್ತು. ಇದೇ ಹಿನ್ನೆಲೆಯಲ್ಲಿ ನಾಗೇಂದ್ರ ಅವರ ರಾಜೀನಾಮೆಗೆ ಬಿಜೆಪಿ ಒತ್ತಡ ಹೇರಿತ್ತು. ಆ.28ರಂದು ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ಬಿಜೆಪಿಯ ಹೋರಾಟಕ್ಕೆ ದೊರೆತ ಮೊದಲ ರಾಜಕೀಯ ಫಲಿತಾಂಶ ಎಂಬ ಸಂದೇಶವನ್ನು ಜನರಿಗೆ ನೀಡಲು ಪಕ್ಷಕ್ಕೆ ಅವಕಾಶ ಕಲ್ಪಿಸಿದೆ. ಆದರೆ, ನಾಗೇಂದ್ರ ರಾಜೀನಾಮೆಯೊಂದಿಗೆ ಹೋರಾಟ ಮುಗಿಯುವುದಿಲ್ಲ. ಅಕ್ರಮದಲ್ಲಿ ಭಾಗಿಯಾಗಿರುವ ದೊಡ್ಡವರ ಪಾತ್ರವೂ ಬಹಿರಂಗವಾಗಬೇಕು ಎಂಬ ನಿಲುವನ್ನು ಬಿಜೆಪಿ ನಾಯಕತ್ವ ಮುಂದಿಟ್ಟಿದೆ.



ವಿಶಾಲ ವಿಷಯಗಳತ್ತ ಬಿಜೆಪಿ ಚಿತ್ತ ಪಾದಯಾತ್ರೆಯ ಸ್ವರೂಪ ಇದೀಗ ವಿಸ್ತಾರಗೊಂಡಿದ್ದು, ದಲಿತರ ಅಭಿವೃದ್ಧಿ ನಿಧಿಯ ಬಳಕೆ, ಬರಗಾಲ, ಉತ್ತರ ಕರ್ನಾಟಕದ ಅಭಿವೃದ್ಧಿ, ನಿರುದ್ಯೋಗ, ಮೀಸಲಾತಿ, ಸರ್ಕಾರಿ ನೇಮಕಾತಿ ಹಾಗೂ ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯ ಸೇರಿದಂತೆ ಹಲವು ವಿಚಾರಗಳನ್ನು ಜನರ ಮುಂದಿಡಲು ಬಿಜೆಪಿ ಮುಂದಾಗಿದೆ. ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಾದ ಎಸ್‌ಸಿ-ಎಸ್‌ಪಿ-ಟಿಎಸ್‌ಪಿ ನಿಧಿಯ ಬಳಕೆ ಪ್ರಮುಖ ರಾಜಕೀಯ ಅಸ್ತ್ರವಾಗಲಿದೆ. ದಲಿತ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಧಿಯ ದುರ್ಬಳಕೆಯ ಆರೋಪಗಳ ಜತೆಗೆ ವಾಲ್ಮೀಕಿ ನಿಗಮದ ಹಣದ ಅಕ್ರಮದ ವಿಚಾರವನ್ನು ಜನರ ಮುಂದಿಡುವುದು ಬಿಜೆಪಿಯ ತಂತ್ರವಾಗಿದೆ.

ಉತ್ತರ ಕರ್ನಾಟಕದ ಸಮಸ್ಯೆಗಳೇ ಪ್ರಚಾರದ ಕೇಂದ್ರ ರೈತರ ಸಂಕಷ್ಟ, ಬರಗಾಲ, ನೀರಾವರಿ ಸಮಸ್ಯೆ, ಉದ್ಯೋಗ ಸೃಷ್ಟಿಯ ಕೊರತೆ, ಸರ್ಕಾರಿ ನೇಮಕಾತಿಯಲ್ಲಿನ ಅಕ್ರಮದ ಆರೋಪ, ಮೀಸಲಾತಿ ವಿಚಾರ ಹಾಗೂ ಉತ್ತರ ಕರ್ನಾಟಕದ ಅಭಿವೃದ್ಧಿಯ ನಿರ್ಲಕ್ಷ್ಯವನ್ನು ಪಾದಯಾತ್ರೆಯ ಸಂದರ್ಭದಲ್ಲಿ ಪ್ರಮುಖವಾಗಿ ಪ್ರಸ್ತಾಪಿಸಲು ಬಿಜೆಪಿ ಸಿದ್ಧತೆ ನಡೆಸಿದೆ.

ಈ ಮೂಲಕ ವಾಲ್ಮೀಕಿ ನಿಗಮದ ಅಕ್ರಮದ ವಿಚಾರವನ್ನು ಮಾತ್ರ ಸೀಮಿತಗೊಳಿಸದೆ, ಉತ್ತರ ಕರ್ನಾಟಕದ ಹಲವು ಸಮಸ್ಯೆಗಳನ್ನು ಕಾಂಗ್ರೆಸ್ ಸರ್ಕಾರದ ವಿರುದ್ಧದ ರಾಜಕೀಯ ಕಥಾನಕವಾಗಿ ರೂಪಿಸಲು ಪಕ್ಷ ಮುಂದಾಗಿದೆ. ಯಾರು ಯಾರು ಹೆಜ್ಜೆ ಹಾಕಲಿದ್ದಾರೆ ಪಾದಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಬಿ. ಶ್ರೀರಾಮುಲು, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸೇರಿದಂತೆ ರಾಜ್ಯ ಮತ್ತು ಕೇಂದ್ರದ ಹಲವು ನಾಯಕರು ಪಾಲ್ಗೊಳ್ಳಲಿದ್ದಾರೆ. ಪಾದಯಾತ್ರೆ ಕೇವಲ ಬಿಜೆಪಿ ಸಂಘಟನಾ ಕಾರ್ಯಕ್ರಮವಾಗದೆ, ಕಾಂಗ್ರೆಸ್ ವಿರುದ್ಧದ ಪ್ರತಿಪಕ್ಷಗಳ ಒಗ್ಗಟ್ಟಿನ ವೇದಿಕೆಯಾಗುವ ಸಾಧ್ಯತೆಯೂ ಇದೆ.

2028ರ ಚುನಾವಣೆಗೆ ಈಗಿನಿಂದಲೇ ಸಿದ್ಧತೆ 2028ರ ವಿಧಾನಸಭಾ ಚುನಾವಣೆ ಇನ್ನೂ ದೂರವಿದ್ದರೂ ಬಿಜೆಪಿ ಈಗಿನಿಂದಲೇ ಬೂತ್ ಮಟ್ಟದ ಸಂಘಟನೆ ಬಲಪಡಿಸುವುದು, ಕಾರ್ಯಕರ್ತರನ್ನು ಚುರುಕುಗೊಳಿಸುವುದು, ಉತ್ತರ ಕರ್ನಾಟಕದ ಮತದಾರರೊಂದಿಗೆ ಸಂಪರ್ಕ ಸಾಧಿಸುವುದು ಹಾಗೂ ಕಾಂಗ್ರೆಸ್ ಸರ್ಕಾರದ ವಿರುದ್ಧ ನಿರಂತರ ರಾಜಕೀಯ ಕಥಾನಕ ನಿರ್ಮಿಸುವ ಪ್ರಯತ್ನಕ್ಕೆ ಚಾಲನೆ ನೀಡಿದೆ.

ರಾಯಚೂರು-ಬಳ್ಳಾರಿ ಭಾಗವು ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಮೂರು ಪಕ್ಷಗಳಿಗೂ ರಾಜಕೀಯವಾಗಿ ಮಹತ್ವದ ಪ್ರದೇಶ. ಹೀಗಾಗಿ ಹತ್ತು ದಿನಗಳ ಕಾಲ ಒಂಬತ್ತು ವಿಧಾನಸಭಾ ಕ್ಷೇತ್ರಗಳಲ್ಲಿ ಸಾಗಲಿರುವ ಪಾದಯಾತ್ರೆ ಪಕ್ಷದ ಕಾರ್ಯಕರ್ತರಿಗೆ ಸಂಘಟನಾ ಶಕ್ತಿ ತುಂಬುವ ಕಾರ್ಯಕ್ರಮವಾಗಿಯೂ ಪರಿಣಮಿಸಲಿದೆ.

ಒಟ್ಟಾರೆ, ಬಿಜೆಪಿ ಪಾದಯಾತ್ರೆ ಸಾಮಾನ್ಯ ಪ್ರತಿಭಟನಾ ಕಾರ್ಯಕ್ರಮಕ್ಕಿಂತಲೂ ಕಾಂಗ್ರೆಸ್ ಸರ್ಕಾರದ ವಿರುದ್ಧ ಉತ್ತರ ಕರ್ನಾಟಕದಲ್ಲಿ ರಾಜಕೀಯ ನೆಲೆ ಗಟ್ಟಿಗೊಳಿಸುವ ಹಾಗೂ 2028ರ ವಿಧಾನಸಭಾ ಚುನಾವಣೆಗೆ ಪಕ್ಷದ ಸಂಘಟನಾ ಯಂತ್ರವನ್ನು ಈಗಿನಿಂದಲೇ ಸಜ್ಜುಗೊಳಿಸುವ ಕಾರ್ಯತಂತ್ರವಾಗಿ ಕಾಣುತ್ತಿದೆ.

## ಅದ್ದಪ್ಪ ಭೀರಲಿಂಗೇಶ್ವರ ಗಂಗೆಸ್ಥಳ ಮೆರವಣಿಗೆ

ವಿಜಯ ದುಂಬಿ ಸುದ್ದಿ....

ಬಳ್ಳಾರಿ / ಕಂಪ್ಲಿ: ಪಟ್ಟಣದಲ್ಲಿ ಹಾಲುಮತ ಸಮಾಜದ ಕಂಪ್ಲಿ ನಗರ ಘಟಕದಿಂದ ಅದ್ದಪ್ಪ ಭೀರಲಿಂಗೇಶ್ವರ ಗಂಗೆಸ್ಥಳ ಮೆರವಣಿಗೆ ಶ್ರಾವಣ ಮಾಸದ ಪ್ರಯುಕ್ತ ವಿಜೃಂಭಣೆಯಿಂದ ಜರುಗಿತು. ಇಲ್ಲಿನ ಕಂಪ್ಲಿ–ಕೋಟೆಯ ತುಂಗಭದ್ರಾ ನದಿಯಲ್ಲಿ ಗಂಗೆಪೂಜೆ ಸಲ್ಲಿಸಿದ ನಂತರ ವೆಂಕಟರಮಣ ದೇವಸ್ಥಾನದಿಂದ ಆರಂಭಗೊಂಡ ಭವ್ಯ ಗಂಗೆಸ್ಥಳ ಮೆರವಣಿಗೆ ನಡುವಲ ಮಸೀದ,



ಅಂಬೇಡ್ಕರ್ ವೃತ್ತ, ಅದ್ದಪ್ಪ ದೇವಸ್ಥಾನ, ಸರ್ಕಾರಿ ಆಸ್ಪತ್ರೆ, ಸಣಾಪುರ ರಸ್ತೆ ಮೂಲಕ ಅದ್ದಪ್ಪ ಭೀರಲಿಂಗೇಶ್ವರ ದೇವಸ್ಥಾನ ಬಳಿ ಸಂಪನ್ನಗೊಂಡಿತು. ಈ ಮೆರವಣಿಗೆಯಲ್ಲಿ ಮಹಿಳೆಯರ ಕುಂಭ, ಕಳಸ, ಡೊಳ್ಳು ಕುಣಿತ ಸೇ–ರಿದಂತೆ ವಾದ್ಯಗಳೊಂದಿಗೆ ಮೆರವಣಿಗೆ ನಡೆಯಿತು. ಅದ್ದಪ್ಪ ಭೀರಲಿಂಗೇಶ್ವರ ದೇವಸ್ಥಾನದಲ್ಲಿ ಹೂವಿನ ಅಲಂಕಾರ, ಅಭಿಷೇಕ, ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧೆಯಿಂದ ಜರುಗಿದವು. ಹಾಲುಮತ ಸಮಾಜದವರು ಸೇರಿದಂತೆ ಭಕ್ತರು ದೇವಸ್ಥಾನಕ್ಕೆ ಆಗಮಿಸಿ, ಕಾಯಿ, ಕರ್ಪೂರ ಅರ್ಪಿಸಿ, ದೇವರ ಕೃಪೆಗೆ ಪಾತ್ರರಾದರು. ಈ ಸಂದರ್ಭದಲ್ಲಿ ಹಾಲುಮತ ಸಮಾಜದ ನಗರ ಘಟಕ ಅಧ್ಯಕ್ಷ ಕೆ.ವಸಂತಕುಮಾರ, ಉಪಾಧ್ಯಕ್ಷ ಕುರಿ ಸಿದ್ದಪ್ಪ, ಖಜಾಂಚಿ ಶೇಖರಪ್ಪ ಬಳ್ಳಾರಿ, ಮುಖಂಡರಾದ ಕುರಿ ಹುಸೇನಪ್ಪ, ಕೆ.ಯಮನೂರಪ್ಪ, ಮರಿ ಬಿಂಗಿ ವಿರುಪಣ್ಣ, ಬಿಂಗಿ ವೆಂಕಟೇಶ, ಕೇದರ್‌ನಾಥ, ವಿರುಪಣ್ಣ ಪಕ್ಕೀರಪ್ಪ, ಬಿ.ದೇವೇಂದ್ರ, ಪೆದ್ದಣ್ಣ, ಬಳ್ಳಾರಿ ಲಕ್ಷ್ಮಣ ಸೇರಿದಂತೆ ಸಮಾಜದವರು ಪಾಲ್ಗೊಂಡಿದ್ದರು.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ವರುಣ ವಿಧಾನಸಭಾ ಕ್ಷೇತ್ರ ನಂಜನಗೂಡು ವಿಧಾನಸಭಾ ಕ್ಷೇತ್ರದ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತರಿಂದ ಶ್ರೀಕಂಠೇಶ್ವರ ಸ್ವಾಮೀಜಿ ಪೂಜಿ ಸಲ್ಲಿಸಿ ಸಿಹಿ ವಿತರಿಸಿ ಸಂಸದ ಸುನಿಲ್ ಬೋಸ್ ಹುಟ್ಟುಹಬ್ಬ ಆಚರಣೆ

ವಿಜಯ ದುಂಬಿ ಸುದ್ದಿ....

ತಾಂಡವಪುರ: ಮೈಸೂರು ಜಿಲ್ಲೆವರುಣ ವಿಧಾನಸಭಾ ಕ್ಷೇತ್ರ ನಂಜನಗೂಡು ವಿಧಾನಸಭಾ ಕ್ಷೇತ್ರದ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತ–ರಿಂದ ಶ್ರೀಕಂಠೇಶ್ವರ ಸ್ವಾಮೀಜಿ ಪೂಜಿ ಸಲ್ಲಿಸಿ ಸಿಹಿ ವಿತರಿಸಿ ಸಂಸದ ಸುನಿಲ್ ಬೋಸ್ ಹುಟ್ಟುಹಬ್ಬವನ್ನು ಆಚರಿಸಲಾಯಿತು.

ಸಂಸದ ಸುನಿಲ್ ಬೋಸ್ ಹುಟ್ಟುಹಬ್ಬದ ಪ್ರಯುಕ್ತ ವರುಣ ವಿಧಾನಸಭಾ ಕ್ಷೇತ್ರದ ತಗಡೂರು ಬ್ಲಾಕ್ ನಂಜನಗೂಡು ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರು ಡಾಕ್ಟರ್ ಎಸ್ ಯತೀಂದ್ರ ಸಿದ್ರಾಮಯ್ಯ ಅಭಿಮಾನಿ ಬಳಗದ ಹಾಗೂ ಡಾಕ್ಟರ್ ಇಚ್ಚಿಸಿ ಮಹದೇವಪ್ಪ ಅವರ ಅಭಿಮಾನಿ ಬಳಗ ವತಿಯಿಂದ ದಕ್ಷಿಣ ಕಾಶಿ ನಂಜನಗೂಡಿನ ಶ್ರೀಕಂಠೇಶ್ವರ ಸ್ವಾಮಿ ದೇವಾಲಯದದಲ್ಲಿ ವಿಶೇಷ ಪೂಜ್ಯ ಸಲ್ಲಿಸಿ ಸಿಹಿ ಹಂಚಿ ಬಹಳ ವಿಜೃಂಭಣೆಯಿಂದ ಸುನಿಲ್ ಬೋಸ್ ರವರ ಹುಟ್ಟು ಹಬ್ಬವನ್ನು ಆಚರಿಸಿದರು ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಮೃಗಾಲಯ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಂಗಸ್ವಾಮಿ ರವರು ಶ್ರೀಕಂಠೇಶ್ವರ ಸ್ವಾಮಿ ದೇವಾಲಯದ ವ್ಯವಸ್ಥಾಪನಾ ಸಮಿತಿಯ ಮಾಜಿ ಅಧ್ಯಕ್ಷ ಹೆಜ್ಜಿಗೆ ಆರ್ ಇಂದನ್ ಬಾಬು ರವರು ಹಾಗೂ ದೇವಾಲಯದ ವ್ಯವಸ್ಥಾಪನೆ ಸಮಿತಿಯ



ಅಧ್ಯಕ್ಷರಾದ ಚಿನ್ನದ ಗುಡಿಹುಂಡಿ ಬಸವೇಗೌಡ ರವರು ತಾಲೂಕು ಕುರುಬ ಸಮಾಜದ ಮುಖಂಡ ಕೆಂಪಣ್ಣನವರು ಮಾತನಾಡಿ ಚಾಮರಾಜನಗರ ಲೋಕಸಭಾ ಸದಸ್ಯ ಸುನಿಲ್ ಬೋಸ್ ರವರ ಪ್ರಯುಕ್ತ ಶ್ರೀಕಂಠೇಶ್ವರ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥನೆ ಸಲ್ಲಿಸಿದ್ದೇವೆ ದೇವರು ಅವ–ರಿಗೆ ಆಯಸ್ಸು ಆರೋಗ್ಯ ರಾಜಕೀಯದಲ್ಲಿ ಇನ್ನು ಉನ್ನತ ಸ್ಥಾನಕ್ಕೆ ಹೋಗುವ ಶಕ್ತಿಯನ್ನು ದೇವರು ಅವರ ಕುಟುಂಬಕ್ಕೆ ಕರುಣಿಸಲಿ ಎಂದು ಬೇಡಿಕೊಂಡಿದ್ದೇವೆ ಎಂದರು

ಈ ಸಂದರ್ಭದಲ್ಲಿ ರಾಜ್ಯ ಮೃಗಾಲಯ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಂಗಸ್ವಾಮಿ ಶ್ರೀಕಂಠೇಶ್ವರ ಸ್ವಾಮಿ ದೇವಾಲಯದ ವ್ಯವಸ್ಥಾಪನ ಸಮಿತಿಯ ಮಾಜಿ ಅಧ್ಯಕ್ಷ ಹೆಜ್ಜಿಗೆ ಆರ್ ಇಂದನ್ ಬಾಬು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಕೆ ಬಿ ಸ್ವಾಮಿ ಚಾಮರಾಜು ಚೋಳರಾಜು ಸಮಿತಿಯ ಮಾಜಿ ಸದಸ್ಯ ಗಿರೀಶ್ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯನವರ ಅಭಿಮಾನಿ ಬಳಗದ ಗೌರವಾಧ್ಯಕ್ಷ ಸಿ ಆರ್ ಮಹದೇವ್ ಅಧ್ಯಕ್ಷ ಬಿಳುಗಲಿ ಕುಮಾರ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಜಿ ಮರಳ್ಳಿ ಜಗದೀಶ್ವರ್ ಬಗರ್ ಹುಕುಂ ಸಮಿತಿಯ ಸದಸ್ಯ ರಾಜಣ್ಣ ಆರೋಪುರ ಶಿವಣ್ಣ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಹುಳಿಮಾವು ನಟರಾಜು ನಾಗರಾಜು ಬುಕ್ಕ ಹಳ್ಳಿ ಸೋಮಸಂದರ್ ಶ್ರೀಕಂಠ ನಾಯಕ ಮೂಡಳ್ಳಿ ಮಹದೇವಸ್ವಾಮಿ ಸುತ್ತೂರು ಸೋಮಣ್ಣ ಸುರೇಶ್ ಬಾಬು ಶ್ರೀಕಂಠೇಶ್ವರ ದೇವಾಲಯದ ವ್ಯವಸ್ಥಾಪಕ ಸಮಿತಿಯ ಅಧ್ಯಕ್ಷರಾದ ಚಿನ್ನದ ಗುಡಿಹುಂಡಿ ಬಸವೇಗೌಡ ಕುಳ್ಳಯ್ಯ ಓಲೆ ನಾಗರಾಜು ಮಾದೇವಸ್ವಾಮಿ ಹಾಲುಮತ ಮಹಾಸಭಾ ಕುಮಾರ್ ಗೌಡ ಹೆಜ್ಜೆಗೆ ಪುಟ್ಟಣ್ಣ ಗುತ್ತಿಗೆದಾರ ರವಿಕುಮಾರ್ ಗೋಪಾಲಕೃಷ್ಣ ರಮೇಶ ತೊರೆಮಾವು ಟಿಡಿ ಗಿರೀಶ್ ಕೆಎಸ್ ಹುಂಡಿ ಮಹಾದೇವ ಶಿವನಂಜು ಗುರುಪಾದ ಸ್ವಾಮಿ ತಗಡೂರು ಗಾರ್ಡನ್ ಮಹೇಶ್ ನಗರಲ್ಲೇ ಶ್ರೀನಿವಾಸ್ ಮೂರ್ತಿ ಮನು ಗ್ಯಾರಂಟಿ ಯೋಜನೆಯ ಸಮಿತಿ ಸದಸ್ಯ ಕೆ ಎಸ್ ಉಂಡಿ ರವಿ ಪುಟ್ಟಸ್ವಾಮಿ ಮರಳೂರು ದೊರೆಸ್ವಾಮಿ ಅಲಗಂಚಿ ಚಿನ್ನಸ್ವಾಮಿ ಮಹೇಶ್ ಮರಳೂರು ಗಿರೀಶ್ ಮೋಹನ್ ನಾರಾಯಣ್ ಇನ್ನು ಅನೇಕ ವರುಣ ಹಾಗೂ ನಂಜನಗೂಡು ವಿಧಾನಸಭಾ ಕ್ಷೇತ್ರದ ಸಾವಿರಾರು ಕಾರ್ಯಕರ್ತರು ಈ ಹುಟ್ಟು ಹಬ್ಬದ ಕಾರ್ಯಕ್ರಮದಲ್ಲಿ ಭಾಗಿಯಾಗಿ ದೇವರಿಗೆ ಪೂಜಿಸಲಿಸಿ ಸಂಸದರಿಗೆ ಶುಭ ಹಾರೈಸಿದರು

# ದೇವದುರ್ಗ ತಾಲೂಕಿನಲ್ಲಿ 12 ಪಶು ಆಸ್ಪತ್ರೆಗಳು; ಕೇವಲ ಇಬ್ಬರು ವೈದ್ಯರು!

### ಜಾಲಹಳ್ಳಿ ಪಶು ಆಸ್ಪತ್ರೆಯಲ್ಲಿ ವೈದ್ಯರಿಗಾಗಿ ರೈತರ ಪರದಾಟ ಮಧ್ಯಾಹ್ನ 1 ಗಂಟೆಯಾದರೂ ವೈದ್ಯರಿಲ್ಲ; ಒಬ್ಬ ವೈದ್ಯರಿಗೆ ಆರು ಆಸ್ಪತ್ರೆಗಳ ಜವಾಬ್ದಾರಿ

ವಿಜಯ ದುಂಬಿ ಸುದ್ದಿ....

**ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ ಒಟ್ಟು 12 ಪಶು ಆಸ್ಪತ್ರೆಗಳಿದ್ದು, ಅವುಗಳ ನಿರ್ವಹಣೆಗೆ ಕೇವಲ ಇಬ್ಬರು ವೈದ್ಯರು ಮಾತ್ರ ಕಾರ್ಯನಿರ್ವಹಿಸುತ್ತಿರುವುದರಿಂದ ಪಶು ಚಿಕಿತ್ಸಾ ಸೇವೆಯಲ್ಲಿ ತೀವ್ರ ಸಮಸ್ಯೆ ಎದುರಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವೈದ್ಯರ ಕೊರತೆಯಿಂದ ಒಬ್ಬ ವೈದ್ಯರಿಗೆ ಆರು ಆಸ್ಪತ್ರೆಗಳ ಜವಾಬ್ದಾರಿ ವಹಿಸಲಾಗಿದ್ದು, ಇದರಿಂದ ಗ್ರಾಮೀಣ ಭಾಗದ ರೈತ–ರಿಗೆ ಸಮಯಕ್ಕೆ ಸರಿಯಾಗಿ ಪಶು ವೈದ್ಯಕೀಯ ಸೇವೆ ದೊರೆಯುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ.**

ಜಾಲಹಳ್ಳಿ ಪಟ್ಟಣದಲ್ಲಿರುವ ಸರ್ಕಾರಿ ಪಶು ಆಸ್ಪತ್ರೆಯಲ್ಲಿ ಸೋಮವಾರ ಮಧ್ಯಾಹ್ನ ಸುಮಾರು 1 ಗಂಟೆಯಾದರೂ ವೈದ್ಯರು ಲಭ್ಯವಿರದ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಚಿಕಿತ್ಸೆ ಕೊಡಿಸಲು ದೂರದ ಗ್ರಾಮಗಳಿಂದ ಆಗಮಿಸಿದ್ದ ರೈತರು ವೈದ್ಯರಿಗಾಗಿ ಗಂಟೆಗಟ್ಟಲೆ ಕಾದು ಕುಳಿತು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಆಸ್ಪತ್ರೆ ಇದ್ದರೂ ವೈದ್ಯರು ಹಾಗೂ ಸಿಬ್ಬಂದಿ ಸಮಯಕ್ಕೆ ಸರಿಯಾಗಿ ಲಭ್ಯವಿರದಿದ್ದರೆ ಸರ್ಕಾರಿ ಪಶು ಆಸ್ಪತ್ರೆಯ ಸೇವೆ ರೈತರಿಗೆ ಸಮರ್ಪಕವಾಗಿ ದೊರೆಯುವುದಿಲ್ಲ. ವಿಶೇಷವಾಗಿ ಜಾನುವಾರುಗಳಿಗೆ ತುರ್ತು ಚಿಕಿತ್ಸೆ ಅಗತ್ಯವಿರುವ ಸಂದರ್ಭಗಳಲ್ಲಿ ವೈದ್ಯರು ಸಿಗದಿದ್ದರೆ ರೈತರು ಅನಿವಾರ್ಯವಾಗಿ ಖಾಸಗಿ ಪಶು ವೈದ್ಯರನ್ನು ಅವಲಂಬಿಸಬೇಕಾಗುತ್ತದೆ. ಇದರಿಂದ ಆರ್ಥಿಕವಾಗಿ ಸಂಕಷ್ಟದಲ್ಲಿರುವ ರೈತ–ರಿಗೆ ಮತ್ತಷ್ಟು ಹೊರೆಯಾಗಲಿದೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.



### ಉಪನಿರ್ದೇಶಕರ ಹೇಳಿಕೆ

**ರಾಯಚೂರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಓಂ ಸಿಂಗ್ ನಾಯಕ್ ಅವರು ಮಾತನಾಡಿ, ದೇವದುರ್ಗ ತಾಲೂಕಿನ 12 ಪಶು ಆಸ್ಪತ್ರೆಗಳಿಗೆ ಪ್ರಸ್ತುತ ಕೇವಲ ಇಬ್ಬರು ವೈದ್ಯರು ಮಾತ್ರ ಇದ್ದು, ವೈದ್ಯರ ಕೊರತೆಯಿಂದ ಒಬ್ಬ ವೈದ್ಯರಿಗೆ ಆರು ಆಸ್ಪತ್ರೆಗಳ ಜವಾಬ್ದಾರಿ ನೀಡಲಾಗಿದೆ. ಖಾಯಂ ವೈದ್ಯರ ನೇಮಕಾತಿಯಾಗುವವರೆಗೆ ಈ ಸಮಸ್ಯೆ ಮುಂದುವರಿಯುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಜಾಲಹಳ್ಳಿ ಪಶು ಆಸ್ಪತ್ರೆಯಲ್ಲಿ ವೈದ್ಯರು ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗುವಂತೆ ನೋಡಿಕೊಳ್ಳುವುದರ ಜೊತೆಗೆ, ತಾಲೂಕಿಗೆ ಅಗತ್ಯ ಸಂಖ್ಯೆಯಲ್ಲಿ ಖಾಯಂ ಪಶು ವೈದ್ಯರು ಹಾಗೂ ಸಿಬ್ಬಂದಿಯನ್ನು ನೇಮಕ ಮಾಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.**

ದೇವದುರ್ಗ ತಾಲೂಕಿನಲ್ಲಿ ಪಶು ಆಸ್ಪತ್ರೆಗಳ ಸಂಖ್ಯೆ ಹೆಚ್ಚಿದ್ದರೂ, ಅಗತ್ಯವಿರುವಷ್ಟು ಖಾಯಂ ವೈದ್ಯರು ಹಾಗೂ ಸಿಬ್ಬಂದಿ ಇಲ್ಲದಿರುವುದು ಪ್ರಮುಖ ಸಮಸ್ಯೆಯಾಗಿದೆ. ಪ್ರಸ್ತುತ ಇಬ್ಬರು ವೈದ್ಯರು ಕಾರ್ಯನಿರ್ವಹಿಸುತ್ತಿದ್ದು, ಅವರಲ್ಲಿ ಒಬ್ಬರು ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿದ್ದಾರೆ. ಇಬ್ಬರು ವೈದ್ಯರಿಗೂ ತಲಾ ಆರು ಆಸ್ಪತ್ರೆಗಳ ಜವಾಬ್ದಾರಿ ನೀಡಲಾಗಿದೆ.

ಖಾಯಂ ಸಿಬ್ಬಂದಿಗಳ ಕೊರತೆಯಿಂದ ಆಸ್ಪತ್ರೆಗಳ ನಿರ್ವಹಣೆಯಲ್ಲಿ ತೊಂದರೆ ಉಂಟಾಗುತ್ತಿದ್ದು, ಸಹಾಯಕರು ಹಾಗೂ ಗುತ್ತಿಗೆ ಆಧಾರದ ಸಿಬ್ಬಂದಿಗಳ ಮೂಲಕ ಸೇವೆ ನಿರ್ವಹಿಸಲಾಗುತ್ತಿದೆ. ಜಾಲಹಳ್ಳಿ ವಿಭಾಗದ ವ್ಯಾಪ್ತಿಯಲ್ಲಿ ಸುಮಾರು 20 ಗ್ರಾಮಗಳು ಬರುವುದರಿಂದ ಸಿಬ್ಬಂದಿ ಕೊರತೆಯ ನಡುವೆ ಕಾರ್ಯನಿರ್ವಹಿಸುವುದು ಕಷ್ಟಕರವಾಗಿದ್ದು, ಹಲವು ಸಮಸ್ಯೆಗಳು ಎದುರಾಗುತ್ತಿವೆ ಎಂದು ದೇವದುರ್ಗ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕ ಬಸವರಾಜ ಮಿರಾಜ್ದಾರ್ ತಿಳಿಸಿದ್ದಾರೆ.

### ಲಿಂಗಣ್ಣ ನಾಯಕ್ ಮಕಾಸಿ ಆಕ್ರೋಶ

**ಸಾಮಾಜಿಕ ಕಾರ್ಯಕರ್ತ ಲಿಂಗಣ್ಣ ನಾಯಕ್ ಮಕಾಸಿ ಅವರು ಮಾತನಾಡಿ, ಶಾಸಕರಾದ ಕರೆಮ್ಮ ಜಿ. ನಾಯಕ ಅವರು ತಾಲೂಕಿನ ಆಸ್ಪತ್ರೆಗಳು ಹಾಗೂ ಮೂಲಸೌಕರ್ಯಗಳ ಬಗ್ಗೆ ಸಂಪೂರ್ಣ ನಿರ್ಲಕ್ಷ್ಯ ವಹಿಸಿರುವುದೇ ಇಂತಹ ಸಮಸ್ಯೆಗಳಿಗೆ ಕಾರಣ ಎಂದು ಆಕ್ರೋಶ ವ್ಯಕ್ತಪಡಿಸಿದರು. ತಾಲೂಕು ಹಾಗೂ ಜಿಲ್ಲಾ ಮಟ್ಟದ ಪಶುಪಾಲನಾ ಅಧಿಕಾ–ರಿಗಳು ಜಾಲಹಳ್ಳಿ ಪಶು ಆಸ್ಪತ್ರೆಯ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ರೈತರಿಗೆ ನಿರಂತರ ವೈದ್ಯಕೀಯ ಸೇವೆ ದೊರೆಯುವಂತೆ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.**

**ಪಶು ಆಸ್ಪತ್ರೆ ಸಮಸ್ಯೆ ಬಗೆಹರಿಸಲು ಶಾಸಕರಿಗೆ ಒತ್ತಾಯ**

ತಾಲೂಕಿನ ಪಶು ಆಸ್ಪತ್ರೆಗಳ ಸಮಸ್ಯೆ ಗಂಭೀರವಾಗಿದ್ದು, ಮಾನ್ಯ ಶಾಸಕಿ ಕರೆಮ್ಮ ಜಿ. ನಾಯಕ ಅವರು ಕೂಡಲೇ ಸಂಬಂಧಪಟ್ಟ ಸಚಿವರೊಂದಿಗೆ ಚರ್ಚಿಸಿ, ಜಾಲಹಳ್ಳಿ ಸೇರಿದಂತೆ ದೇವದುರ್ಗ ತಾಲೂಕಿನ ಪಶು ಆಸ್ಪತ್ರೆಗಳ ಸುಧಾರಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಊರಿನ ಪ್ರಗತಿಪರರಾದ ಬುಡ್ಡಪ್ಪ ಕವಲಿ ಒತ್ತಾಯಿಸಿದರು. ವೈದ್ಯರು ಹಾಗೂ ಖಾಯಂ ಸಿಬ್ಬಂದಿ ಕೊರತೆಯಿಂದ ರೈತರು ಮತ್ತು ಜಾನುವಾರುಗಳು ತೊಂದರೆ ಅನುಭವಿಸುವಂತಾಗಿದ್ದು, ಸರ್ಕಾರ ಕೂಡಲೇ ಅಗತ್ಯ ವೈದ್ಯರು ಮತ್ತು ಸಿಬ್ಬಂದಿಯನ್ನು ನೇಮಕ ಮಾಡಿ ಪಶು ಆಸ್ಪತ್ರೆಗಳಿಗೆ ಸಮರ್ಪಕ ಮೂಲಸೌಕರ್ಯ ಕಲ್ಪಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಮುಧೋಳದಲ್ಲಿ ರಾಘವೇಂದ್ರ ಸ್ವಾಮಿಗಳ ಪೂರ್ವಾರಾಧನೆ: ಭಕ್ತಿಭಾವದಿಂದ ವಿಶೇಷ ಪೂಜೆ

ವಿಜಯ ದುಂಬಿ ಸುದ್ದಿ....

**ಮುಧೋಳ: ನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ರಾಘವೇಂದ್ರ ಸ್ವಾಮಿಗಳ ಪೂರ್ವಾರಾಧನೆ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ಜರುಗಿದವು. ಕಲಿಯುಗದ ಕಾಮಧೇನು, ಕಲ್ಪವೃಕ್ಷವೆಂದೇ ಭಕ್ತರಿಂದ ಪೂಜಿಸಲ್ಪಡುವ ಶ್ರೀ ರಾಘವೇಂದ್ರ ಸ್ವಾಮಿಗಳ ಪೂರ್ವಾರಾಧನೆಯ ಅಂಗವಾಗಿ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು.**



ಧರ್ಮಧ್ವಜಾರೋಹಣದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದ್ದು, ಮಠದಲ್ಲಿ ವಿಶೇಷ ಪೂಜೆ, ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಸೇವೆಗಳು ನಡೆದವು. ಈ ಸಂದರ್ಭದಲ್ಲಿ ಶ್ರೀ ರಾಯರ ಸನ್ನಿಧಿಯಲ್ಲಿ ಭಕ್ತರು ವಿಶೇಷ ಪೂಜೆ ಸಲ್ಲಿಸಿ, ಮಂತ್ರಘೋಷ ಹಾಗೂ ಭಜನೆಗಳ ಮೂಲಕ ಭಕ್ತಿಯನ್ನು ಸಮರ್ಪಿಸಿದರು. ಮಠದ ಆವರಣದಲ್ಲಿ ಧಾರ್ಮಿಕ ವಾತಾವರಣ ನಿರ್ಮಾಣವಾಗಿದ್ದು, ನೂರಾರು ಭಕ್ತರು ಪಾಲ್ಗೊಂಡು ಶ್ರೀ ರಾಯರ ದರ್ಶನ ಪಡೆದು ಪುನೀತರಾದರು. ಕಾರ್ಯಕ್ರಮದಲ್ಲಿ ವಿವಿಧ ಮಠಗಳ ಸ್ವಾಮೀಜಿಗಳು, ಅರ್ಚಕರು, ಧಾರ್ಮಿಕ ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದರು. ಪೂಜಾ ಕಾರ್ಯಕ್ರಮದ ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

## ವಿರಿಂಚಿ ಆರ್ಟ್ ಗ್ಯಾಲರಿಯಲ್ಲಿ ಕಲಾವಿದ ಪ್ರಕಾಶ್ ಆನೆಗುಂದಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ

ವಿಜಯ ದುಂಬಿ ಸುದ್ದಿ....

**ಸಿಂಧನೂರು: ನಗರದ ಆದರ್ಶ ಕಾಲೋನಿಯಲ್ಲಿರುವ ವಿರಿಂಚಿ ಆರ್ಟ್ ಗ್ಯಾಲರಿಯಲ್ಲಿ ರಾಯಚೂರಿನ ಶಕ್ತಿನಗರದ ಚಿತ್ರ ಕಲಾವಿದ ಪ್ರಕಾಶ್ ಆನೆಗುಂದಿ ಅವರ ಕ್ರಿಮ್ಸನ್ 5 ಶೀರ್ಷಿಕೆಯ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನವನ್ನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನ ಸಹಾಯದೊಂದಿಗೆ ಏರ್ಪಡಿಸಲಾಯಿತು.**

ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದ ನೂತನ ತುರ್ವಿಹಾಳ ಪಟ್ಟಣ ಪಂಚಾಯಿತಿ ಅಧ್ಯಕ್ಷ ಶರಣಪ್ಪ ಹೊಸಗೌಡ್ರು, ಚಿತ್ರಕಲೆ ಎನ್ನುವುದು ಪ್ರಕೃತಿಯ ಜೊತೆಗಿರುವ ಆತ್ಮೀಯ ಸಂಬಂಧ ಪ್ರಕೃತಿಯೊಂದಿಗೆ ಮಾತನಾಡುವ ಅದೃಷ್ಟ ಕಲಾವಿದರು ಮಾತ್ರ ಪಡೆದಿರುತ್ತಾರೆ. ಪ್ರದರ್ಶನಗೊಂಡ ಪ್ರತಿಯೊಂದು ಕಲಾಕೃತಿಯು ತನಗೆ ತನ್ನದೆಯಾದ ಸಂದೇಶವನ್ನು ಹೊಂದಿದೆ ಎಂದು ಹೇಳಿದರು.



ಅತಿಥಿಗಳಾಗಿ ಆಗಮಿಸಿದ ಉಪನ್ಯಾಸಕರಾದ ಗೋವಿಂದರಾಜ ಬಾರಿಕೇರ್ ಮಾತನಾಡಿ, ಒಬ್ಬ ಚಿತ್ರ ಕಲಾವಿದನಿಗೆ ಸೃಷ್ಟಿ ಎಲ್ಲಾ ಸಂಗತಿಯ ಅರಿವು ಬೇಕು ಜೊತೆಗೆ ಸಮಾಜದ ಅರಿವು ಬೇಕು, ಸಮಾಜ ಅಂದ್ರೆ ಅದರೊಳಗೆ ಹೊಕ್ಕು ಸಹಾನುಭವ, ಪರಾನುಭಾವ, ಮಾರ್ಗದಿಂದ ಅದರ ಎಲ್ಲಾ ಸತ್ತುಗಳನ್ನು ಹಿರಿ ತನ್ನ ಕಲೆಯ ಮೂಲಕ ಪ್ರದರ್ಶಿಸುವ ವ್ಯಕ್ತಿಯಾದರೆ ಮಾತ್ರ ಕಲೆ ಸಾಥ–ರ್ಕವಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.

ಗ್ಯಾಲರಿ ಮುಖ್ಯಸ್ಥರಾದ ಶಿವಾನಂದ ಸಾತಿಹಾಳ ಮಾತನಾಡಿ, ಚಿತ್ರಕಲೆ ಸಂಬಂಧಿಸಿದಂತೆ ಯಾವುದೇ ಚಟುವಟಿಕೆ ಒಂದು ಗ್ಯಾಲರಿಯಲ್ಲಿ ಮಾಡಿ ಪ್ರತಿಯೊಬ್ಬ ಕಲಾವಿದರು ನಿರಂತರ ಪ್ರಯತ್ನ ಅಭ್ಯಾಸದೊಂದಿಗೆ ಹೊಸತನವನ್ನು ಹುಟ್ಟು ಹಾಕಬಹುದು ಈಗಿನ ಪ್ರಸ್ತುತ ಘಟನೆಗಳನ್ನು ಆಲಿಸಿ, ನಿಮ್ಮ ಕೃತಿಗಳಲ್ಲಿ ಬಿಂಬಿಸಿ ಎಂದು ಸಲಹೆ ನೀಡಿದರು.

ಕಲಾಕೃತಿ: ಹಂಪಿಯ ವೈಭವವನ್ನು ಸಾರಿ ಹೇಳುವ ಐತಿಹಾಸಿಕ ಸ್ಥಳಗಳನ್ನು ಜಲ ವರ್ಣದಲ್ಲಿ ಕಲಾವಿದ ಸೆರೆಹಿಡಿದಿರುವ ಕಲಾವಿದನಶೈಲಿ ನೋಡುಗರನ್ನು ಮತ್ತಷ್ಟು ಆಕರ್ಷಿಸಿದವು, ಕಲಾವಿದ ಪ್ರಕಾಶ್ ಅವರು ಕಲಾಕೃತಿಯ ರಚನೆಯ ಸಮಯದ ಆ ಸ್ಥಳದಲ್ಲಿ ಆದ ಅನುಭವಗಳನ್ನು ವಿವರಿಸಿದರು. ಮಲ್ಲಪ್ಪ ಕೆಂಪರಡ್ಡಿ, ನಾರಾಯಣಪ್ಪ ಮಾಡಸಿರವಾರ, ಕಲಾವಿದರಾದ ಉಮೇಶ್ ಪತ್ತಾರ್, ಮಹಮದ್ ಉಸ್ಮಾನ್ ಅಲಿ, ಮಹೇಂದ್ರ, ರಮೇಶ, ರಾಜಸಾಬ್ ಸುರೇಶ್, ಅಂಬಣ್ಣ ಸೇರಿದಂತೆ ಕಲಾಭಿಮಾನಿಗಳು ಇದ್ದರು.

# ನೇತ್ರದಾನ: ಮರಣಾನಂತರವೂ ಮತ್ತೊಬ್ಬರ ಬದುಕಿಗೆ ಬೆಳಕು ನೀಡಿ

ವಿಜಯ ದುಂಬಿ ಸುದ್ದಿ....

**ಸಿಂಧನೂರು: ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸರಕಾರಿ ಪದವಿ ಪೂರ್ವ ಕಾಲೇಜು ಜವಳಗೇರಾದಲ್ಲಿ. ನೇತ್ರದಾನ ಪಾಕ್ಷಿಕ ದಿನಾಚರಣೆ ಕುರಿತು ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಯಿತು.**

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿದರು ಮನುಷ್ಯನ ಜೀವನದಲ್ಲಿ ಕಣ್ಣುಗಳು ಅಮೂಲ್ಯವಾದ ಅಂಗಗಳಾಗಿವೆ. ಕಣ್ಣುಗಳ ಮೂಲಕವೇ ನಾವು ಈ ಸುಂದರ ಜಗತ್ತನ್ನು ನೋಡುತ್ತೇವೆ. ಆದರೆ ಕಾರ್ನಿಯಾ ಸಂಬಂಧಿತ ಸಮಸ್ಯೆಗಳು, ಗಾಯಗಳು, ಸೋಂಕುಗಳು, ಅಪೌಷ್ಟಿಕತೆ ಹಾಗೂ ಜನ್ಮಜಾತ ಅಸ್ವಸ್ಥತೆಗಳಿಂದ ಅನೇಕರು ದೃಷ್ಟಿಯನ್ನು ಕಳೆದುಕೊಳ್ಳುತ್ತಿದ್ದಾರೆ.



ಇಂತಹ ದೃಷ್ಟಿಹೀನರಿಗೆ ಬೆಳಕಿನ ಬದುಕು ನೀಡುವ ಮಹತ್ತರ ಕಾರ್ಯವೇ ನೇತ್ರದಾನ. ಮರಣದ ನಂತರ 6 ರಿಂದ 8 ಗಂಟೆಗಳೊಳಗೆ ಕಣ್ಣುಗಳನ್ನು ದಾನ ಮಾಡಬಹುದಾಗಿದ್ದು, ಕಸಿ ಮಾಡಲು ಕಾರ್ನಿಯಾವನ್ನು ಮಾತ್ರ ಬಳಸಲಾಗುತ್ತದೆ. ಕಣ್ಣು ತೆಗೆಯುವ ಪ್ರಕ್ರಿಯೆಗೆ ಸುಮಾರು 15 ರಿಂದ 20 ನಿಮಿಷಗಳು ಮಾತ್ರ ಬೇಕಾಗುತ್ತದೆ. ಕನ್ನಡಕ ಧರಿಸುವವರು, ಮಧುಮೇಹಿಗಳು, ಅಧಿಕ ರಕ್ತದೊತ್ತಡ ಹೊಂದಿರುವವರು ಹಾಗೂ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗೊಳಗಾದವರೂ ಸಹ ನೇತ್ರದಾನ ಮಾಡಬಹುದು.

ನೇತ್ರದಾನದಿಂದ ಮುಖ ಅಥ–ವಾ ದೇಹ ವಿರೂಪಗೊಳ್ಳುವುದಿಲ್ಲ. ಎಲ್ಲಾ ಧರ್ಮಗಳೂ ನೇತ್ರದಾನವನ್ನು ಬೆಂಬಲಿಸುತ್ತವೆ. ವ್ಯಕ್ತಿಯು ಮುಂಚಿತವಾಗಿ ಪ್ರತಿಜ್ಞೆ ಮಾಡದಿದ್ದರೂ ಸಹ ಅವರ ಕುಟುಂಬದವರು ಮರಣಾನಂತರ ನೇತ್ರದಾನಕ್ಕೆ ಒಪ್ಪಿಗೆ ನೀಡಬಹುದು. ದಾನಿಯ ಕುಟುಂಬಕ್ಕೆ ನೇತ್ರ ಬ್ಯಾಂಕಿನಿಂದ ಮೆಚ್ಚುಗೆಯ ಪ್ರಮಾಣಪತ್ರ ನೀಡಲಾಗುತ್ತದೆ. ಆದರೆ ಹೆಪಟೈಟಿಸ್, ಏಡ್ಸ್, ರೇಬೀಸ್, ಸೆಪ್ಟಿಸಿಮಿಯಾ, ಲ್ಯುಕೇಮಿಯಾ, ಲಿಂಫೋಮಾ ಹಾಗೂ ಕೊನೆಯ ಹಂತದ ಕ್ಯಾನ್ಸರ್‌ನಂತಹ ಕಾಯಿಲೆಗಳಿಂದ ಬಳಲುತ್ತಿರುವವರು ನೇತ್ರದಾನಕ್ಕೆ ಅರ್ಹರಾಗಿರುವುದಿಲ್ಲ. ಎಂದರು

ಉಪನ್ಯಾಸಕರಾದ ಡಾಕ್ಟರ ನಾರಾಯಣ ಸರ್ ಅವರು ಮಾತನಾಡಿ, "ಮರಣಾನಂತರ ದೇಹವನ್ನು ಸುಡುವ ಅಥವಾ ಹೂಳುವ ಬದಲು ಕಣ್ಣುಗಳನ್ನು ದಾನ ಮಾಡುವ ಮೂಲಕ ಇಬ್ಬರು ದೃಷ್ಟಿಹೀನರಿಗೆ ಹೊಸ ಬೆಳಕು ನೀಡಬಹುದು. ನೇತ್ರದಾನವು ಮಾನವೀಯತೆಯ ಅತ್ಯುನ್ನತ ಸೇವೆಯಾಗಿದೆ. ಪ್ರತಿಯೊಬ್ಬರೂ ತಮ್ಮ ಕುಟುಂಬ ಸದಸ್ಯರೊಂದಿಗೆ ಚರ್ಚಿಸಿ ನೇತ್ರದಾನದ ಪ್ರತಿಜ್ಞೆ ಮಾಡಬೇಕು" ಎಂದು ಕರೆ ನೀಡಿದರು. ಅವರು ವಿದ್ಯಾರ್ಥಿಗಳಿಗೆ ಮನವಿ ಮಾಡುತ್ತಾ, "ನಿಮ್ಮ ಕಣ್ಣುಗಳು ದೇವರು ನೀಡಿರುವ ಅಮೂಲ್ಯ ಉಡು–ಗೊರೆ. ಅವುಗಳನ್ನು ಮರಣಾನಂತರ ಮತ್ತೊಬ್ಬರ ಬದುಕಿಗೆ ಬೆಳಕಾಗುವಂತೆ ನೇತ್ರದಾನ ಮಾಡಿ. ನಿಮ್ಮ ಹತ್ತಿರದ ನೇತ್ರ ಬ್ಯಾಂಕ್ ಅಥವಾ ಆರೋಗ್ಯ ಸಂಸ್ಥೆಯನ್ನು ಸಂಪರ್ಕಿಸಿ ನೇತ್ರದಾನದ ಬಗ್ಗೆ ಮಾಹಿತಿ ಪಡೆದು ಪ್ರತಿಜ್ಞೆ ಮಾಡಿ" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸರಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಬಸವಲಿಂಗಯ್ಯ ಸ್ವಾಮಿ .ಸರ್ ಉಪನ್ಯಾಸಕರಾದ ಸಾಹೆಣ್ಣ ಸರ್ ಆರೋಗ್ಯ ನಿರೀಕ್ಷಣಾ ಅಧಿಕಾ–ರಿಗಳಾದ ಅಂಬಮ್ಮ ಮತ್ತು ಕಾಲೇಜಿನ ವಿದ್ಯಾರ್ಥಿ. ವಿದ್ಯಾರ್ಥಿನಿಯರು. ಉಪಸ್ಥಿತರಿದ್ದರು .

# ಯರ್ರನಾಗೇನಹಳ್ಳಿ ಗ್ರಾಮಸ್ಥರ ದಶಕಗಳ ಕನಸು ನನಸಾಗಿಸಿದ ಶಾಸಕ ಪ್ರದೀಪ್ ಈಶ್ವರ್

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ:** 'ಜನರ ಸಮಸ್ಯೆ ಆಲಿಸುವುದಷ್ಟೇ ಅಲ್ಲ, ಪರಿಹಾರ ಕಲ್ಪಿಸುವುದೇ ಜನಪ್ರತಿನಿಧಿ ಯ ಜವಾಬ್ದಾರಿ' ಎಂಬುದನ್ನು ಶಾಸಕ ಪ್ರದೀಪ್ ಈಶ್ವರ್ ಮತ್ತೊಮ್ಮೆ ಸಾಬೀತು ಪಡಿಸಿದ್ದು, ತಾಲೂಕಿನ ಎಸ್.ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯರ್ರನಾಗೇನಹಳ್ಳಿ ಗ್ರಾಮದ ದಶಕಗಳ ರಸ್ತೆ ಬೇಡಿಕೆಗೆ ಸ್ಪಂದಿಸಿ 60 ಲಕ್ಷ ರೂಗಳ ವೆಚ್ಚದ ಸುಸಜ್ಜಿತ ಸಿಸಿ ರಸ್ತೆ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿದ್ದಾರೆ. ಈ ಹಿಂದೆ ಯರ್ರನಾಗೇನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಗ್ರಾಮಸ್ಥರು ತಮ್ಮ ಬಹುದಿನಗಳ ರಸ್ತೆ ಸಮಸ್ಯೆಯನ್ನು ಶಾಸಕರ ಗಮನಕ್ಕೆ ತಂದಿದ್ದರು.

ದೇವಾಲಯದ ಬಳಿ ಗ್ರಾಮಸ್ಥರೊಂದಿಗೆ ಕುಳಿತು ಅವರ ಅಹವಾಲು ಆಲಿಸಿದ್ದ ಶಾಸಕ ಪ್ರದೀಪ್ ಈಶ್ವರ್, ರಸ್ತೆ ನಿರ್ಮಿಸಿಕೊಡುವುದಾಗಿ ಭರವಸೆ ನೀಡಿದ್ದರು. ಇದೀಗ ಕೆಲವೇ ತಿಂಗಳಲ್ಲಿ ಅನುದಾನ ಒದಗಿಸಿ




ಕಾಮಗಾರಿಗೆ ಚಾಲನೆ ನೀಡುವ ಮೂಲಕ 'ಕೊಟ್ಟ ಮಾತು ಉಳಿಸಿಕೊಂಡ ಶಾಸಕ' ಎಂಬ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಗ್ರಾಮದ ಪ್ರಮುಖ ಸಂಪರ್ಕ ರಸ್ತೆಯಾಗಿರುವ ಯರ್ರನಾಗೇನಹಳ್ಳಿಯಿಂದ ಎಸ್.ಗೊಲ್ಲಹಳ್ಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು 60 ಲಕ್ಷ ರೂಗಳ ವೆಚ್ಚದಲ್ಲಿ ಗುಣಮಟ್ಟದ ಸಿಸಿ ರಸ್ತೆಯಾಗಿ ಅಭಿವೃದ್ಧಿ ಪಡಿಸಲಾಗುತ್ತಿದೆ. ರಸ್ತೆ ನಿರ್ಮಾಣದಿಂದ ಮಳೆಗಾಲದಲ್ಲಿ ಎದುರಾಗುತ್ತಿದ್ದ ಸಂಚಾರ ಸಮಸ್ಯೆ ಸೇರಿದಂತೆ ಗ್ರಾಮಸ್ಥರ ಹಲವು ವರ್ಷಗಳ ಸಂಕಷ್ಟಕ್ಕೆ ಶಾಶ್ವತ ಪರಿಹಾರ ದೊರೆಯಲಿದೆ.ಹಿಂದೆ ಹಲವು ಬಾರಿ ಮನವಿ ಸಲ್ಲಿಸಿದರೂ ರಸ್ತೆ ಸಮಸ್ಯೆಗೆ ಪರಿಹಾರ ಸಿಕ್ಕಿರಲಿಲ್ಲ.

ಆದರೆ ಪ್ರದೀಪ್ ಈಶ್ವರ್ ಅವರು ಗ್ರಾಮಕ್ಕೆ ಬಂದು ನಮ್ಮ ಸಮಸ್ಯೆ ಕೇಳಿದರು; ರಸ್ತೆ ಮಾಡಿಸಿಕೊಡುವುದಾಗಿ ಭರವಸೆ ನೀಡಿದರು. ಇಂದು ಅದೇ ಮಾತಿನಂತೆ ಕಾಮಗಾರಿಗೆ ಚಾಲನೆ ನೀಡಿದ್ದಾರೆ. ಇದು ನಮಗೆ ಕೇವಲ ರಸ್ತೆ ಅಲ್ಲ, ಶಾಸಕರ ಮೇಲಿನ ವಿಶ್ವಾಸಕ್ಕೆ ಸಿಕ್ಕಿರುವ ಉತ್ತರ ಎಂದು ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿ ದರು. ಸ್ಥಳೀಯ ಮುಖಂಡ ನಾಗೇಶ್ ರೆಡ್ಡಿ ಮಾತನಾಡಿ, ಯರ್ರನಾಗೇನಹಳ್ಳಿ ಗ್ರಾಮಕ್ಕೆ ಸುಸಜ್ಜಿತ ರಸ್ತೆ ನಿರ್ಮಾಣ ಮಾಡಬೇಕೆಂಬ ಬೇಡಿಕೆ ಹಲವು ವರ್ಷಗಳಿಂದ ಇತ್ತು.

ಗ್ರಾಮಕ್ಕೆ ಭೇಟಿ ನೀಡಿದ್ದ ವೇಳೆ ಶಾಸಕರು ಜನರ ಸಮಸ್ಯೆಯನ್ನು ನೇರವಾಗಿ ಆಲಿಸಿ, ರಸ್ತೆ ನಿರ್ಮಾಣದ ಭರವಸೆ ನೀಡಿದ್ದರು. ಇದೀಗ ಅನುದಾನ ಒದಗಿಸಿ ಕಾಮಗಾರಿಗೆ ಚಾಲನೆ ನೀಡಿರುವುದು ಅವರ ಜನಪರ ಕಾಳಜಿಗೆ ಸಾಕ್ಷಿಯಾಗಿದೆ ಎಂದರು. 'ನಮ್ಮ ಊರು?ನಮ್ಮ ಶಾಸಕ' ಕಾರ್ಯಕ್ರಮದ ಮೂಲಕ ಗ್ರಾಮಗಳಿಗೆ ತೆರಳಿ ಜನರ ನಡುವೆ ಕುಳಿತು ಅಹವಾಲು ಆಲಿಸುವ ಮೂಲಕ ಸಮಸ್ಯೆಗಳನ್ನು ಅರಿಯುತ್ತಿರುವ ಶಾಸಕ ಪ್ರದೀಪ್ ಈಶ್ವರ್, ಸಾಧ್ಯವಾದಷ್ಟು ಬೇಗ ಅವುಗಳಿಗೆ ಪರಿಹಾರ ಒದಗಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು. ಗ್ರಾಮದ ಮಹಿಳೆಯರು ಮಾತನಾಡಿ, ಶಾಸಕರ ಅವಧಿಯಲ್ಲಿ ಸರ್ಕಾರದ ವಿವಿಧ ಸೌಲಭ್ಯಗಳು ಗ್ರಾಮಕ್ಕೆ ತಲುಪುತ್ತಿವೆ. ಮಹಿಳೆಯರಿಗೆ ಮಾಸಿಕ ರೂ 2,000 ಸೇರಿದಂತೆ ಹಲವು ಯೋಜನೆಗಳ ಪ್ರಯೋಜನ ದೊರೆಯುತ್ತಿದೆ.

ಇದೀಗ ಬಹುದಿನಗಳ ರಸ್ತೆ ಬೇಡಿಕೆಯೂ ಈಡೇರಿರುವುದು ಸಂತಸ ತಂದಿದೆ. ಜನರ ಸಂಕಷ್ಟಕ್ಕೆ ಸ್ಪಂದಿಸುವ ಶಾಸಕರಿಗೆ ಇನ್ನಷ್ಟು ಶಕ್ತಿ ದೊರೆಯಲಿ ಎಂದು ಹಾರೈಸಿ ದರು. ಯರ್ರನಾಗೇನಹಳ್ಳಿಯ ಅಭಿವೃದ್ಧಿಗೆ ಸಿಸಿ ರಸ್ತೆ ಕಾಮಗಾರಿ ಹೊಸ ಮುನ್ನುಡಿಯಾಗಿದ್ದು, ಗ್ರಾಮಸ್ಥರ ದಶಕಗಳ ನಿರೀಕ್ಷೆ ಸಾಕಾರಗೊಳ್ಳುವಂತಾಗಿದೆ. 'ಭರವಸೆ ನೀಡಿದ ಶಾಸಕ?ಭರವಸೆ ಈಡೇರಿಸಿದ ಶಾಸಕ' ಎಂಬ ಮಾತು ಗ್ರಾಮದಲ್ಲಿ ಕೇಳಿಬರುತ್ತಿದೆ.

## ಮಿಸ್ಟರ್ ಪ್ರಿಯಾಂಕ್ ಖರ್ಗೆ, ನನ್ನ ಹತ್ರ ನಿಮ್ಮ ಆಟ ನಡೆಯಲ್ಲ : ಕುಮಾರಸ್ವಾಮಿ ವಾಗ್ದಾಳಿ

**ವಿಜಯ ದುಂಬಿ ಸುದ್ದಿ....**

**ತುಮಕೂರು: ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಾಗ್ದಾಳಿ ಮುಂದುವರಿಸಿದ್ದು, ತಾವು ಕೇಳುತ್ತಿರುವ ನಿರ್ದಿಷ್ಟ ಪ್ರಶ್ನೆಗಳಿಗೆ ಉತ್ತರ ನೀಡದೆ ಕೇವಲ 'ಎಕ್ಸ್' ವೇದಿಕೆಯಲ್ಲಿ ಮಾತನಾಡಿ ಜಾರಿಕೊಳ್ಳುತ್ತಿರುವುದೇಕೆ ಎಂದು ಪ್ರಶ್ನಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಸಚಿವರು ಕ್ಯಾಮೆರಾ ಮುಂದೆ ಮಾತನಾಡದೆ 'ಎಕ್ಸ್'ನಲ್ಲಿ ಹೇಳಿಕೆ ನೀಡಿದ್ದಾರೆ. "ಬೆಟ್ಟ ಅಗೆದು ಇಲಿ ಹಿಡಿದಂತೆ ಏನೋ ಬಿಟ್ಟಿದ್ದಾರೆ. ನೀವು ಮಾಡುತ್ತಿರುವುದೇ ಚಿತ್ರಾನ್ನ, ಯಾರಿಗೆ ಮೃಷ್ಟಾನ್ನ ಕೊಟ್ಟಿದ್ದೀರಿ?" ಎಂದು ವ್ಯಂಗ್ಯವಾಡಿದರು.**



"ಪ್ರಿಯಾಂಕ್ ಖರ್ಗೆ, ನನ್ನನ್ನು ಆರ್‌ಎಸ್‌ಎಸ್, ಬಿಜೆಪಿಯವರನ್ನು ಆಟ ಆಡಿಸಿದಂತೆ ಆಟ ಆಡಿಸಲು ಸಾಧ್ಯವಿಲ್ಲ. ನನ್ನ ಹತ್ತಿರ ಆಟ ಆಡಲು ಆಗುವುದಿಲ್ಲ. ಮಿಸ್ಟರ್ ಪ್ರಿಯಾಂಕ್ ಖರ್ಗೆ, ನಾನು ಕದ್ದು ಹೋಗುವವನಲ್ಲ, ಪಲಾಯನ ಮಾಡುವುದಿಲ್ಲ" ಎಂದು ಕುಮಾರಸ್ವಾಮಿ ಗುಡುಗಿದರು. ರೆಸಾರ್ಟ್‌ನಲ್ಲಿ ಕುಳಿತು ಒಎಂಆರ್ ಶೀಟ್ ತಿದ್ದಿಸಿದ ಅಧಿಕಾರಿಯನ್ನು ದೆಹಲಿಯಿಂದ ದೇವನಹಳ್ಳಿ ರೆಸಾರ್ಟ್‌ಗೆ ಕರೆತಂದು ಕೂರಿಸಿಕೊಂಡಿದ್ದು ಏಕೆ ಎಂದು ಪ್ರಶ್ನಿಸಿದ ಅವರು, ಬಳಿಕ ಆ ಅಧಿಕಾರಿಯನ್ನು ಸಿಐಡಿ ಅಧಿಕಾರಿಗಳ ಮುಂದೆ ಹಾಜರುಪಡಿಸಿದ್ದೀರಿ ಎಂದು ಆರೋಪಿಸಿದರು. "24 ಮಂದಿಗೆ ಕೆಲಸ ಕೊಟ್ಟಿದ್ದೀರಲ್ಲ, ಅವರು ಯಾರ್ಯಾರ ಸಂಬಂಧಿಕರು ಎಂಬುದನ್ನು ಹೇಳಿ. ಸಂಬಂಧಿಕರಿಗೆ ಕೆಲಸ ಕೊಡಿಸಿದ್ದೇವೆ ಎಂದು ಹೇಳಿದ್ದೀರಿ. ಅದರ ಬಗ್ಗೆ ಸಚಿವರು ಉತ್ತರಿಸಬೇಕಲ್ಲವೇ?" ಎಂದು ಪ್ರಶ್ನಿಸಿದ ಅವರು, ತಮ್ಮ ಬಗ್ಗೆ ಮಾತನಾಡುವ ಮುನ್ನ ಸರಿಯಾದ ಮಾಹಿತಿ ಪಡೆದು ಮಾತನಾಡುವಂತೆ ಪ್ರಿಯಾಂಕ್ ಖರ್ಗೆ ಅವರಿಗೆ ತಿರುಗೇಟು ನೀಡಿದರು. ಒಎಂಆರ್ ಶೀಟ್‌ಗಳಿಗೆ ಕಾರ್ಬನ್ ಬಳಸಿ ಅಕ್ರಮ ಎಸಗಿರುವ ಕುರಿತು ಬೀದಿ ಬೀದಿಯಲ್ಲಿ ಚರ್ಚೆಯಾಗುತ್ತಿದೆ. ತನಿಖೆಯಲ್ಲೂ ಅದು ಸಾಬೀತಾಗಿದೆ. ಫೋರೆನ್ಸಿಕ್ ಲ್ಯಾಬ್ ವರದಿಯಲ್ಲೂ ಈ ಬಗ್ಗೆ ರುಜುವಾತಾಗಿದೆ ಎಂದು ಕುಮಾರಸ್ವಾಮಿ ಹೇಳಿದರು. "ಸತ್ಯ ಹೀಗಿರುವಾಗ ಅದನ್ನು ಸಮರ್ಥಿಸಿಕೊಳ್ಳುವುದರಲ್ಲಿ ಅರ್ಥವೇನಿದೆ?" ಎಂದು ಪ್ರಶ್ನಿಸಿದರು. "ಬನ್ನಿ, ನಿಮ್ಮೊಂದಿಗೆ ಎಲ್ಲಿ ಬೇಕಾದರೂ ಚರ್ಚೆಗೆ ಬರುತ್ತೇನೆ. ಪಲಾಯನ ಮಾಡುವ ವ್ಯಕ್ತಿ ನಾನಲ್ಲ. ಪಲಾಯನದ ಪ್ರಶ್ನೆಯೇ ಇಲ್ಲ" ಎಂದು ಪ್ರಿಯಾಂಕ್ ಖರ್ಗೆ ಅವರಿಗೆ ಸವಾಲು ಹಾಕಿದರು. ಈ ವಿಚಾರವನ್ನು ಇಲ್ಲಿಗೆ ನಿಲ್ಲಿಸುವ ಪ್ರಶ್ನೆಯೇ ಇಲ್ಲ. ನಾಳೆ ದೆಹಲಿಯಲ್ಲಿ ಈ ಕುರಿತು ಸುದೀರ್ಘವಾಗಿ ಮಾಧ್ಯಮಗಳೊಂದಿಗೆ ಮಾತನಾಡುತ್ತೇನೆ. ನಿರುದ್ಯೋಗಿ ಯುವಕರ ಹಿತವನ್ನು ಬಲಿ ಕೊಡುವುದಕ್ಕೆ ನಿಮ್ಮನ್ನು ಬಿಡುವುದಿಲ್ಲ ಎಂದು ಕುಮಾರಸ್ವಾಮಿ ಎಚ್ಚರಿಕೆ ನೀಡಿದರು. 2028ರ ಚುನಾವಣೆಗೆ ರಾಜ್ಯ ರಾಜಕಾರಣಕ್ಕೆ ವಾಪಸ್ ರಾಜ್ಯ ರಾಜಕಾರಣಕ್ಕೆ ಮರಳುತ್ತೀರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ, "ನಾನು ರಾಜ್ಯ ರಾಜಕಾರಣಕ್ಕೆ ಬರುತ್ತೇನೆ. ಅದು ಈಗಲ್ಲ, 2028ರ ಸಾರ್ವತ್ರಿಕ ಚುನಾವಣೆಗೆ ಬರುತ್ತೇನೆ" ಎಂದು ಸ್ಪಷ್ಟಪಡಿಸಿದರು. "ಏನೋ ನಾನೇ ಮುಂದಿನ ಏಳೂವರೆ ವರ್ಷ ಗೂಟ ಹೊಡೆದುಕೊಂಡು ಇರುತ್ತೇನೆ ಅಂತಾರಲ್ಲ. ಆಗ ನೋಡೋಣ ಯಾರ ಗೂಟ ಇರುತ್ತದೆ? ಜನ ಗೂಟ ಕಿತ್ತಾಕುತ್ತಾರೆ" ಎಂದು ಹೇಳುವ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪರೋಕ್ಷವಾಗಿ ಟಾಂಗ್ ನೀಡಿದರು.

# ನೆಲವಂಕಿ ಗ್ರಾಮದಲ್ಲಿ ಪಶು ಆರೋಗ್ಯ ತಪಾಸಣಾ ಶಿಬಿರ



**ವಿಜಯ ದುಂಬಿ ಸುದ್ದಿ....**

**ಚಿಂತಾಮಣಿ ರೇಷ್ಮೆ ಕೃಷಿ ಮಹಾವಿದ್ಯಾಲಯದ ಗ್ರಾಮೀಣ ಕೃಷಿ ಕಾರ್ಯಾನುಭವ (RAWE) ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳು ನೆಲವಂಕಿ ಗ್ರಾಮದಲ್ಲಿ ಪಶು ಆರೋಗ್ಯ ತಪಾಸಣಾ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಿದರು.**

ಈ ಶಿಬಿರದಲ್ಲಿ ಪಶುವೈದ್ಯರಾದ ಡಾ. ವಿನೀಶ್ ಹಾಗೂ ಡಾ. ಚಂದನ್ ಅವರು ಗ್ರಾಮದ ಅನೇಕ ಜಾನುವಾರುಗಳನ್ನು ತಪಾಸಣೆ ಮಾಡಿ, ಅಗತ್ಯವಿರುವ ಲಸಿಕೆಗಳು ಹಾಗೂ ಔಷಧಿ ಮಾತ್ರೆಗಳನ್ನು ವಿತರಿಸಿದರು. ಅಲ್ಲದೆ, ಜಾನುವಾರುಗಳ ಆರೋಗ್ಯ ಸಂರಕ್ಷಣೆ, ಪೌಷ್ಟಿಕ ಆಹಾರ, ರೋಗಗಳ ತಡೆಗಟ್ಟುವಿಕೆ ಮತ್ತು ಸ್ವಚ್ಛತೆಯ ಕುರಿತು ರೈತರಿಗೆ ಅಗತ್ಯ ಸಲಹೆಗಳನ್ನು ನೀಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಡೀನ್ ಡಾ. ರಾಮಕೃಷ್ಣ ಹೆಗಡೆ ಯವರು ಮಾತನಾಡಿ, "ಆರೋಗ್ಯವಂತ ಜಾನುವಾರುಗಳು ಸಮೃದ್ಧ ರೈತನ ಆಧಾರ.

ನಿಯಮಿತ ಆರೋಗ್ಯ ತಪಾಸಣೆಯಿಂದ ರೋಗಗಳನ್ನು ಆರಂಭದಲ್ಲೇ ಪತ್ತೆಹಚ್ಚಿ, ಜಾನುವಾರುಗಳ ಆರೋಗ್ಯ ಮತ್ತು ಉತ್ಪಾದಕತೆಯನ್ನು ಕಾಪಾಡಬಹುದು" ಎಂದು ತಿಳಿಸಿದರು. ಜಾನುವಾರುಗಳ ಆರೋಗ್ಯದ ಬಗ್ಗೆ ರೈತರು ಹೆಚ್ಚಿನ ಕಾಳಜಿ ವಹಿಸುವಂತೆ ಅವರು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ರಾವೆ ಸಂಯೋಜಕರಾದ ಶ್ರೀನಿವಾಸ್ ರೆಡ್ಡಿ ಹಾಗೂ ಪ್ರಾಧ್ಯಾಪಕರಾದ ಡಾ. ಸುನೀತಾ, ಡಾ. ರಾಜೇಶ್ ಮತ್ತು ಡಾ. ಸಾಗರ್ ಉಪಸ್ಥಿತರಿದ್ದರು.

ಗ್ರಾಮದ ರೈತರು ಹಾಗೂ ಪಶುಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಸದುಪಯೋಗ ಪಡೆದುಕೊಂಡರು. ಈ ಪಶು ಆರೋಗ್ಯ ತಪಾಸಣಾ ಶಿಬಿರವು ಜಾನುವಾರುಗಳ ಆರೋಗ್ಯ ಸುಧಾರಣೆಯ ಜೊತೆಗೆ ರೈತರಲ್ಲಿ ಪಶುಪಾಲನೆ ಮತ್ತು ರೋಗನಿರ್ವಹಣೆಯ ಕುರಿತು ಜಾಗೃತಿ ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸಿತು.

# ದಯಾನಂದ ಸಾಗರ್ ಮೆಮೋರಿಯಲ್ ಕಪ್ ಕರಾಟೆ ಪಂದ್ಯಾವಳಿ

# ಚಿಕ್ಕಬಳ್ಳಾಪುರದ ಶಾಲಾ ವಿದ್ಯಾರ್ಥಿಗಳು ವಿಜೇತ

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ: ದಯಾನಂದ್ ಸಾಗರ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಶ್ರೀ ದಯಾನಂದ ಸಾಗರ್ ಮೆಮೋರಿಯಲ್ ಕಪ್ ಎಂಬ ಕರಾಟೆ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಕರಾಟೆ ಪಂದ್ಯಾವಳಿಯಲ್ಲಿ ಅತಿಥಿಗಳಾಗಿ ಡಾ। ಡಿ ಎಂ ಚಂದ್ರ ಸಾಗರ್, ಚೇರ್ಮನ್, ಡಾ। ಡಿ ಪ್ರೇಮ್ ಚಂದ್ರಸಾಗರ್, ವೈಸ್ ಚೇರ್ಮನ್, ಶ್ರೀ ಗಲ್ಲಿ ಸ್ವಾಮಿ, ಸೆಕ್ರೆಟರಿ, ಶ್ರೀಮತಿ ತಿಂತೀಷ ಹೆಚ್ ಸಾಗರ್, ಟ್ರಸ್ಟೀ ಮತು ಸಹ ಕಾರ್ಯದರ್ಶಿ, ಶ್ರೀ ಜನಾರ್ಧನ್ ಆರ್, ಶ್ರೀ ರೋಹನ್ ಪಿ ಸಾಗರ್, ಟ್ರಸ್ಟೀ ಮತು ಸಹ ಕಾರ್ಯದರ್ಶಿ,**

ಎಂ.ಜಿ.ವಿ.ಪಿ ಟ್ರಸ್ಟ್, ಶ್ರೀ ನಿಶಾನ್ ಹೆಚ್ ಸಾಗರ್, ಜಂಟಿ ಕಾರ್ಯದರ್ಶಿ ಮತ್ತು ಮುಖ್ಯ ಅತಿಥಿಯಾಗಿ ಕ್ಯೋಶಿ ಎಂ. ಅಲ್ತಾಫ್ ಪಾಷಾ ಪ್ರೆಸಿಡೆಂಟ್ ಕೆ.ಎಸ್.ಕೆ.ಎ ಮತ್ತು ಶಾಲಾ ಶಿಕ್ಷಕರು, ತರಬೇತಿದಾರರು ಹಾಗೂ ಕರಾಟೆ ಪಟುಗಳು ಪಾಲ್ಗೊಂಡಿದ್ದರು. ಈ ಕರಾಟೆ ಪಂದ್ಯಾವಳಿಯಲ್ಲಿ ಕುಶಾಲ್ ಕುಮಾರ್ ಸಿ.ಎಂ. ನ್ಯೂಟನ್ ಗ್ರಾಮರ್ ಸ್ಕೂಲ್, ಪಾವನಿ



ಎಸ್. ರಾಜ್ ಬಿಜಿಎಸ್ ವರ್ಲ್ಡ್ ಸ್ಕೂಲ್, ಎಸ್ವಾಂಕ್ ಎಂ. ಬ್ರೈಟ್ ಸ್ಕೂಲ್, ಪ್ರತೀಕ್ ರೆಡ್ಡಿ ಎಂ. ನ್ಯೂಟನ್ ಗ್ರಾಮರ್ ಸ್ಕೂಲ್, ಪ್ರಜ್ವಲ್ ಕೆ.ವಿ. ಜಿಎಚ್‌ಪಿಎಸ್ ಸ್ಕೂಲ್, ತೇಜಸ್ ಕುಮಾರ್ ಎ. ನ್ಯೂಟನ್ ಗ್ರಾಮರ್ ಸ್ಕೂಲ್, ತನುಜಾ ಎನ್.ವಿ. ನ್ಯೂಟನ್ ಗ್ರಾಮರ್ ಸ್ಕೂಲ್ ಚಿನ್ನದ ಪದಕ, ಮೊಹಮ್ಮದ್ ಮೊಯಿಜ್ ಅನಂತ ವಿದ್ಯಾನಿಕೇತನ ಸ್ಕೂಲ್, ಶೋಭಾಶ್ರೀ ಎಂ. ನ್ಯೂಟನ್ ಗ್ರಾಮರ್ ಸ್ಕೂಲ್, ಲತಾಶ್ರೀ ಜಿಎಚ್‌ಪಿಎಸ್ ಸ್ಕೂಲ್, ಅರ್ಪಿತಾ ಬೈ ಜಿ. ಆಕಾಶ ಗ್ಲೋಬಲ್ ಸ್ಕೂಲ್, ವಿನಯ್ ರಾಜ್ ಎನ್.ವಿ. ನ್ಯೂಟನ್ ಗ್ರಾಮರ್ ಸ್ಕೂಲ್ ಬೆಳ್ಳಿ ಪದಕ ಮತ್ತು ವಂಶಿ ಡಿ.ವಿ. ಸರ್ಕಾರಿ ಶಾಲೆ,

ಜಯಂತ್ ಕುಮಾರ್ ಸರ್ಕಾರಿ ಶಾಲೆ, ಸುತಂತು ಎಸ್. ಶ್ರೀ ಕೆ.ವಿ. ಇಂಗ್ಲಿಷ್ ಸ್ಕೂಲ್, ಜತಿನ್ ಸಾಯಿ ಎಸ್. ಶ್ರೀ ಚೈತನ್ಯ ಸ್ಕೂಲ್, ಸಮರ್ಜಿತ್ ಜಿ. ಬಿಜಿಎಸ್ ವರ್ಲ್ಡ್ ಸ್ಕೂಲ್ ,ವಿಜಯ್ ರಾಜ್ ಎಸ್. ಬಿಜಿಎಸ್ ವರ್ಲ್ಡ್ ಸ್ಕೂಲ್, ಸಾಯಿ ಚರಣ್ ಕೆ.ವಿ. ಶ್ರೀ ಕೆ.ವಿ. ಇಂಗ್ಲಿಷ್ ಸ್ಕೂಲ್, ತೇಜಸ್ ಕುಮಾರ್ ಪಿ. ಕ್ವಿಕ್ ಕಾರ್ನರ್ ಸ್ಕೂಲ್, ಚರಣ್ ತೇಜ್ ಆರ್. ನ್ಯೂಟನ್ ಗ್ರಾಮರ್ ಸ್ಕೂಲ್, ತನ್ವಿತ್ ಎಸ್. ಬಿಜಿಎಸ್ ವರ್ಲ್ಡ್ ಸ್ಕೂಲ್ ಕಂಚಿನ ಪದಕ ಪಡೆದು ಚಿಕ್ಕಬಳ್ಳಾಪುರದ ಕೀರ್ತಿಯನ್ನು ಎತ್ತಿ ಹಿಡಿದಿರುತ್ತಾರೆ. ಈ ವಿದ್ಯಾರ್ಥಿಗಳನ್ನು ಆಯಾ ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಾಲಾ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಬಾಗೇಪಲ್ಲಿಯಿಂದ–ತಿರುಪತಿ ಸಾರಿಗೆ ಬಸ್ ಮಾರ್ಗವನ್ನು ಬದಲಾವಣೆ ಮಾಡಬಾರದೆಂದು ಸಾರ್ವಜನಿಕ ಒತ್ತಾಯ..!

**ವಿಜಯ ದುಂಬಿ ಸುದ್ದಿ....**

**ಚೇಳೂರು: ಬಾಗೇಪಲ್ಲಿಯಿಂದ ತಿರುಪತಿಗೆ ಹೊರಡುವ ಸಾರ್ವಜನಿಕರ ಅನುಕೂಲಕ್ಕಾಗಿ ಪ್ರಸ್ತುತ ಇರುವ ಸಾರಿಗೆ ಬಸ್ ಮಾರ್ಗವನ್ನು ಯಾವುದೇ ಕಾರಣಕ್ಕೂ ಬದಲಾಯಿಸಬಾರದೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಪ್ರಸ್ತುತ ಈ ಬಸ್ ಚಲಿಸುತ್ತಿರುವ ಮಾರ್ಗವು ನಮಗೆಲ್ಲರಿಗೂ ಅತ್ಯಂತ ಅನುಕೂಲಕರವಾಗಿದೆ.**

ಆದರೆ, ಇತ್ತೀಚೆಗೆ ಈ ಬಸ್‌ನ ಮಾರ್ಗವನ್ನು ಗೌರಿಬಿದನೂರು ನಿಂದ ಬರುವಂತೆ ಮಾರ್ಗ ಬದಲಾಯಿಸಲು ಇಲಾಖೆ ನಿರ್ಧರಿಸಿದೆ ಎಂದು ತಿಳಿದುಬಂದಿದೆ. ಒಂದು ವೇಳೆ ಈ ಮಾರ್ಗ ಬದಲಾವಣೆಯಾದರೆ, ನಮ್ಮ ಭಾಗದ ಜನಸಾಮಾನ್ಯರಿಗೆ, ಶಾಲಾ-




ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು ವೃದ್ಧರಿಗೆ ತೀವ್ರ ತೊಂದರೆಯಾಗಲಿದೆ. ಪ್ರಸ್ತುತ ಬಾಗೇಪಲ್ಲಿ ಪಟ್ಟಣದಿಂದ ಬೆಳಗಿನ ಜಾವ ಇರುವ ಒಂದೇ ಒಂದು ಸಾರಿಗೆ ಬಸ್ ಇದು 6:40 ಗಂಟೆಗೆ ಬಿಡುವ ಸಾರಿಗೆ ಬಸ್ ಪಾತಪಾಳ್ಯ ಮಾರ್ಗವಾಗಿ ಚೇಳೂರಿನಿಂದ ತಿರುಪತಿಗೆ ಹೋಗುತ್ತಿದ್ದು ಇದರಿಂದ ಎಲ್ಲಾ ಜನತೆಗೆ ತುಂಬಾ ಅನುಕೂಲಕರವಾಗಿದೆ. ಆದ್ದರಿಂದ ಹಳೆಯ ಮಾರ್ಗವನ್ನೇ ಮುಂದುವರಿಸಲು ಜನತೆ ಮನವಿ ಮಾಡಿದ್ದಾರೆ. ಬಸ್ ಮಾರ್ಗಗಳು ಬದಲಾದರೆ ವಿದ್ಯಾರ್ಥಿಗಳು, ಉದ್ಯೋಗಿಗಳು ಮತ್ತು ದಿನನಿತ್ಯ ಪ್ರಯಾಣಿಸುವ ಜನಸಾಮಾನ್ಯರಿಗೆ ತುಂಬಾ ತೊಂದರೆಯಾಗುತ್ತದೆ.ಇಲಾಖೆಯಿಂದ ಹೆಚ್ಚಿನ ಪ್ರಮಾಣದಲ್ಲಿ ಸಾರಿಗೆ ಬಸ್ ಗಳು ಬಿಟ್ಟರೆ ಇನ್ನೂ ಎಲ್ಲಾ ಜನತೆಗೆ ಅನುಕೂಲ ವಾಗುತ್ತದೆ.ಈ ಗ್ರಾಮೀಣ ಭಾಗಗಳಲ್ಲಿ ಸಾರಿಗೆ ಬಸ್ ಗಳು ತುಂಬಾ ವಿರಳವಾಗಿದೆ.

ಸಾರ್ವಜನಿಕರ ಹಿತದೃಷ್ಟಿಯಿಂದ ಪ್ರಸ್ತುತ ಇರುವ ಬಸ್ ಮಾರ್ಗವನ್ನು ಯಾವುದೇ ಕಾರಣಕ್ಕೂ ಬದಲಾಯಿಸದೆ, ಯಥಾಸ್ಥಿತಿಯಲ್ಲಿ ಮುಂದುವರಿಸಬೇಕಾಗಿದೆ ಇಲ್ಲದಿದ್ದರೆ ಸಾರಿಗೆ ಡಿಪೋ ಮುಂದೆ ಧರಣಿ ಹೋರಾಟ ಮಾಡಬೇಕಾಗುತ್ತದೆ ಎಂದು ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಕಡ್ಡಿಲು ವೆಂಕಟರವಣ ಮತ್ತು ವಿದ್ಯಾರ್ಥಿಗಳು ಎಚ್ಚರಿಸಿದ್ದಾರೆ. ಈ ಭಾಗದಲ್ಲಿ ಪ್ರಸ್ತುತ ಖಾಸಗಿ ಬಸ್ ಗಳ ಪ್ರಭಾವ ಹೆಚ್ಚು ಹೆಚ್ಚು ಇದ್ದು, ಖಾಸಗಿ ಬಸ್ ಗಳಲ್ಲಿ ಸಾರ್ವಜನಿಕರು ವಿದ್ಯಾರ್ಥಿಗಳು ಪ್ರಯಾಣ ಬೆಳೆಸಲು ಅಷ್ಟು ಯೋಗಕ್ಷೇಮವಾಗಿಲ್ಲ. ಸುರಕ್ಷಿತವೂ ಇಲ್ಲ.ಇಲಾಖೆ ಮನಸ್ಸು ಮಾಡಿ ಈ ಗ್ರಾಮೀಣ ಭಾಗಗಕ್ಕೆ ಇನ್ನೂ ಹೆಚ್ಚಿನ ಬಸ್ ಗಳು ಬಿಡಲು ಈಗಾಗಲೇ ಶಾಸಕರ ಬಳಿ ಎಷ್ಟೋ ಮನವಿ ಪತ್ರಗಳು ಸಹ ನೀಡಿದ್ದು.ಇರುವ ಮಾರ್ಗವನ್ನು ಎಂದಿಗೂ ಬದಲಾಯಿಸದೆ ಮುಂದು ವರಿಸಬೇಕು ಎಂದು ಈ ಮೂಲಕ ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಏನಿಗದಲೆಯಲ್ಲಿ ಸಿರಿ ಹಾಸ್ಪಿಟಲ್ ಉದ್ಘಾಟಿಸಿದ ತಾಲ್ಲೂಕು ಆರೋಗ್ಯ ಅಧಿಕಾರಿ ಸತ್ಯನಾರಾಯಣ ರೆಡ್ಡಿ

**ವಿಜಯ ದುಂಬಿ ಸುದ್ದಿ....**

**ಚೇಳೂರು: ಗ್ರಾಮೀಣ ಭಾಗದಲ್ಲಿ ಸುಸಜ್ಜಿತ ಆಸ್ಪತ್ರೆ ಆರಂಭವಾಗುತ್ತಿರುವುದು ಈ ಭಾಗದ ಜನರಿಗೆ ಸಂತಸದ ವಿಷಯ' ಎಂದು ತಾಲ್ಲೂಕು ಆರೋಗ್ಯ ಅಧಿಕಾರಿ ಸತ್ಯನಾರಾಯಣ ರೆಡ್ಡಿ ಹೇಳಿದರು. ತಾಲೂಕಿನ ಏನಿಗದಲೆ ಗ್ರಾಮದಲ್ಲಿ ಭಾನುವಾರ ಸಿರಿ ಹಾಸ್ಪಿಟಲ್ ನ್ನು ಉದ್ಘಾಟಿಸಿದರು. ಬಳಿಕ ಜನರನ್ನು ಉದ್ದೇಶಿಸಿ ಮಾತನಾಡಿ ಎಲ್ಲಾ ಕಡೆ ಡಾಕ್ಟರ್ ಗಳು ಪಟ್ಟಣ ಮತ್ತು ನಗರಗಳ ಕಡೆ ಆರ್ಥಿಕವಾಗಿ ಬೆಳೆಯಲು ಮುಂದಾಗುತ್ತಾರೆ ಆದರೆ ಇಲ್ಲಿ ಗಡಿ ಭಾಗದ ಗ್ರಾಮೀಣ ಜನತೆಯ ಬಡವರ ಸೇವೆಗಾಗಿ 24 ಗಂಟೆಗಳ ಸೇವೆಯನ್ನು ನೀಡುವ ಆಸ್ಪತ್ರೆ ಯನ್ನು ತೆಗೆಯಲಾಗುವುದು ನಿಜವಾಗಿಯೂ ಶ್ಲಾಘನೀಯವಾದದ್ದು ಎಂದರು.**

ಈ ಕಾಲದಲ್ಲಿ ಆರೋಗ್ಯವೇ ಮಹಾಭಾಗ್ಯ ವಾಗಿದ್ದು,ಆರೋಗ್ಯವನ್ನು ಕಾಪಾಡಿಕೊಳ್ಳುವ



ನಿಟ್ಟಿನಲ್ಲಿ ಸಾರ್ವಜನಿಕರು ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು.ಸಾರ್ವಜನಿಕರಿಗೆ ಸರ್ಕಾರದಿಂದ ಆರೋಗ್ಯ ನೀಡುವುದಲ್ಲದೆ ನಿಮ್ಮಿಂದ ಕೂಡ ಜನರಿಗೆ ಸಹಕಾರಿಗಾಗಬೇಕು. ಆಸ್ಪತ್ರೆ ಆರಂಭವಾಗಿರುವುದರಿಂದ ಇಲ್ಲಿನ ಜನರಿಗೆ ಅನುಕೂಲವಾಗಿದೆ. ಎಲ್ಲ ರೀತಿಯ ಸೌಲಭ್ಯ ದೊರಕುವಂತೆ ಮಾಡಿರುವುದು ಮೆಚ್ಚುವ ವಿಷಯವಾಗಿದೆ ಎಂದರು. ಇದೇ ವೇಳೆಯಲ್ಲಿ ಡಾ.ಎಸ್ ಕೆ.ತರುಣ್ ಮಾತನಾಡಿ ನಮ್ಮ ಸಿರಿ ಆಸ್ಪತ್ರೆ ಟ್ರಸ್ಟ್ ವತಿಯಿಂದ ಗ್ರಾಮೀಣ ಭಾಗದ ಜನರಿಗೆ ಅನುಕೂಲಕರವಾಗುವಂತೆ ಚಾಕವೇಲು ,ಸಾದಲಿ,ಏನಿಗದಲೆ ಮುಂತಾದ ಕಡೆಗಳಲ್ಲಿ ಈಗಾಗಲೇ ಆಸ್ಪತ್ರೆಯನ್ನು ಪ್ರಾರಂಭಿಸಿದ್ದೇವೆ.

ಇಂದು ಏನಿಗದಲೆ ಗ್ರಾಮದ ಚೇಳೂರು ಮುಖ್ಯ ರಸ್ತೆಯಲ್ಲಿ ಈ ಆಸ್ಪತ್ರೆಯನ್ನು ಪ್ರಾರಂಭಿಸಲು ಮುಖ್ಯ ಉದ್ದೇಶ ನಾವು ಗ್ರಾಮೀಣ ಪ್ರದೇಶದಲ್ಲಿ ವೈದ್ಯಕೀಯ ಸೇವೆಯನ್ನು ಜನರಿಗೆ ಒದಗಿಸಬೇಕು ಎನ್ನುವ ಮಹತ್ವಾಕಾಂಕ್ಷೆಯಗಿದ್ದು,ಈ ಉದ್ದೇಶ ಇಟ್ಟಿಕೊಂಡಿರುವುದು ಬಡಜನರಿಗೆ ತುರ್ತು ಪರಿಸ್ಥಿತಿಯಲ್ಲಿ ತುಂಬಾ ಅನುಕೂಲಕರವಾಗುವಂತೆ ಕಡಿಮೆ ದರದಲ್ಲಿ ಉತ್ತಮ ಸೇವೆ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಪರಿಣಾಮಕಾರಿ ಚಿಕಿತ್ಸೆಯನ್ನು ನೀಡುವ ಉದ್ದೇಶವನ್ನು ಇಟ್ಟಿಕೊಂಡಿದ್ದೇವೆ ಎಂದ ಅವರು ನಮ್ಮಲ್ಲಿ ಔಷಧಾಲಯ,

ಪ್ರಯೋಗಾಲಯ,ಅಂಬ್ಯುಲೆನ್ಸ್,ಇ .ಸಿ.ಜಿ. ತುರ್ತು ಪ್ರಥಮ ಚಿಕಿತ್ಸೆ,ಲಸಿಕೆ ಸೇರಿದಂತೆ ಮುಂತಾದ ಸೌಲಭ್ಯಗಳು ಇದ್ದು ಈ ಒಂದು ಆಸ್ಪತ್ರೆಯ ಸೇವೆಯನ್ನು ಚೇಳೂರು, ಚಿಂತಾಮಣಿ, ಹಾಗೂ ಶಿಡ್ಲಘಟ್ಟ ತಾಲೂಕಿನ ಜನರು ಸದುಪಯೋಗ ಪಡೆದುಕೊಳ್ಳಲು ಮನವಿ ಮಾಡಿದರು. ಈ ಸಂದರ್ಭದಲ್ಲಿ ಎಸ್. ಕೆ. ಸೃಜನ್,ವಿ.ರಾಮಚಂದ್ರಪ್ಪ ,ಕೃಷ್ಣಪ್ಪ ,ತಟ್ಟಹಳ್ಳಿ ಮುನಿರಾಜು ಏನಿಗದಲೆ ನವೋದಯ ವಿದ್ಯಾ ಕೇಂದ್ರದ ಪ್ರಾಂಶುಪಾಲರು,ಉಪ ಪ್ರಾಂಶುಪಾಲರು, ಹಾಗೂ ಸಿರಿ ಆಸ್ಪತ್ರೆ ಟ್ರಸ್ಟ್ ಎಲ್ಲಾ ಸದಸ್ಯರು , ಏನಿಗದಲೆ ಗ್ರಾಮದ ಪ್ರಮುಖ ಮುಖಂಡರು ,ಸಾರ್ವಜನಿಕರು ಭಾಗವಹಿಸಿದರು.

# ಜನರ ಮನೆ ಬಾಗಿಲಿಗೆ ಆಡಳಿತ : ಸೆ.5ರಂದು ಪ್ರಜಾಸೇವಾ ಅಭಿಯಾನಕ್ಕೆ ಚಾಲನೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಸರ್ಕಾರಿ ಕಚೇರಿಗಳಿಗೆ ಅಲೆದಾಡದೆ ತಮ್ಮ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ ರಾಜ್ಯ ಸರ್ಕಾರ 'ಪ್ರಜಾಸೇವಾ ಅಭಿಯಾನ' ಆರಂಭಿಸುತ್ತಿದೆ. ಆಡಳಿತವನ್ನು ಜನರ ಬಳಿಗೆ ಕೊಂಡೊಯ್ಯುವ ಉದ್ದೇಶದ ಈ ಅಭಿಯಾನಕ್ಕೆ ಸೆ.5ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿ ಹೋಬಳಿಯಲ್ಲಿ ಚಾಲನೆ ದೊರೆಯಲಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದ್ದಾರೆ.**

ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ಕುಂದುಕೊರತೆ, ಅರ್ಜಿ ಹಾಗೂ ದೂರುಗಳನ್ನು ನೇರವಾಗಿ ಸ್ವೀಕರಿಸಿ, ಸಾಧ್ಯವಾದಷ್ಟು ಸ್ಥಳದಲ್ಲಿಯೇ ಪರಿಹರಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಹೆಚ್ಚಿನ ಸಮಯ ಬೇಕಾಗುವ ಸಮಸ್ಯೆಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವ ಮೂಲಕ ಅಧಿಕಾರಿಗಳ ಹೊಣೆಗಾರಿಕೆಯನ್ನು ಹೆಚ್ಚಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಸಣ್ಣಪುಟ್ಟ ಕೆಲಸಗಳಿಗೂ ತಾಲೂಕು ಕಚೇರಿ, ಗ್ರಾಮ ಪಂಚಾಯಿತಿ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳಿಗೆ ಪದೇಪದೆ ಅಲೆದಾಡಬೇಕಾದ ಪರಿಸ್ಥಿತಿಯನ್ನು ತಪ್ಪಿಸಿ, ಆಡಳಿತವನ್ನು ಜನರ ಮನೆ ಬಾಗಿಲಿಗೆ ತಲುಪಿಸುವುದು ಅಭಿಯಾನದ ಆಶಯವಾಗಿದೆ. ಸಾರ್ವಜನಿಕರ ಅಹವಾಲುಗಳನ್ನು ಆಲಿಸುವುದರ ಜತೆಗೆ ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಲು ಸಭೆಗಳಲ್ಲಿ ಇಲಾಖಾವಾರು ಮಳಿಗೆಗಳನ್ನು ಸ್ಥಾಪಿಸಲಾಗುತ್ತದೆ.

ಪ್ರತಿ ಶನಿವಾರ ಸಭೆ ಪ್ರತಿ ಶನಿವಾರ ತಾಲೂಕು ಅಥವಾ ಹೋಬಳಿ ಮಟ್ಟದಲ್ಲಿ ಪ್ರಜಾಸೇವಾ ಅಭಿಯಾನ ಸಭೆಗಳನ್ನು ಆಯೋಜಿಸಲಾಗುತ್ತದೆ. ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ತಾಲೂಕು ಕೇಂದ್ರದಲ್ಲಿ ಸಭೆ ನಡೆಯಲಿದೆ. ಎರಡನೇ ಮತ್ತು ನಾಲ್ಕನೇ ಶನಿವಾರ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ತಾಲೂಕು ಅಥವಾ ಹೋಬಳಿ ಮಟ್ಟದಲ್ಲಿ ಸಭೆ ನಡೆಸಲಾಗುತ್ತದೆ.

ಮುಂದಿನ ಮೂರು-ನಾಲ್ಕು ತಿಂಗಳಲ್ಲಿ ರಾಜ್ಯದ ಎಲ್ಲ ತಾಲೂಕು ಹಾಗೂ ಹೋಬಳಿಗಳಲ್ಲಿ ಸಭೆ ನಡೆಸಲು ಏಕೀಕೃತ ವೇಳಾಪಟ್ಟಿ ಸಿದ್ಧಪಡಿಸಲಾಗುತ್ತದೆ. ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಸಭೆ ನಡೆಯುವ ದಿನವೇ ಅದೇ ಕ್ಷೇತ್ರದಲ್ಲಿ ಪ್ರತ್ಯೇಕ ಶಾಸಕರ ಸಭೆ ನಡೆಸುವುದಿಲ್ಲ. ಸಂಬಂಧಿಸಿದ ಶಾಸಕರು ಸಚಿವರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಭೆಯ ಕುರಿತು ಸಾರ್ವಜನಿಕರಿಗೆ ಕನಿಷ್ಠ 15 ದಿನಗಳ ಮುಂಚಿತವಾಗಿ ಮನೆ-ಮನೆಗೆ ಕರಪತ್ರ ವಿತರಿಸಿ ಮಾಹಿತಿ ನೀಡಲಾಗುತ್ತದೆ. ಕರಪತ್ರದಲ್ಲಿಯೇ ಅರ್ಜಿ ನಮೂನೆ ಹಾಗೂ ಅಗತ್ಯ ದಾಖಲೆಗಳ ವಿವರ ನೀಡಲಾಗುತ್ತದೆ. ಕೃತಕ ಬುದ್ಧಿಮತ್ತೆ ಆಧಾರಿತ ಕರೆ ವ್ಯವಸ್ಥೆಯ ಮೂಲಕ ಸಭೆಯ ದಿನಾಂಕ, ಸಮಯ, ಸ್ಥಳ ಹಾಗೂ ಅಧ್ಯಕ್ಷತೆ ವಹಿಸುವ ಜನಪ್ರತಿನಿಧಿಗಳ ಕುರಿತು ಮುಂಗಡ ಮಾಹಿತಿ ನೀಡಲಾಗುತ್ತದೆ.

1902ಕ್ಕೆ ದೂರು ಸಲ್ಲಿಕೆ ರಾಜ್ಯದ ವಿವಿಧ ಇಲಾಖೆಗಳ ಸೇವೆ ಹಾಗೂ ಯೋಜನೆಗಳಿಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಲು ಏಕೀಕೃತ ಸಾರ್ವಜನಿಕ



ಕುಂದುಕೊರತೆ ನಿವಾರಣಾ ವ್ಯವಸ್ಥೆ ರೂಪಿಸಲಾಗಿದೆ. ಸಾರ್ವಜನಿಕರು 1902 ಸಹಾಯವಾಣಿ ಅಥ- ವಾ ಸರ್ಕಾರದ ದೂರು ನಿವಾರಣಾ ಪೋರ್ಟಲ್ ಮೂಲಕ ತಮ್ಮ ಸಮಸ್ಯೆಗಳನ್ನು ದಾಖಲಿಸಬಹುದು. ಸಭೆಗಳಲ್ಲಿ ವಿವಿಧ ಇಲಾಖೆಗಳ ಅಧಿಕಾ- ರಿಗಳು ಹಾಜರಿದ್ದು, ಸರ್ಕಾರದ ಯೋಜನೆಗಳ ಅರ್ಹತೆ, ಸೌಲಭ್ಯ ಹಾಗೂ ಅರ್ಜಿ ಸಲ್ಲಿಸುವ ವಿಧಾನ ಕುರಿತು ಜನರಿಗೆ ಮಾಹಿತಿ ನೀಡಲಿದ್ದಾರೆ. ಉತ್ತಮ ಕಾರ್ಯಪದ್ಧತಿಗಳ ಪ್ರದರ್ಶನದ ಜತೆಗೆ ಕುಡಿಯುವ ನೀರು ಹಾಗೂ ಮೂಲಭೂತ ವೈದ್ಯಕೀಯ ಸೌಲಭ್ಯಗಳನ್ನೂ ಒದಗಿಸಲಾಗುತ್ತದೆ.

ಪ್ರತಿ ಸಭೆಯ ಬಳಿಕ ಸ್ವೀಕರಿಸಿದ ಅಹವಾಲುಗಳು, ಕೈಗೊಂಡ ಕ್ರಮ, ಪರಿಹಾರದ ವಿವರ, ಛಾಯಾಚಿತ್ರ ಹಾಗೂ ವಿಡಿಯೋಗಳನ್ನು ಪೋರ್ಟಲ್‌ನಲ್ಲಿ ದಾಖಲಿಸಲಾಗುತ್ತದೆ. ಬಾಕಿ ಉಳಿದ ಸಮಸ್ಯೆಗಳ ಕುರಿತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮೇಲ್ವಿಚಾರಣೆ ನಡೆಸಲಿದ್ದಾರೆ. ಪ್ರತಿ ಬುಧವಾರ ಮೂರು ಹಂತದ ಪರಿಶೀಲನೆ ಅಭಿಯಾನದಡಿ ಸ್ವೀಕರಿಸುವ ಅರ್ಜಿ ಹಾಗೂ ಅಹವಾಲುಗಳ ಮೇಲೆ ಪ್ರತಿ ಬುಧವಾರ ಮೂರು ಹಂತಗಳಲ್ಲಿ ಪರಿಶೀಲನೆ ನಡೆಯಲಿದೆ.

ಬೆಳಗ್ಗೆ 9ರಿಂದ 11ರವರೆಗೆ: ತಾಲೂಕು ಮಟ್ಟದ ಪರಿಶೀಲನೆ ನಡೆಯಲಿದ್ದು, ತಹಶೀಲ್ದಾರ್ ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಹಂತದಲ್ಲಿ ಬಗೆಹರಿಯದ ಸಮಸ್ಯೆಗಳನ್ನು ಉಪವಿಭಾಗಾಧಿಕಾರಿಗಳಿಗೆ ಸಲ್ಲಿಸಲಿದ್ದಾರೆ.

ಬೆಳಗ್ಗೆ 11ರಿಂದ ಮಧ್ಯಾಹ್ನ 1ರವರೆಗೆ: ಉಪವಿಭಾಗ ಮಟ್ಟದ ಪರಿಶೀಲನೆ ನಡೆಯಲಿದೆ. ಸಹಾಯಕ ಆಯುಕ್ತರು ತಾಲೂಕು ಮಟ್ಟದಿಂದ ಬಂದ ಪ್ರಕರಣಗಳನ್ನು ಪರಿಶೀಲಿಸಿ, ತಮ್ಮ ಹಂತದಲ್ಲಿ ಬಗೆಹರಿಯದ ಸಮಸ್ಯೆಗಳನ್ನು ಜಿಲ್ಲಾಧಿಕಾರಿಗಳಿಗೆ ಕಳುಹಿಸಲಿದ್ದಾರೆ. ಮಧ್ಯಾಹ್ನ 3ರಿಂದ ಸಂಜೆ 5ರವರೆಗೆ: ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಪರಿಶೀಲನೆ ನಡೆಯಲಿದೆ.

ನಿಗದಿತ ಅವಧಿಯಲ್ಲಿ ಬಗೆಹ- ರಿಯದ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಯ ಉನ್ನತ ಅಧಿಕಾರಿಗಳಿಗೆ ಸ್ವಯಂಚಾಲಿತವಾಗಿ ಮೇಲ್ದರ್ಜೆಗೆ ವರ್ಗಾಯಿಸುವ ವ್ಯವಸ್ಥೆಯೂ ಇರಲಿದೆ. ಪರಿಹಾರದ ಬಗ್ಗೆ ಸಾರ್ವಜನಿಕರಿಗೆ ಅಸಮಾಧಾನವಿದ್ದರೆ, ಸಂಬಂಧಿಸಿದ ಅಧಿಕಾರಿಯ ಮುಂದೆ ಖುದ್ದಾಗಿ ಹಾಜರಾಗಿ ತಮ್ಮ ಅಹವಾಲು ಮಂಡಿಸಲು ಅವಕಾಶ ಕಲ್ಪಿಸಲಾಗುತ್ತದೆ. ಗ್ರಾಮ ಒನ್‌ನಲ್ಲಿಯೇ ಅರ್ಜಿ ಸಾರ್ವಜನಿಕರು ತಮ್ಮ ಅರ್ಜಿ ಹಾಗೂ ಅಹವಾಲುಗಳನ್ನು ಮುಂಚಿತವಾಗಿಯೇ ಗ್ರಾಮ ಒನ್ ಕೇಂದ್ರಗಳಲ್ಲಿ ಸಲ್ಲಿಸಬಹುದು. ಸಭೆ ನಡೆಯುವ ಸ್ಥಳದಲ್ಲಿಯೂ ಗ್ರಾಮ ಒನ್ ಮಳಿಗೆಗಳನ್ನು ಸ್ಥಾಪಿಸಿ ಕಂಪ್ಯೂಟರ್, ಮುದ್ರಕ ಹಾಗೂ ಅಂತರ್ಜಾಲ ಸೌಲಭ್ಯ ಒದಗಿಸಲಾಗುತ್ತದೆ. ಇದರಿಂದ ಸ್ಥಳದಲ್ಲಿಯೇ ಆನ್‌ಲೈನ್ ಮೂಲಕ ಅರ್ಜಿ ಹಾಗೂ ದೂರು ಸಲ್ಲಿಸಲು ಅವಕಾಶ ದೊರೆಯಲಿದೆ.

ಸಭೆಯಲ್ಲಿ ಎರಡು ರೀತಿಯ ಅಹವಾಲುಗಳನ್ನುಪ್ರತ್ಯೇಕವಾಗಿ ಪರಿಗಣಿಸಲಾಗುತ್ತದೆ. ಮೊದಲನೆಯದು ಹೊಸದಾಗಿ ಸಲ್ಲಿಸುವ ದೂರುಗಳು. ಎರಡನೆಯದು ಈಗಾಗಲೇ ಸಕಾಲ ಅಥವಾ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯಲ್ಲಿ ನೋಂದಾಯಿಸಿದ್ದರೂ ಪರಿಹಾರವಾಗದ ಅಥವಾ 21 ದಿನಗಳ ಬಳಿಕವೂ ಸಮರ್ಪಕ ಪರಿಹಾರ ದೊರೆಯದ ಅಹವಾಲುಗಳು. ಇಂತಹ ಪ್ರಕರಣಗಳಿಗೆ ಆದ್ಯತೆ ನೀಡಲಾಗುತ್ತದೆ.

ಸ್ಥಳದಲ್ಲಿಯೇ ಮಂಜೂರಾತಿ ಪತ್ರ ಅರ್ಹ ಫಲಾನುಭವಿಗಳಿಗೆ ವಿವಿಧ ಸರ್ಕಾರಿ ಯೋಜನೆಗಳ ಮಂಜೂರಾತಿ ಪತ್ರಗಳನ್ನು ಸ್ಥಳದಲ್ಲಿಯೇ ವಿತರಿಸುವ ವ್ಯವಸ್ಥೆ ಇರಲಿದೆ. ಈಗಾಗಲೇ ಪರಿಹಾರಗೊಂಡ ಪ್ರಕರಣಗಳಿಗೆ ಸಂಬಂಧಿಸಿದ ಅನುಮೋದನೆ ಅಥವಾ ದೃಢೀಕರಣ ಪತ್ರವನ್ನೂ ಸ್ಥಳದಲ್ಲಿಯೇ ನೀಡಲಾಗುತ್ತದೆ. ಅರ್ಜಿ ಹಾಗೂ ಅಹವಾಲುಗಳ ಪ್ರಗತಿಯನ್ನು ಸಾರ್ವಜನಿಕರು ನೈಜ ಸಮಯದಲ್ಲಿ ಪರಿಶೀಲಿಸಲು ಅವಕಾಶ ಕಲ್ಪಿಸಲಾಗುತ್ತದೆ. ಈ ಮೂಲಕ ದೂರುಗಳ ತ್ವರಿತ ವಿಲೇವಾರಿ, ಸ್ಥಳದಲ್ಲಿಯೇ ಸೇವೆ, ನಿರಂತರ ಪರಿಶೀಲನೆ ಹಾಗೂ ಅಧಿಕಾ- ರಿಗಳ ಹೊಣೆಗಾರಿಕೆಯನ್ನು ಖಚಿತಪಡಿಸುವ ಗು- ರಿಯನ್ನು ಪ್ರಜಾಸೇವಾ ಅಭಿಯಾನ ಹೊಂದಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಪರಿಹ- ರಿಸಿಕೊಳ್ಳುವುದರ ಜತೆಗೆ ಸರ್ಕಾರದ ಯೋಜನೆಗಳ ಮಾಹಿತಿ ಪಡೆದು ಸಲಹೆ-ಸೂಚನೆಗಳನ್ನು ನೀಡಬೇಕು ಎಂದು ಡಾ. ಶಾಲಿನಿ ರಜನೀಶ್ ಮನವಿ ಮಾಡಿದ್ದಾರೆ.

# ಇರಾನ್ ಮೇಲೆ ಮತ್ತೆ ಕ್ಷಿಪಣಿ ದಾಳಿ ಮಾಡಿದ ಅಮೆರಿಕ, ಹಾರ್ಮುಜ್ ಜಲಸಂಧಿಯಲ್ಲಿ ತೀವ್ರಗೊಂಡ ಸಂಘರ್ಷ

ವಿಜಯ ದುಂಬಿ ಸುದ್ದಿ....

**ಟೆಹ್ರಾನ್: ಮಧ್ಯಪ್ರಾಚ್ಯದಲ್ಲಿ ಮತ್ತೊಮ್ಮೆ ಯುದ್ಧದ ಕಾರ್ಮೋಡ ಆವರಿಸಿದ್ದು, ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷ ಮತ್ತಷ್ಟು ತೀವ್ರಗೊಂಡಿದೆ. ಹಾರ್ಮುಜ್ ಜಲಸಂಧಿಯ ಆಯಕಟ್ಟಿನ ಪ್ರದೇಶದಲ್ಲಿರುವ ಇರಾನ್‌ನ ಲಾರಕ್ ದ್ವೀಪದ ಮೇಲೆ ಅಮೆರಿಕ ಪಡೆಗಳು ನಡೆಸಿದ ಕ್ಷಿಪಣಿ ದಾಳಿಯಲ್ಲಿ ಇರಾನ್‌ನ ಎರಡು ಪ್ರಮುಖ ಕ್ಷಿಪಣಿ ಉಡಾವಣಾ ವ್ಯವಸ್ಥೆಗಳು (ಲಾಂಚರ್‌ಗಳು) ಧ್ವಂಸಗೊಂಡಿವೆ ಎನ್ನಲಾಗಿದೆ. ಜುಲೈ ಅಂತ್ಯದ ಬಳಿಕ ಇರಾನ್ ಭೂಪ್ರದೇಶದ ಮೇಲೆ ಅಮೆರಿಕ ನಡೆಸಿದ ಮೊದಲ ನೇರ ದಾಳಿ ಇದಾಗಿದೆ ಎಂದು ವರದಿಯಾಗಿದೆ.**

ಹಾರ್ಮುಜ್ ಜಲಸಂಧಿಯ ಮೂಲಕ ಸಾಗುವ ಹಡಗುಗಳ ಮೇಲೆ ದಾಳಿ ನಡೆಸಲು ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಪಡೆಗಳು ಸಮುದ್ರ ಗಣಿಗಳು ಹಾಗೂ ರಾಕೆಟ್‌ಗಳನ್ನು





ಸಿದ್ಧಪಡಿಸುತ್ತಿದ್ದವು ಎಂಬ ಮಾಹಿತಿ ಅಮೆ- ರಿಕ ಪಡೆಗಳಿಗೆ ಲಭ್ಯವಾಗಿತ್ತು ಎನ್ನಲಾಗಿದೆ. ಇದರ ಆಧಾರದ ಮೇಲೆ ಅಮೆರಿಕ ಪಡೆಗಳು ತಕ್ಷಣ ಪ್ರತಿದಾಳಿ ನಡೆಸಿ ಲಾಂಚರ್‌ಗಳನ್ನು ಧ್ವಂಸಗೊಳಿಸಿವೆ ಎಂದು ತಿಳಿದುಬಂದಿದೆ.

ಅಮೆರಿಕದ ದಾಳಿಗೆ ಇರಾನ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಇದಕ್ಕೆ ತಕ್ಕ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಇರಾನ್ ಸರ್ಕಾರ ಹಾಗೂ ಸೇನಾ ನಾಯಕರು ಎಚ್ಚರಿಕೆ ನೀಡಿದ್ದಾರೆ. ಹಾರ್ಮುಜ್ ಜಲಸಂಧಿಗೆ ಲಾರಕ್ ದ್ವೀಪದ ಆಯಕಟ್ಟಿನ ಸ್ಥಾನ ದಾಳಿಗೊಳಗಾದ ಲಾರಕ್ ದ್ವೀಪವು ಹಾರ್ಮುಜ್ ದ್ವೀಪದ ದಕ್ಷಿಣಕ್ಕೆ ಹಾಗೂ ಕೆಶ್ ದ್ವೀಪದ ಪೂರ್ವಕ್ಕೆ ಇದೆ. ಇರಾನ್ ರಾಜಧಾನಿ ಟೆಹ್ರಾನ್‌ನಿಂದ ಆಗ್ನೇಯ ದಿಕ್ಕಿನಲ್ಲಿ ಸುಮಾರು 1,100 ಕಿ.ಮೀ. ದೂರದಲ್ಲಿರುವ ಈ ದ್ವೀಪವು ಹಾರ್ಮುಜ್ ಜಲಸಂಧಿಯ ಮೇಲೆ ನಿಗಾ ಇಡಲು ಆಯಕಟ್ಟಿನ ಪ್ರದೇಶವಾಗಿದೆ.

ಜಾಗತಿಕ ತೈಲ ಸಾಗಣೆಯ ಪ್ರಮುಖ ಮಾರ್ಗವಾಗಿರುವ ಹಾರ್ಮುಜ್ ಜಲಸಂಧಿಯಲ್ಲಿ ಸಂಘರ್ಷ ತೀವ್ರಗೊಂಡಿರುವುದು ಅಂತಾರಾಷ್ಟ್ರೀಯ ಮಟ್ಟದಲ್ಲಿ ಆತಂಕಕ್ಕೆ ಕಾರಣವಾಗಿದೆ. ಸಂಘರ್ಷ ಮತ್ತಷ್ಟು ಉಲ್ಬಣಗೊಂಡರೆ ಜಾಗತಿ- ಕ ತೈಲ ಪೂರೈಕೆ ಸರಪಳಿ, ಇಂಧನ ಬೆಲೆ ಹಾಗೂ ಅಂತರರಾಷ್ಟ್ರೀಯ ವ್ಯಾಪಾರದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಹೀಗಾಗಿ ಜಾಗತಿಕ ಸಮುದಾಯವು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ.

## ಭಾರತೀಯ ನೌಕಾಪಡೆಗೆ 'ಐಎನ್‌ಎಸ್ ನಿಪುನ್' ಸೇರ್ಪಡೆ

ವಿಜಯ ದುಂಬಿ ಸುದ್ದಿ....

**ಮುಂಬೈ: ತ್ವರಿತ ಜಲಾಂತರ್ಗಾಮಿ ರಕ್ಷಣಾ ಸಾಮರ್ಥ್ಯ ಹೊಂದಿರುವ ಆಳ ಸಮುದ್ರ ಡೈವಿಂಗ್ ಹಡಗು 'ಐಎನ್‌ಎಸ್ ನಿಪುನ್' ಅನ್ನು ಇಂದು ಮುಂಬೈನಲ್ಲಿ ಭಾರತೀಯ ನೌಕಾಪಡೆಗೆ ನಿಯೋಜಿಸಲಾಯಿತು.**



ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ಅವರ ಸಮ್ಮುಖದಲ್ಲಿ ಐಎನ್‌ಎಸ್ ನಿಪುನ್ ಅನ್ನು ನೌಕಾಪಡೆಗೆ ಸೇರ್ಪಡೆಗೊಳಿಸಲಾಯಿತು. ಭಾರತೀಯ ನೌಕಾಪಡೆಗೆ ನಿಯೋಜಿಸಲಾದ ಎರಡನೇ ಆಳ ಸಮುದ್ರ ಡೈವಿಂಗ್ ಹಡಗು ಇದಾಗಿದೆ. ಹಿಂದೂಸ್ತಾನ್ ಶಿಪ್‌ಯಾರ್ಡ್ ಲಿಮಿಟೆಡ್ ನಿರ್ಮಿಸಿರುವ ಈ ಹಡಗು 119.4 ಮೀಟರ್ ಉದ್ದ ಹೊಂದಿದ್ದು, ಸುಮಾರು 10,500 ಟನ್ ಸಾಮರ್ಥ್ಯ ಹೊಂದಿದೆ. ಸಮುದ್ರದ 300 ಮೀಟರ್ ಆಳದವರೆಗೆ ಡೈವಿಂಗ್ ಕಾರ್ಯಾಚರಣೆಗಳನ್ನು ಬೆಂಬಲಿಸುವ ಸಾಮರ್ಥ್ಯವನ್ನು ಇದು ಹೊಂದಿದೆ.

# ರಾಹುಲ್ ಗಾಂಧಿ ವಿರುದ್ಧ ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಎಫ್‌ಐಆರ್ ದಾಖಲು

ವಿಜಯ ದುಂಬಿ ಸುದ್ದಿ....

**ನವದೆಹಲಿ: ಉತ್ತರಾಖಂಡದ ಹಲ್ದ್ವಾನಿಯಲ್ಲಿ ನಡೆದ ಶುದ್ಧೀಕರಣ ವಿವಾದ ಇದೀಗ ರಾಜಕೀಯ ಸ್ವರೂಪ ಪಡೆದುಕೊಂಡಿದ್ದು, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯಡಿ ಎಫ್‌ಐಆರ್ ದಾಖಲಾಗಿದೆ.**

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ್ದ ಸ್ಥಳದಲ್ಲಿ ನಡೆದ ಶುದ್ಧೀಕರಣದ ವಿವಾದದ ಹಿನ್ನೆಲೆಯಲ್ಲಿ ಈ ಬೆಳವಣಿಗೆ ನಡೆದಿದ್ದು, ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ರಾಜ- ಕೀಯ ವಾಕ್ಸಮರಕ್ಕೆ ಕಾರಣವಾಗಿದೆ. ಕೆಲ ದಿನಗಳ ಹಿಂದೆ ಹಲ್ದ್ವಾನಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ



ಮಲ್ಲಿಕಾರ್ಜುನ ಖರ್ಗೆ ಭಾಗವಹಿಸಿ ಭಾಷಣ ಮಾಡಿದ್ದರು. ಕಾರ್ಯಕ್ರಮ ಮುಗಿದ ಬಳಿಕ ಅವರು ತೆರಳಿದ ನಂತರ, ಅವರು ಕುಳಿತಿ- ದ್ದ ಹಾಗೂ ಕಾರ್ಯಕ್ರಮ ನಡೆದ ಸ್ಥಳದಲ್ಲಿ ಶುದ್ಧೀಕರಣದ ಧಾರ್ಮಿಕ ವಿಧಿವಿಧಾನಗಳನ್ನು ನಡೆಸಲಾಗಿದೆ ಎಂಬ ಆರೋಪ ಕೇಳಿಬಂದಿತ್ತು. ದಲಿತ ಸಮುದಾಯಕ್ಕೆ ಸೇರಿದ ಮಲ್ಲಿಕಾರ್ಜುನ ಖರ್ಗೆ ಅವರು ಕುಳಿತಿದ್ದ ಅಥವಾ ಸ್ಪರ್ಶಿಸಿದ್ದ ಸ್ಥಳವನ್ನು ಶುದ್ಧೀಕರಿಸಲಾಗಿದೆ ಎಂಬ ಆರೋಪ ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು.

ಘಟನೆಯನ್ನು ಖಂಡಿಸಿದ್ದ ರಾಹುಲ್ ಗಾಂಧಿ, ದಲಿತ ಸಮುದಾಯದ ನಾಯಕ ಹಾಗೂ ಸಂವಿಧಾನಿಕ ಹುದ್ದೆಯಲ್ಲಿರುವ ವ್ಯಕ್ತಿಗೆ ಮಾಡಿರುವ ಅವಮಾನವನ್ನು ಸಹಿಸಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು. ಈ ಕೃತ್ಯದ ಹಿಂದೆ ಇರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕು ಎಂದು ಆಗ್ರಹಿಸಿದ್ದರು. ಈ ಹೇಳಿಕೆಗಳ ಬೆನ್ನಲ್ಲೇ ಹಲ್ದ್ವಾನಿ ಪೊಲೀಸ್ ಠಾಣೆಯಲ್ಲಿ ರಾಹುಲ್ ಗಾಂಧಿ ವಿರುದ್ಧವೇ ಎಫ್‌ಐಆರ್ ದಾಖಲಾಗಿದೆ. ಸ್ಥಳೀಯ ನಿವಾಸಿಯೊಬ್ಬರು ನೀಡಿದ ದೂರಿನ ಆಧಾರದ ಮೇಲೆ ಭಾರತೀಯ ನ್ಯಾಯ ಸಂಹಿತೆ ಹಾಗೂ ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯ ವಿವಿಧ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಒಂದೆಡೆ ಮಲ್ಲಿಕಾರ್ಜುನ ಖರ್ಗೆ ಅವ- ರಿಗೆ ಅವಮಾನ ಮಾಡಲಾಗಿದೆ ಎಂಬ ಆರೋಪದ ವಿರುದ್ಧ ಕಾಂಗ್ರೆಸ್ ಆಕ್ರೋಶ ವ್ಯಕ್ತಪಡಿಸುತ್ತಿದ್ದರೆ, ಮತ್ತೊಂದೆಡೆ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಹುಲ್ ಗಾಂಧಿ ವಿರುದ್ಧವೇ ಎಫ್‌ಐಆರ್ ದಾಖಲಾಗಿರುವುದು ವಿವಾದಕ್ಕೆ ಮತ್ತಷ್ಟು ರಾಜಕೀಯ ತಿರುವು ನೀಡಿದೆ. ಹಲ್ದ್ವಾನಿ ಘಟನೆ ಇದೀಗ ರಾಜ- ಕೀಯ ಹಾಗೂ ಸಾಮಾಜಿಕವಾಗಿ ತೀವ್ರ ಚರ್ಚೆಗೆ ಗ್ರಾಸವಾಗಿದ್ದು, ಮುಂದಿನ ದಿನಗಳಲ್ಲಿ ರಾಷ್ಟ್ರಮಟ್ಟದಲ್ಲಿ ವಿವಾದ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದೆ.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಪೋಷಕರೇ ಎಚ್ಚರ : ರಾಜ್ಯದಲ್ಲಿ ಮಕ್ಕಳಲ್ಲಿ ಹೆಚ್ಚುತ್ತಿದೆ ಕಾಲು-ಬಾಯಿ ಬೇನೆ ಸೋಂಕು

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ರಾಜ್ಯದಲ್ಲಿ ಮಳೆಗಾಲದ ಪ್ರಭಾವ ಹಾಗೂ ಹವಾಮಾನ ವೈಪರೀತ್ಯದ ನಡುವೆ ಮಕ್ಕಳಲ್ಲಿ ವೈರಲ್ ಜ್ವರಗಳ ಹಾವಳಿ ಮುಂದುವ- ರಿದಿದ್ದು, ಇದರ ಬೆನ್ನಲ್ಲೇ ಕಾಲು-ಬಾಯಿ ಬೇನೆ (ಹ್ಯಾಂಡ್, ಫುಟ್ ಅಂಡ್ ಮೌತ್ ಡಿಸೀಸ್-ಎಚ್- ಎಫ್‌ಎಂಡಿ) ಸೋಂಕು ಹೆಚ್ಚುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.ವಿಶೇಷವಾಗಿ ಐದು ವರ್ಷದೊಳಗಿನ ಪ್ರೀ-ಸ್ಕೂಲ್ ಹಾಗೂ ನರ್ಸರಿ ಹಂತದ ಮಕ್ಕಳಲ್ಲಿ ಸೋಂಕು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದು, ಪೋಷಕರಲ್ಲಿ ಆತಂಕ ಮೂಡಿಸಿದೆ.**

ಸೋಂಕಿನ ಪ್ರಮುಖ ಲಕ್ಷಣಗಳು ಕಾಕ್ಸ್‌ಸಾಕಿ ವೈರಸ್ ಹಾಗೂ ಇತರ ಎಂಟೆರೋವೈರಸ್‌ಗಳಿಂದ ಹರಡುವ ಎಚ್- ಎಫ್‌ಎಂಡಿ ಸೋಂಕಿನಲ್ಲಿ ಆರಂಭದಲ್ಲಿ ಜ್ವರ ಕಾಣಿಸಿಕೊಳ್ಳುತ್ತದೆ. ಬಳಿಕ ಕೈ, ಕಾಲು ಹಾಗೂ ಬಾಯಿಯ ಒಳಭಾಗದಲ್ಲಿ ನೋವಿನಿಂದ ಕೂಡಿದ ಸಣ್ಣ ನೀರುಗುಳ್ಳೆಗಳು ಅಥವಾ ದದ್ದುಗಳು ಕಾಣಿಸಿಕೊಳ್ಳುತ್ತವೆ.ಬಾಯಿಯೊಳಗೆ ಗುಳ್ಳೆಗಳು ಮೂಡುವುದರಿಂದ ಮಕ್ಕಳಿಗೆ ನೀರು ಕುಡಿಯಲು, ಆಹಾರ ಸೇವಿಸಲು ಹಾಗೂ ಉಗುಳು ನುಂಗಲು ಕಷ್ಟವಾಗುತ್ತದೆ. ಇದರಿಂದ ನಿರ್ಜಲೀಕರಣದ ಅಪಾಯವೂ ಎದುರಾಗಬಹುದು. ಡೇಕೇರ್, ಪ್ಲೇಹೋಮ್ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳು ಒಟ್ಟಾಗಿ ಆಟವಾಡುವುದ- ರಿಂದ ಸೋಂಕು ವೇಗವಾಗಿ ಹರಡುವ ಸಾಧ್ಯತೆ ಇದೆ. ಸೋಂಕಿತ ಮಗುವಿನ ಲಾಲಾರಸ, ಮೂಗಿನ ಸ್ರಾವ ಹಾಗೂ ಗುಳ್ಳೆಗಳಲ್ಲಿರುವ ದ್ರವದ ಸಂಪರ್ಕದಿಂದಲೂ ಸೋಂಕು ಹರಡಬಹುದು.

ಮನೆಮದ್ದುಗಳ ಪ್ರಯೋಗ ಬೇಡ ಮಕ್ಕಳ ದೇಹದಲ್ಲಿ ಕಾಣಿಸಿಕೊಳ್ಳುವ ನೀರುಗುಳ್ಳೆಗಳಿಗೆ ಬೇವಿನ ಸೊಪ್ಪು, ಕೆಮಣ್ಣು ಅಥವಾ ಇತರ ಸಾಂಪ್ರದಾಯಿಕ ಮನೆಮದ್ದುಗಳನ್ನು ಹಚ್ಚಿ ಉಜ್ಜಬಾರದು. ಗುಳ್ಳೆಗಳನ್ನು ಬಲವಂತವಾಗಿ ಒಡೆಯುವುದರಿಂದ ಗಾಯವಾಗಿ ದ್ವಿತೀಯ ಬ್ಯಾಕ್ಟೀರಿಯಾ ಸೋಂಕಿನ ಅಪಾಯ ಹೆಚ್ಚಬಹುದು. ಜ್ವರ ಹಾಗೂ ಗುಳ್ಳೆಗಳು ಕಾಣಿಸಿಕೊಂಡ ತಕ್ಷಣ ವೈದ್ಯರ ಸಲಹೆಯಿಲ್ಲದೆ ಮೆಡಿಕಲ್ ಶಾಪ್‌ಗಳಿಂದ ಔಷಧಿ ಖರೀದಿಸಿ ನೀಡದೆ, ಮಕ್ಕಳ ತಜ್ಞರನ್ನು ಸಂಪರ್ಕಿಸುವುದು ಸೂಕ್ತ.ಎಚ್‌ಎಫ್‌ಎಂಡಿ ಸಾಮಾನ್ಯವಾಗಿ 7ರಿಂದ 10 ದಿನಗಳೊಳಗೆ



ಕಡಿಮೆಯಾಗುತ್ತದೆ. ಈ ಅವಧಿಯಲ್ಲಿ ಮಕ್ಕಳಿಗೆ ಸಾಕಷ್ಟು ದ್ರವಪದಾರ್ಥ, ಎಳನೀರು ಹಾಗೂ ಸುಲಭವಾಗಿ ಸೇವಿಸಬಹುದಾದ ಮೃದುವಾದ ಆಹಾರ ನೀಡುವುದು ಮುಖ್ಯ. ಜ್ವರ ಮತ್ತು ನೋವಿನ ನಿರ್ವಹಣೆಯನ್ನು ವೈದ್ಯರ ಸಲಹೆಯಂತೆ ಮಾಡಬೇಕು.

ಸೋಂಕು ಕಂಡರೆ ಶಾಲೆಗೆ ಕಳುಹಿಸದಿರುವುದು ಸೂಕ್ತ ಮಕ್ಕಳಲ್ಲಿ ನಿರಂತರ ಜ್ವರ, ಅತಿಯಾದ ಕಿರಿಕಿರಿ, ಬಾಯಿಯಲ್ಲಿ ಹುಣ್ಣುಗಳು ಹಾಗೂ ಕೈ-ಕಾಲುಗಳಲ್ಲಿ ಗುಳ್ಳೆಗಳು ಕಾಣಿಸಿಕೊಂಡರೆ ಪೋಷಕರು ಎಚ್ಚ- ರಿಕೆ ವಹಿಸಬೇಕು. ಸೋಂಕಿನ ಲಕ್ಷಣಗಳಿರುವ ಮಕ್ಕಳನ್ನು ಶಾಲೆ ಅಥವಾ ಡೇಕೇರ್‌ಗೆ ಕಳುಹಿಸದೆ ಪ್ರತ್ಯೇಕವಾಗಿರಿಸಿ ವೈದ್ಯಕೀಯ ಸಲಹೆ ಪಡೆಯಬೇಕು ಎಂದು ಆರೋಗ್ಯ ತಜ್ಞರು ಸೂಚಿಸಿದ್ದಾರೆ.

ಕರ್ನಾಟಕದಲ್ಲಿ ಹೊಸದಲ್ಲ ಕರ್ನಾಟಕದಲ್ಲಿ ಎಚ್‌ಎಫ್‌ಎಂಡಿ ಸೋಂಕು ಹೊಸ ಸಮಸ್ಯೆಯಲ್ಲ. 2022ರ ಏಪ್ರಿಲ್‌ನಿಂದ ಅಕ್ಟೋಬರ್‌ವರೆಗೆ ಸಂಗ್ರಹಿಸಿದ ಮಾದರಿಗಳ ಆಧ- ಾರದ ಮೇಲೆ ನಡೆದ ಆಣ್ವಿಕ ಅಧ್ಯಯನದಲ್ಲಿ 82 ಶಂಕಿತ ಪ್ರಕರಣಗಳ ಪೈಕಿ 55ರಲ್ಲಿ ಎಂಟೆರೋವೈರಸ್ ಪತ್ತೆಯಾಗಿತ್ತು. ಈ ಪೈಕಿ ಸುಮಾರು 65.4ರಷ್ಟು ಪ್ರಕರಣಗಳು ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಲ್ಲಿ ಕಂಡುಬಂದಿದ್ದವು. ಅಧ್ಯಯನದಲ್ಲಿ ಪತ್ತೆಯಾದ ವೈರಸ್‌ಗಳಲ್ಲಿ Cox- sackievirus A16 (CV-A16) ಪ್ರಮುಖವಾಗಿತ್ತು. ಕೆಲ ವಯಸ್ಕರಲ್ಲೂ ಸೋಂಕು ಕಂಡುಬಂದಿರುವುದ- ರಿಂದ ಎಚ್‌ಎಫ್‌ಎಂಡಿ ಕೇವಲ ಚಿಕ್ಕ ಮಕ್ಕಳಿಗೆ ಸೀಮಿತವಾಗಿಲ್ಲ ಎಂಬುದು ಗಮನಾರ್ಹ.

2024ರ ಬೆಂಗಳೂರಿನ ಏರಿಕೆ ಮತ್ತೆ ನೆನಪಿಗೆ 2024ರ ಮುಂಗಾರು ಅವಧಿಯಲ್ಲಿ ಬೆಂಗಳೂರಿನ ಮಕ್ಕಳ ಆಸ್ಪತ್ರೆಗಳಲ್ಲಿ ಎಚ್‌ಎಫ್‌ಎಂಡಿ ಪ್ರಕರಣಗಳ ಹೆಚ್ಚಳ ವರದಿಯಾಗಿತ್ತು. ತೇವಾಂಶ ಹೆಚ್ಚಿರುವ ಋತುಮಾನ, ಮಕ್ಕಳ ನಿಕಟ ಸಂಪರ್ಕ ಹಾಗೂ ಶಾಲೆ-ಡೇಕೇರ್‌ಗಳ ವಾತಾವರಣ ಸೋಂಕಿನ ಹರಡುವಿಕೆಗೆ ಅನುಕೂಲಕರವಾಗಬಹುದು ಎಂದು ವೈದ್ಯರು ತಿಳಿಸಿದ್ದರು.

2026ರ ಆಗಸ್ಟ್‌ನಲ್ಲಿಯೂ ಮಕ್ಕಳಲ್ಲಿ ಎಚ್‌ಎಫ್‌ಎಂಡಿ ಕುರಿತು ದೇಶದ ವಿವಿಧೆಡೆ ಜಾಗೃತಿ ಮೂಡಿಸಲಾಗುತ್ತಿದೆ. ಮುಂಗಾರು ಸಂದರ್ಭದಲ್ಲಿ ಚಿಕ್ಕ ಮಕ್ಕಳಲ್ಲಿ ಸೋಂಕು ಹರಡುವ ಸಾಧ್ಯತೆ ಹೆಚ್ಚಿರುವುದರಿಂದ ಲಕ್ಷಣಗಳನ್ನು ಗುರುತಿಸಿ, ಸೋಂಕು ತಡೆಯುವ ಕ್ರಮಗಳನ್ನು ಪಾಲಿಸುವಂತೆ ವೈದ್ಯಕೀಯ ತಜ್ಞರು ಸಲಹೆ ನೀಡಿದ್ದಾರೆ. ಮಕ್ಕಳಲ್ಲಿ ಗುಳ್ಳೆಗಳು ಕಂಡುಬಂದರೆ ಅವುಗಳನ್ನು ಒಡೆಯದೆ, ಸಾಕಷ್ಟು ದ್ರವಪದಾರ್ಥ ಹಾಗೂ ಮೃದುವಾದ ಆಹಾರ ನೀಡಬೇಕು. ಯಾವುದೇ ಔಷಧಿ ಅಥವಾ ಪೋಷಕಾಂಶವನ್ನು ವೈದ್ಯರ ಸಲಹೆಯಿಲ್ಲದೆ ನೀಡಬಾರದು ಎಂದು ತಜ್ಞರು ಎಚ್ಚರಿಸಿದ್ದಾರೆ.

VIJYA DUMBI KANNADA DAILY EDITED,PUBLISHED AND OWNED BY,VIJYA PRiNTED AT MANJESHA,U#74,4TH,MAIN,7TH,CROSS,NEARCHOWDESHARI TEMPALE KAVERINAGARA,MAHADEVAPURA,POST BANGALORU KARNATAKAPUBLISHED Hosapalya Byrasandra Modalakote Po , Nelamangala to bengaluru rurala Karnataka 562123 EDITOR VIJYA